ಸಂಪುಟ: 22, ಸಂಚಿಕೆ: 145, ಪುಟಗಳು: 8, ಬುಧವಾರ, 5 ಮಾರ್ಚ್ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines

**ಸುಭಾಷಿತ**

ನಲ್ನುಡಿಗಳಿಂದ ಎಲ್ಲ ಜೀವಿಗಳೂ ಆನಂದಿಸುತ್ತವೆ. ಆದ್ದರಿಂದ ಒಳ್ಳೆಯ ಮಾತುಗಳನ್ನೇ ಆಡೋಣ. ಮಾತಿಗೇನು ಬಡತನ?

**ಪಂಚಾಂಗ**

(ಬುಧವಾರ 5, ಮಾರ್ಚ್-2025)

- ಶ್ರೀ ಕ್ರೋಧಿ ನಾಮ ಸಂವತ್ಸರ
- ಉತ್ತರಾಯಣ, ಶಿಶಿರ ಋತು
- ಪಾಲ್ಗುಣ ಮಾಸ, ಶುಕ್ಲ ಪಕ್ಷ
- ವಾರ: ಬುಧವಾರ, ತಿಥಿ : ಷಷ್ಠಿ
- ನಕ್ಷತ್ರ: ಕೃತಿಕ
- ರಾಹುಕಾಲ: 12.36 ರಿಂದ 2.05
- ಗುಳಿಕಕಾಲ: 11.06 ರಿಂದ 12.36
- ಯಮಗಂಡಕಾಲ: 8.06 ರಿಂದ 9.36

## ಸಂಕ್ಷಿಪ್ತ ಸುದ್ದಿ

### ಪ್ರೇಯಸಿ ಕತ್ತು ಸೀಳಿ ಪ್ರಿಯಕರ ಆತ್ಮಹತ್ಯೆ

**ಬೆಳಗಾವಿ:** ಮದುವೆಗೆ ನಿರಾಕರಿಸಿದ್ದಕ್ಕೆ ಪಾಗಲ್ ಪ್ರೇಮಿಯೊಬ್ಬ ಪ್ರೇಯಸಿಯ ಕತ್ತು ಸೀಳಿ ಕೊಲೆ ಮಾಡಿ, ತಾನೂ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಳಗಾವಿ ಜಿಲ್ಲೆಯ ಶಹಾಪುರದ



ಗಲ್ಲಿಯಲ್ಲಿ ನಡೆದಿದೆ. ಯಳ್ಳೂರು ಗ್ರಾಮದ ಪ್ರಶಾಂತ ಯಲ್ಲಪ್ಪ ಕುಂಡೇಕರ (29) ಪ್ರೇಯಸಿ ಕೊಂದು ತಾನೂ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಪೇಂಟಿಂಗ್ ಕೆಲಸ ಮಾಡ್ತಿದ್ದ ಪ್ರಶಾಂತ್ ಒಂದೂವರೆ ವರ್ಷದಿಂದ ಹುಡುಗಿಯೊಬ್ಬಳನ್ನು ಪ್ರೀತಿಸುತ್ತಿದ್ದ. ಪ್ರಶಾಂತ್ ಯುವತಿಯನ್ನು ಮದುವೆಯಾಗುವಂತೆ ಒತ್ತಾಯಿಸಿದ್ದ. ಈ ವೇಳೆ ಯುವತಿಯ ತಾಯಿ, ಚೆನ್ನಾಗಿ ಕೆಲಸ ಮಾಡಿ, ಸಂಬಳ ಜಾಸ್ತಿ ತೆಗೆದುಕೋ ಎಂದು ಬುದ್ಧಿವಾದ ಹೇಳಿದ್ದರು. ಪುಟ 2

### ಕೆಪಿಎಸ್‌ಸಿ ಕಳ್ಳರ ಸಂತೆ



**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ)ದ ನೇಮಕಾತಿ ಕರ್ಮಕಾಂಡ ಪ್ರಕರಣವು ವಿಧಾನಮಂಡಲದ ಉಭಯ ಸದನಗಳಲ್ಲಿ ಮಂಗಳವಾರ ಪ್ರತಿಧ್ವನಿಸಿದ್ದು, ವಿಪಕ್ಷ ಬಿಜೆಪಿಯು ಕೆಪಿಎಸ್‌ಸಿಯದ್ದು ಎನ್ನಲಾದ ''ರೇಟ್ ಕಾರ್ಡ್' ಬಿಡುಗಡೆ ಮಾಡಿತು. ಕರ್ನಾಟಕ ಲೋಕಸೇವಾ ಆಯೋಗದಲ್ಲಿ (ಕೆಪಿಎಸ್‌ಸಿ) ವ್ಯಾಪಕ ಭ್ರಷ್ಟಾಚಾರ ಮತ್ತು ದೀರ್ಘಕಾಲಿಕ ಅಕ್ರಮಗಳನ್ನು ತಡೆಯಲು ವಿರೋಧ ಪಕ್ಷ ಬಿಜೆಪಿ ಮತ್ತು ಆಡಳಿತಾರೂಢ ಕಾಂಗ್ರೆಸ್ ಮುಂದಾಗಿವೆ. ಯಾವುದೇ ಪಕ್ಷ ಅಧಿಕಾರದಲ್ಲಿದ್ದರೂ, ಕೆಪಿಎಸ್ ಸಿಯಲ್ಲಿ ಅಧಿಕಾರಿಗಳ ನೇಮಕಾತಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುವಾಗ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿದೆ ಎಂಬ ಅಂಶವನ್ನು ಒಪ್ಪಿಕೊಂಡಿವೆ. ವಿರೋಧ ಪಕ್ಷದ ನಾಯಕ ಆರ್ ಅಶೋಕ ಅವರ ಪ್ರಶ್ನೆಗೆ ಉತ್ತರಿಸಿದ ಆರ್‌ಡಿಪಿಆರ್ ಮತ್ತು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ, ಕೆಪಿಎಸ್‌ಸಿಯನ್ನು ಸುಧಾರಿಸಲು ಸರ್ಕಾರ ಎರಡು ಸುತ್ತಿನ ಸಭೆಗಳನ್ನು ನಡೆಸಿದೆ ಎಂದು ಹೇಳಿದರು. ಪುಟ 2

ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿದ್ಧತೆಗೆ ಸೂಚನೆ

## ಹಕ್ಕಿಜ್ವರ: ಆರೋಗ್ಯ ಇಲಾಖೆ ಅಲರ್ಟ್



ಬೆಂಗಳೂರು: ಚಿಕ್ಕಬಳ್ಳಾಪುರ, ಬಳ್ಳಾರಿ ಜಿಲ್ಲೆಗಳ ನಂತರ ಇದೀಗ ಬೆಂಗಳೂರಿಗೂ ಹಕ್ಕಿಜ್ವರದ ಭೀತಿ ಕಾಡಲು ಶುರುವಾಗಿದೆ. ಪಕ್ಕದ ಜಿಲ್ಲೆ ಚಿಕ್ಕಬಳ್ಳಾಪುರದಲ್ಲಿ ಹಕ್ಕಿಜ್ವರ ಧೃಡಪಟ್ಟಿದ್ದು, ಆರೋಗ್ಯ ಇಲಾಖೆ ಹೈಅಲರ್ಟ್ ಆಗಿದೆ. ಹಕ್ಕಿಜ್ವರ ನಿಯಂತ್ರಣಕ್ಕೆ ಮಾರ್ಗಸೂಚಿ ಬಿಡುಗಡೆ ಮಾಡಿದೆ. ಇದೀಗ ಬೆಂಗಳೂರಿನ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿದ್ಧತೆಗೆ ಸೂಚನೆ ನೀಡಲಾಗಿದ್ದು, ಪ್ರತ್ಯೇಕ ವಾರ್ಡ್ ಮಾಡಲು ನಿರ್ದೇಶನ ನೀಡಲಾಗಿದೆ. ಪುಟ 2

## 3 ದಿನದ ಹಿಂದೆ ಹಸೆಮಣೆ ಏರಿದ್ದ ಯುವಕ ಸಾವಿನ ಮನೆ ಸೇರಿದ!



**ಮಂಡ್ಯ:** ಮೂರು ದಿನಗಳ ಹಿಂದೆಯಷ್ಟೇ ವಿವಾಹವಾಗಿದ್ದ ಯುವಕ ಹೃದಯಾಘಾತದಿಂದ ಮೃತಪಟ್ಟಿರುವ ಘಟನೆ ಕೆ.ಆರ್.ಪೇಟೆ ಪಟ್ಟಣದಲ್ಲಿ ನಡೆದಿದೆ. ಪುರಸಭೆ ಸದಸ್ಯ ಕೆ.ಸಿ.ಮಂಜುನಾಥ್ ಪುತ್ರ ಶಶಾಂಕ್ (28) ಸಾವು ಮೃತ ದುರ್ದೈವಿ. ಶಶಾಂಕ್ ಖಾಸಗಿ ಕಂಪನಿಯಲ್ಲಿ ಐಟಿ ಉದ್ಯೋಗಿಯಾಗಿದ್ದನು. ಜಾರ್ಖಂಡ್ ಮೂಲದ ಯುವತಿ ಅಪ್ಣಾರನ್ನು ಪ್ರೀತಿಸಿದ್ದರು. ಕಳೆದ ಭಾನುವಾರ ಮೈಸೂರಿನ ರೆಸಾರ್ಟ್ ಒಂದರಲ್ಲಿ ಮದುವೆ ನೆರವೇರಿತ್ತು. ಪುಟ 2

## ಬೆಂಗಳೂರಲ್ಲಿ ಕುಡಿಯುವ ನೀರು ಅನ್ಯ ಕೆಲಸಗಳಿಗೆ ಬಳಕೆ

# 20.85 ಲಕ್ಷ ರೂ. ದಂಡ

**ಬೆಂಗಳೂರು:** ಸಿಲಿಕಾನ್ ಸಿಟಿ ಮಂದಿಗೆ ಜಲಮಂಡಳಿ ಬಿಸಿ ಮುಟ್ಟಿಸಿದೆ. ಕುಡಿಯುವ ನೀರನ್ನು ಅನ್ಯಬಳಕೆ ಮಾಡಿ ನಿಯಮ ಉಲ್ಲಂಘಿಸಿದವರಿಗೆ ದಂಡದ ಬರೆ ಎಳೆದಿದೆ.

ಕುಡಿಯುವ ನೀರನ್ನ ಅನ್ಯ ಕೆಲಸಗಳಿಗೆ ಬಳಸಬಾರದು. ಹಾಗೆ ಮಾಡಿದರೆ ದಂಡ ಹಾಕುತ್ತೇವೆ ಎಂದು ಆದೇಶ ಮಾಡಿತ್ತು. ಆದೇಶವನ್ನೂ ಲೆಕ್ಕಿಸದೇ ಕುಡಿಯುವ ನೀರನ್ನ ಅನ್ಯ ಕಾರ್ಯಗಳಿಗೆ ಬಳಿಸಿದವರಿಗೆ ದಂಡ ಹಾಕಲಾಗಿದೆ. ಬೆಂಗಳೂರಿನ 417 ಜನರಿಗೆ ನೋಟಿಸ್ ನೀಡಿ ಜಲಮಂಡಳಿ ದಂಡ ಹಾಕಿದೆ. 417 ಜನರಿಗೆ 20.85 ಲಕ್ಷ ದಂಡ ಹಾಕಲಾಗಿದೆ. ಬೆಂಗಳೂರು ಪೂರ್ವ ಭಾಗದ ಜನರು ಹೆಚ್ಚು ನಿಯಮ ಉಲ್ಲಂಘನೆ ಮಾಡಿದ್ದಾರೆ.



**ಎಲ್ಲೆಲ್ಲಿ ಎಷ್ಟು ಕೇಸ್?**

1. ಬೆಂಗಳೂರು ಪೂರ್ವ ವಲಯ 105 ಕೇಸ್ ದಂಡ-4.25 ಲಕ್ಷ ರೂ.
2. ಬೆಂಗಳೂರು ಪಶ್ಚಿಮ ವಲಯ 111 ಕೇಸ್ ದಂಡ-5.55 ಲಕ್ಷ ರೂ.
3. ಬೆಂಗಳೂರು ಉತ್ತರ ವಲಯ 84 ಕೇಸ್ ದಂಡ-3.20 ಲಕ್ಷ ರೂ.
4. ಬೆಂಗಳೂರು ದಕ್ಷಿಣ ವಲಯ 115 ಕೇಸ್ ದಂಡ-5.70 ಲಕ್ಷ ರೂ.

ಸತೀಶ್ ಜಾರಕಿಹೊಳಿ ನಿವಾಸದಲ್ಲಿ ಶಾಸಕರ ಸಭೆ

## ಸಿದ್ಧವಾಯ್ತು ಬೇಡಿಕೆಗಳ ಪಟ್ಟಿ

**ಬೆಂಗಳೂರು:** ಸಚಿವ ಸತೀಶ್ ಜಾರಕಿಹೊಳಿ ನಿವಾಸದಲ್ಲಿ ಮಂಗಳವಾರ ರಾತ್ರಿ ಹಿಂದುಳಿದ ವರ್ಗಗಳ ಶಾಸಕರು ಸಭೆ ಸೇರಿ ಅನೇಕ ವಿಚಾರಗಳ ಬಗ್ಗೆ ಚರ್ಚೆ ನಡೆಸಿದ್ದಾರೆ. ಕರ್ನಾಟಕದಲ್ಲಿ ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ಸಿಎಂ ಹುದ್ದೆ ಕುರಿತ ಚರ್ಚೆ, ಬಣ ಜಗಳ ನಡೆಯುತ್ತಿರುವ ಬೆನ್ನಲ್ಲೇ ಈ ಸಭೆ ನಡೆದಿದೆ. ಸಭೆಯಲ್ಲಿ ಎಸ್‌ಸಿ, ಎಸ್‌ಟಿ ಸಮುದಾಯಗಳ ಶಾಸಕರು ಬೇಡಿಕೆ ಪಟ್ಟಿಯನ್ನೇ ಸಿದ್ಧಪಡಿಸಿದ್ದಾರೆ.



**ಬೇಡಿಕೆಗಳೇನು?**

ಎಸ್‌ಸಿ, ಎಸ್‌ಟಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡಿಕೊಳ್ಳುವುದು.
ಕರ್ನಾಟಕ ರಾಜ್ಯದಲ್ಲಿ ಒಂದು ಬುಡಕಟ್ಟು ವಿಶ್ವವಿದ್ಯಾಲಯ ಸ್ಥಾಪಿಸುವುದು. ಸುರಪುರ ತಾಲ್ಲೂಕಿನ ಬಂಡೊಳ್ಳಿಯಲ್ಲಿ ಇರುವ 17 ಎಕರೆ 21 ಗುಂಟೆ ಜಾಗದಲ್ಲಿ ಶೈಕ್ಷಣಿಕ ಸಂಸ್ಥೆಗಳನ್ನು ಪ್ರಾರಂಭಿಸಲು ಸುಮಾರು 25.00 ಕೋಟಿ ರೂ.ಗಳ ಅನುದಾನಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು. ಪುಟ 2

ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಹೇಳಿಕೆ

## ಬಿಎಸ್‌ವೈ ಲಿಂಗಾಯತರೇ ಅಲ್ಲ

**ಬೆಂಗಳೂರು:** ಮಾಜಿ ಸಿಎಂ ಯಡಿಯೂರಪ್ಪ ಲಿಂಗಾಯತರೇ ಅಲ್ಲ. ಅವರು ಬಳೆಗಾರ ಶೆಟ್ಟರು. ಅವರ ಹುಟ್ಟೂರಾದ ಮಂಡ್ಯದ ಬೂಕನಕೆರೆಗೆ ಹೋಗಿ ಕೇಳಿದರೆ, ನಿಜ ಗೊತ್ತಾಗುತ್ತದೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಹೇಳಿದರು.

ಸುದ್ದಿಗಾರರ ಜತೆ ಮಾತನಾಡಿದ ಅವರು, ವೀರೇಂದ್ರ ಪಾಟೀಲ, ಜೆ.ಎಚ್ .ಪಟೇಲ್ ನಂತರ ಸಮುದಾಯದಲ್ಲಿ ಯಾರೂ ನಾಯಕರು ಇರಲಿಲ್ಲ. ಜನರು ಅನಿವಾರ್ಯವಾಗಿ ಯಡಿಯೂರಪ್ಪ ಅವರನ್ನು ಒಪ್ಪಿದರು. ಆದರೆ ಅವರು ವೀರಶೈವರು ಮತ್ತು ಪಂಚಮಸಾಲಿಗಳಿಗೆ ಮೀಸಲಾತಿ ನೀಡದೆ, ಮೋಸ ಮಾಡಿದರು ಎಂದರು.

ಯಡಿಯೂರಪ್ಪ ಲಿಂಗಾಯತರ ಹೆಸರಿನಲ್ಲಿ ಬಿಜೆಪಿಯನ್ನು ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೆ. ಶಾಮನೂರು ಶಿವಶಂಕರಪ್ಪ ಕಾಂಗ್ರೆಸ್ ಅನ್ನು ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೆ. ನಮ್ಮ ಆಕ್ಷೇಪ ಇರುವುದು ಕುಟುಂಬ ರಾಜಕಾರಣದ ಬಗ್ಗೆ ಮಾತ್ರ. ನರೇಂದ್ರ ಮೋದಿ ಸಹ ಕುಟುಂಬ ರಾಜಕಾರಣ ಒಪ್ಪುವುದಿಲ್ಲ ಎಂದರು.





ರೇಣುಕಾಚಾರ್ಯ ಅವರು ತಮ್ಮನ್ನು ನಾಯಿ ನರಿ ಎಂದಿದ್ದರ ಬಗ್ಗೆ ಪ್ರತಿಕ್ರಿಯಿಸಿದ ಅವರು, ನಾಯಿಗಳಿಗೆ ನಿಯತ್ತು ಇದೆ. ಆದರೆ ಹಂದಿಗಳಿಗೆ ನಿಯತ್ತು ಇಲ್ಲ. ಯಡಿಯೂರಪ್ಪ ಮತ್ತು ವಿಜಯೇಂದ್ರ ಪರ ರೇಣುಕಾಚಾರ್ಯ ಇಂದು ಮಾತನಾಡುತ್ತಿದ್ದಾರೆ. ಆದರೆ, ಅಂದು ಅವರನ್ನು ಅಧಿಕಾರದಿಂದ ಕೆಳಗೆ ಇಳಿಸಲು ಗೋವಾಗೆ ಹೋಗಿ ಸಂಚು ಮಾಡಿದ್ದು ಇದೇ ರೇಣುಕಾಚಾರ್ಯ ಎಂದರು.

ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದ ಆಯ್ಕೆ ವಿಚಾರಕ್ಕೆ ಹೈಕಮಾಂಡ್ ಯಥಾಸ್ಥಿತಿ ಕಾಪಾಡಲು ತೀರ್ಮಾನಿಸಿದೆ. ಇದು ನಮ್ಮ ಶ್ರಮದ ಫಲ ಅಲ್ಲವೇ? ನಮ್ಮಲ್ಲಿ ಜನಪರ ವಿಚಾರಗಳಲ್ಲಿ ಭಿನ್ನಮತ ಇಲ್ಲ. ಕುಟುಂಬ ರಾಜಕಾರಣ, ಭ್ರಷ್ಟಾಚಾರದ ಕುಟುಂಬವನ್ನು ದೂರ ಇಡುವುದಷ್ಟೇ ನಮ್ಮ ಭಿನ್ನಮತಕ್ಕೆ ಕಾರಣ. ಕೆಪಿಎಸ್ಸಿ ವಿಚಾರದಲ್ಲಿ ನಾವು ಒಟ್ಟಾಗಿ ಹೋರಾಟ ಮಾಡುತ್ತಿದ್ದೇವೆ ಎಂದರು.

ಮುಡಾ ಹಗರಣ

## ಹಲವು ದಾಖಲೆಗಳನ್ನು ನೀಡಿದ್ದೇ ಕಾಂಗ್ರೆಸ್ ಪಕ್ಷದವರು!

**ಮೈಸೂರು:** 'ಮುಡಾ ಹಗರಣ ಸಂಬಂಧ ಕೇವಲ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧವಷ್ಟೇ ನನ್ನ ಹೋರಾಟ ಅಲ್ಲ. ಒಟ್ಟಾರೆಯಾಗಿ ಅಲ್ಲಿ ನಡೆದಿರುವ ಅಕ್ರಮಗಳ ವಿರುದ್ಧ ತನಿಯಾಗಬೇಕು. ಯಾರೆಲ್ಲ 50:50 ಅನುಪಾತದಲ್ಲಿ ನಿವೇಶನ ಪಡೆಯುವಲ್ಲಿ ಅಕ್ರಮದಲ್ಲಿ ಶಾಮೀಲಾಗಿದ್ದಾರೋ ಅವರೆಲ್ಲರ ವಿರುದ್ಧ ತನಿಖೆ ನಡೆದು ಕ್ರಮವಾಗಬೇಕು ಎಂಬುದೇ ನನ್ನ ಆಶಯ' ಎಂದು ಹಗರಣದ ಪ್ರಮುಖ ದೂರುದಾರ ಸ್ನೇಹಮಯಿ ಕೃಷ್ಣ ಹೇಳಿದ್ದಾರೆ. ಅಲ್ಲದೆ, ಮುಡಾ ಹಗರಣ ಸಂಬಂಧ ದಾಖಲೆಗಳನ್ನು ಒದಗಿಸಿದವರಲ್ಲಿ ಕಾಂಗ್ರೆಸ್‌ನವರು ಕೂಡ ಇದ್ದಾರೆ ಎಂಬ ಶಾಕಿಂಗ್ ಹೇಳಿಕೆ ನೀಡಿದ್ದಾರೆ. ನೇರವಾಗಿ ಎದುರು ಬಂದು ಹೋರಾಟ ಮಾಡಲಾಗದೆ ಅನೇಕರು ನನ್ನ ಮೂಲಕ ಹೋರಾಟ ಮಾಡುತ್ತಿದ್ದಾರೆ. ಹಲವಾರು ದಾಖಲೆಗಳನ್ನು ಕಾಂಗ್ರೆಸ್ ಮುಖಂಡರೇ ತಂದುಕೊಟ್ಟಿದ್ದಾರೆ ಎಂದು ಅವರು ಹೇಳಿದ್ದಾರೆ.



## ಡಿಕೆಶಿ ಬಗ್ಗೆ ನೊಣವಿನಕೆರೆ ಅಜ್ಜಯ್ಯ ಸ್ಫೋಟಕ ಭವಿಷ್ಯ!

**ಯಾದಗಿರಿ:** ಜಿಲ್ಲೆಯಲ್ಲಿ ನೊಣವಿನಕೆರೆ ಅಜ್ಜಯ್ಯ ಸ್ವಾಮೀಜಿ ಅವರು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರಿಗೆ ಮುಖ್ಯಮಂತ್ರಿಯಾಗುವ ಯೋಗವಿದೆ ಎಂದು ಸ್ಫೋಟಕ ಭವಿಷ್ಯ ನುಡಿದಿದ್ದಾರೆ. ಯಾದಗಿರಿ ತಾಲೂಕಿನ ಅಬ್ಬೆತುಮಕೂರಿನ ವಿಶ್ವಾರಾಧ್ಯರ ಮಠದಲ್ಲಿ ಮಾತನಾಡಿದ ಅವರು, ರೈತರ ಆಸೆ ಮತ್ತು ಶ್ರೀಮಠದ ಆಶೀರ್ವಾದದಿಂದ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗುತ್ತಾರೆ ಎಂದು ಹೇಳಿದ್ದಾರೆ.

ಎಲ್ಲರ ಆಸೆ ಡಿ.ಕೆ. ಶಿವಕುಮಾರ್ ಸಿಎಂ ಆಗಬೇಕೆಂಬುದಿದೆ. ಎಲ್ಲಾ ಜನರ ಸಂಕಲ್ಪ ಹಾಗೂ ಶ್ರೀಮಠದ ಆಶೀರ್ವಾದದಿಂದ ಒಂದು ದಿನ ಸಿಎಂ ಆಗ್ತಾರೆ. ಯಾವ ದಿನ ಸಿಎಂ ಆಗ್ತಾರೆ ಅಂತ ಹೇಳೊಕೆ ಆಗಲ್ಲ. ನಾನು ಕೂಡಾ ಅಬ್ಬೆತೂಮಕೂರ ವಿಶ್ವಾರಾಧ್ಯರ ಗದ್ದುಗೆಗೂ ಬಂದಿನಿ, ಅವರ ಆಶೀರ್ವಾದವೂ ಡಿಕೆಶಿಗೆ ಸಿಗಲಿ. ಶ್ರೀ ಶೈಲ ಜಗದ್ಗುರುಗಳು ಬಂದಿದ್ದಾರೆ, ಆ ಪರಮಾತ್ಮನ ಆಶೀರ್ವಾದವೂ ಡಿಕೆಶಿಗೆ ಸಿಗಲಿ, ಎಂದು ಅಜ್ಜಯ್ಯ ಸ್ವಾಮೀಜಿ ಪ್ರಾರ್ಥಿಸಿದ್ದಾರೆ.

ಶೀಘ್ರದಲ್ಲೇ ಡಿಕೆ ಶಿವಕುಮಾರ್ ರಾಜಾ ಪ್ರತ್ಯಕ್ಷ ದೇವರಾಗಲಿ. ಜನರ ಸಂಕಲ್ಪದಂತೆ ಮುಖ್ಯಮಂತ್ರಿ ಆಗ್ತಾರೆ ಎಂದು ಅಬ್ಬೆತುಮಕೂರಿನ ವಿಶ್ವಾರಾಧ್ಯರ ಮಠದಲ್ಲಿ ಅಜ್ಜಯ್ಯ ಸ್ವಾಮಿ ಭವಿಷ್ಯ ನುಡಿದರು.





### ಇತ್ತೀಚೆಗೆ ಭೈರವಿ ಅಮ್ಮ ಭವಿಷ್ಯ

**ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಚರ್ಚೆ ದಿನೇ ದಿನೇ ಜೋರಾಗ್ತಾನೆ ಇದೆ. ಈ ನಡುವೆ ಅನೇಕ ಸ್ವಾಮೀಜಿಗಳು, ಮಠಾಧೀಶರು ಕೂಡ ಡಿಕೆ ಶಿವಕುಮಾರ್ ಸಿಎಂ ಆಗ್ತಾರೆ ಎಂದು ಭವಿಷ್ಯ ನುಡಿಯುತ್ತಿದ್ದಾರೆ. ಡಿಕೆ ಶಿವಕುಮಾರ್ ಕೂಡ ದಿನೇ ದಿನೇ ಒಂದೊಂದು ದೇವಸ್ಥಾನಗಳಿಗೆ ಭೇಟಿ ನೀಡುತ್ತಾ ದೇವರ ಮೊರೆ ಹೋಗಿದ್ದಾರೆ. ಈ ನಡುವೆ ಭೈರವಿ ಅಮ್ಮನವರು ಕೂಡ ಸಿಎಂ ಭದಲಾವಣೆಯ ಕುರಿತು ಸ್ಫೋಟಕ ಭವಿಷ್ಯ ನುಡಿದಿದ್ದಾರೆ.**

### 'ನನ್ನ ಮಾತು ಯಾವತ್ತೂ ಸುಳ್ಳಾಗಲ್ಲ'

**ಹುಬ್ಬಳ್ಳಿ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಭೈರವಿ ಅಮ್ಮನವರು ಡಿಕೆ ಶಿವಕುಮಾರ್ ಸಿಎಂ ಆಗ್ತಾರೆ. ಆ ಕಾಲ ನಾಳೆನೇ ಬರಬಹುದು. ಇದೇ ಅವಧಿಯಲ್ಲಿ ಡಿಕೆ ಶಿವಕುಮಾರ್ ಸಿಎಂ ಆಗೋದು ಗ್ಯಾರಂಟಿ ಎಂದು ಭೈರವಿ ಅಮ್ಮನವರು ಸ್ಫೋಟಕ ಭವಿಷ್ಯ ನುಡಿದಿದ್ದರು. ನನ್ನ ಮಾತು ಯಾವತ್ತೂ ಸುಳ್ಳಾಗಲ್ಲ. ಇಲ್ಲಿಯತನಕ ಸುಳ್ಳು ಆಗಿಲ್ಲ, ಸುಳ್ಳು ಆಗೋದೂ ಇಲ್ಲ. ನಾನು ಮೂರು ವರ್ಷದ ಹಿಂದೆ ಡಿಕೆ ಶಿವಕುಮಾರ್ ಮನೆಗೆ ಹೋಗಿದ್ದೆ. ಡಿಕೆ ಶಿವಕುಮಾರ್ ನನ್ನ ಕರೆದಿದ್ರು. ಮುಂದೆ ಏನಾಗುತ್ತೆ ಅಂತಾ ಕೇಳಿದ್ರು, ಏನು ಆಗಬೇಕು ಅಂತಾ ಕೇಳಿದೆ. ಮುಂದಿನ ಕಥೆ ಏನು ಅಂತಾ ಕೇಳಿದರು. ಯಾರದೋ ದುಡ್ಡು ಎಲ್ಲಮ್ಮನ ಜಾತ್ರೆ ಅಂತಾ ಹೇಳಿದ್ದೆ. ನೀನು ದುಡಿದ ದುಡ್ಡು, ಇನ್ಯಾವನೋ ತಿಂದು ಗುಂಡಾಗ್ತಾನೆ ಅನ್ನೋದು ಅದರ ಅರ್ಥ. ಸತ್ಯ ಆಯ್ತೋ ಇಲ್ವೋ ಎಂದರು. ಇನ್ನು ಸಿಎಂ ಬದಲಾವಣೆ ವಿಚಾರವಾಗಿ ಕೋಡಿ ಮಠದ ಸ್ವಾಮೀಜಿಗಳು ಕೂಡ ಭವಿಷ್ಯ ನುಡಿದಿದ್ದರು. ಯಾದಗಿರಿಯಲ್ಲಿ ಭವಿಷ್ಯ ನುಡಿದಿದ್ದ ಸ್ವಾಮೀಜಿ, ಹಾಲುಮತ ಸಮಾಜವು ಪ್ರಾಚೀನ ಕಾಲದಿಂದ ದೈವರಾಧನೆ ಮಾಡುವ ಸಮಾಜವಾಗಿದೆ. ಹಾಲು ಕೆಟ್ಟರು ಹಾಲುಮತ ಸಮಾಜ ಕೆಡದು, ಹಕ್ಕ ಬುಕ್ಕರು ವಿಜಯನಗರ ಸಾಮ್ರಾಜ್ಯ ಕಟ್ಟಿದರು. ಹಾಲುಮತ ಸಮಾಜದವರಲ್ಲಿ ರಾಜ್ಯದ ಅಧಿಕಾರವಿದೆ. ಸಿಎಂ ಕುರ್ಚಿಯಿಂದ ಬಿಡಿಸುವದು ಅಷ್ಟು ಸುಲಭವಲ್ಲ. ಸಿಎಂ ಸಿದ್ದರಾಮಯ್ಯ ಅವರು ಅವರಾಗೆ ಸಿಎಂ ಸ್ಥಾನ ಬಿಡಬೇಕು ಹೊರತು, ನೀವು ಬಿಡಿಸಿಕೊಳ್ಳುವುದು ಅಷ್ಟು ಸುಲಭವಲ್ಲ. ಮುಂದೆ ಏನಾಗುತ್ತೆ ಅಂತ ಯುಗಾದಿ ಆದ ಮೇಲೆ ಹೇಳುತ್ತೇನೆ ಎಂದು ಸ್ಫೋಟಕ ಭವಿಷ್ಯ ನುಡಿದಿದ್ದಾರೆ.**

ನೆಲಮಂಗಲ ಪೊಲೀಸರಿಂದ ತಪ್ಪಿಸಿಕೊಂಡು ಮಣಿಪಾಲ್ ಪೊಲೀಸರಿಗೆ

## ಸಿಕ್ಕಿಬಿದ್ದ ಕ್ರಿಮಿನಲ್!



**ಉಡುಪಿ:** ಪರಾರಿಯಾಗಲು ಯತ್ನಿಸಿದ ಗರುಡ ಗ್ಯಾಂಗ್‌ನ ಸದಸ್ಯನನ್ನು ಸಿನಿಮೀಯ ಶೈಲಿಯಲ್ಲಿ ಮಣಿಪಾಲ್ ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ಗರುಡ ಗ್ಯಾಂಗ್‌ನ ಕುಖ್ಯಾತ ಸದಸ್ಯ ಇಸಾಕ್ ಎಂದು ಗುರುತಿಸಲಾಗಿದೆ. ಆತ ಪೊಲೀಸರನ್ನು ನೋಡಿ ಕಾರಿನಲ್ಲಿ ತಪ್ಪಿಸಿಕೊಳ್ಳಲು ಯತ್ನಿಸಿದ್ದಾನೆ. ಈ ವೇಳೆ, ಜಿಲ್ಲಾಧಿಕಾರಿ ಕಚೇರಿ ರಸ್ತೆಯಲ್ಲಿ ನಾಲ್ಕು ಕಾರು ಹಾಗೂ ಒಂದು ದ್ವಿಚಕ್ರ ವಾಹನಕ್ಕೆ ಆರೋಪಿಯ ಕಾರು ಡಿಕ್ಕಿಯಾಗಿದೆ. ಪ್ರಕರಣವೊಂದರ ಸಂಬಂಧ ಆರೋಪಿಯನ್ನು ಬಂಧಿಸಲು ನೆಲಮಂಗಲ ಪೊಲೀಸರು ಬಂದಿದ್ದರು. ಪೊಲೀಸರನ್ನು ಕಂಡು ಕಾರಿನಲ್ಲಿ ಪರಾರಿಯಾಗಲು ಆರೋಪಿ ಯತ್ನಿಸಿದ್ದಾನೆ. ಆರೋಪಿಯನ್ನ ಬೆಂಬಿಡದೆ ಚೇಸ್ ಮಾಡಿದ ನೆಲಮಂಗಲ ಪೊಲೀಸರು, ಮಣಿಪಾಲ್ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಮಣಿಪಾಲ್ ಪೊಲೀಸ್ ಇನ್‌ಸ್ಪೆಕ್ಟರ್ ದೇವರಾಜ್, ಆರೋಪಿಯನ್ನು ಚೇಸ್ ಮಾಡಿ ಮಣ್ಣಪಳ್ಳದ ಬಳಿ ಬಂಧಿಸಿದ್ದಾರೆ. ಕಾರಿನಲ್ಲಿ ಆರೋಪಿಯ ಜೊತೆ ಓರ್ವ ಯುವತಿ ಪತ್ತೆಯಾಗಿದ್ದಾಳೆ. ಮಣಿಪಾಲ್ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ.

## ಶೈಕ್ಷಣಿಕ, ಸಂಶೋಧನಾ ಭವನ ಕಟ್ಟಡಗಳ ಶಂಕುಸ್ಥಾಪನೆ

**ಬೆಂಗಳೂರು:** ಜ್ಞಾನಭಾರತಿ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ಭವನ ಹಾಗೂ ಸಂಶೋಧನಾ ಭವನ ಕಟ್ಟಡಗಳ ಶಂಕುಸ್ಥಾಪನೆ ಸಂದರ್ಭ ಡಿಸಿಎಂ ಡಿ.ಕೆ ಶಿವಕುಮಾರ್ ಮತ್ತು ಶಾಸಕ ಮುನಿರತ್ನ ಹಾರೆ ಹಿಡಿದು ಗುದ್ದಲಿ ಪೂಜೆ ಮಾಡಿದ್ದಾರೆ.

ಜ್ಞಾನಭಾರತಿ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಪ್ರಧಾನ ಮಂತ್ರಿ ಉಚ್ಚತರ ಶಿಕ್ಷಾ ಅಭಿಯಾನ ಯೋಜನೆಯಡಿಯಲ್ಲಿ ಮಂಜೂರಾಗಿರುವ ಶೈಕ್ಷಣಿಕ ಭವನ ಹಾಗೂ ಸಂಶೋಧನಾ ಭವನ ಕಟ್ಟಡಗಳ ಶಂಕುಸ್ಥಾಪನೆ ನಡೆಯಿತು.

ಕಾರ್ಯಕ್ರಮದಲ್ಲಿ ರಾಜರಾಜೇಶ್ವರಿನಗರ ಶಾಸಕ ಮುನಿರತ್ನ ಅಧ್ಯಕ್ಷತೆ ವಹಿಸಿದ್ದು, ಶಂಕುಸ್ಥಾಪನೆ ನೆರವೇರಿಸಲು ಡಿಕೆಶಿ ಅವರನ್ನ ಆಹ್ವಾನಿಸಿದ್ದರು. ಈ ವೇಳೆ ಇಬ್ಬರು ಸೇರಿ ಶಂಕುಸ್ಥಾಪನೆ ಮಾಡಿದರು. ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ.ಸುಧಾಕರ್ ಉಪಸ್ಥಿತರಿದ್ದರು. ಇತ್ತೀಚಿನ ದಿನಗಳಲ್ಲಿ ಡಿಕೆ ಬ್ರದರ್ಸ್ ಮತ್ತು ಮುನಿರತ್ನ ನಡುವೆ ರಾಜಕೀಯ ಜಟಾಪಟಿ ಜೋರಾಗಿತ್ತು. ಇದೀಗ ಇಬ್ಬರು ಸೇರಿ ಗುದ್ದಲಿ ಪೂಜೆ ಮಾಡಿರುವುದು ನಾನಾ ಚರ್ಚೆಗೆ ಗ್ರಾಸವಾಗಿದೆ.



## ಬಿಜೆಪಿ ಅವಧಿಯಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಅಕ್ರಮ ತನಿಖೆ ಮಾಡಿ

ಬೆಂಗಳೂರು: ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ದೊಡ್ಡ ಅಕ್ರಮವಾಗಿದೆ. ಬಿಜೆಪಿ ಅವಧಿಯಲ್ಲಿ ಅಕ್ರಮ ಆಗಿದ್ದು, ತನಿಖೆ ಮಾಡಿಸುವಂತೆ ಕಾಂಗ್ರೆಸ್ ಸದಸ್ಯ ನಾಗರಾಜ್ ಯಾದವ್ ಆಗ್ರಹ ಮಾಡಿದರು. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಪ್ರಶ್ನೆ ಕೇಳಿದ ಅವರು, ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಅಕ್ರಮ ನಡೆದಿದೆ. ಸಚಿವರು ಜನವರಿಯಲ್ಲಿ ಸಭೆ ಮಾಡಿದ್ರು. ಅ ಸಭೆಯಲ್ಲಿ ಅಕ್ರಮ ಆಗಿದೆ ಅಂತ ಹೇಳಿದ್ದಾರೆ. ಇದಕ್ಕಾಗಿ ಒಂದು ಕಮಿಟಿ ರಚನೆ ಮಾಡೋದಾಗಿ ಹೇಳಿದ್ದಾರೆ. ಪ್ರತಿ ಸ್ಮಾರ್ಟ್ ಸಿಟಿಗೆ ಒಂದು ಸಾವಿರ ಕೋಟಿ ಹಣ ಖರ್ಚು ಮಾಡ್ತಾರೆ. ಈ ಯೋಜನೆಯಲ್ಲಿ ಅಕ್ರಮ ಆಗಿದೆ. ಈ ಬಗ್ಗೆ ಸರ್ಕಾರ ಕ್ರಮ ವಹಿಸಬೇಕು. ಬೆಳಗಾವಿಯಲ್ಲಿ ಸ್ಮಾರ್ಟ್ ಸಿಟಿಯಲ್ಲಿ ಅಕ್ರಮವಾಗಿದೆ. ಈ ಬಗ್ಗೆ ತನಿಖೆ ಆಗಬೇಕು ಎಂದರು. ಬಿಜೆಪಿ ಅವಧಿಯಲ್ಲಿ ಅಕ್ರಮವಾಗಿದೆ. ಈ ಬಗ್ಗೆ ತನಿಖೆ ಆಗಬೇಕು. ಅರ್ಧ ಗಂಟೆಗೆ ಚರ್ಚೆಗೆ ಅವಕಾಶ ಕೊಡಬೇಕು ಎಂದು ಕೇಳಿದರು. ಇದಕ್ಕೆ ಸಚಿವ ಭೈರತಿ ಸುರೇಶ್ ಉತ್ತರ ನೀಡಿ, ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಯಾವುದೇ ಅಕ್ರಮವಾಗಿಲ್ಲ. 7 ನಗರಗಳ ಸ್ಮಾರ್ಟ್ ಸಿಟಿ ಯೋಜನೆಗೆ ಕೇಂದ್ರ–ರಾಜ್ಯ ಸರ್ಕಾರದಿಂದ ಒಟ್ಟು 6854.5 ಕೋಟಿ ಬಿಡುಗಡೆ ಆಗಿದೆ. ಇದರಲ್ಲಿ 6472.08 ಕೋಟಿ ಖರ್ಚಾಗಿದೆ ಎಂದು ಲಿಖಿತ ಉತ್ತರ ಕೊಟ್ಟರು. ಪ್ರಶ್ನೆ ಕೇಳಿದಾಗ ನಾಗರಾಜ್ ಯಾದವ್ ಏರುಧ್ವನಿಯಲ್ಲಿ ಮಾತಾಡುತ್ತಿದ್ದರಿಂದ, ಸಭಾಪತಿ ಮಾತನ್ನ ಕೇಳದ ಹಿನ್ನೆಲೆ ಸಚಿವರು ಉತ್ತರ ಕೊಡಲು ಬಿಡದೇ ಅರ್ಧ ಗಂಟೆ ಚರ್ಚೆಗೆ ಕೊಡೋದಾಗಿ ಸಭಾಪತಿಗಳು ತಿಳಿಸಿದರು.

### ವಿಧಾನಸಭೆ ಪ್ರಶ್ನೋತ್ತರ ಕಲಾಪದಲ್ಲಿ ಉಪಮುಖ್ಯಮಂತ್ರಿ ಆಕ್ರೋಶ

# ರಾತ್ರಿ 7 ಗಂಟೆ ಮೇಲೆ ದಕ್ಷಿಣ ಕನ್ನಡ ಜಿಲ್ಲೆ ಡೆಡ್: ಡಿಕೆಶಿ

**ಬೆಂಗಳೂರು:** ರಾಜ್ಯದ ಕರಾವಳಿ ಭಾಗದಲ್ಲಿ ಆರೋಗ್ಯ, ಶೈಕ್ಷಣಿಕ, ಧಾರ್ಮಿಕ ಹಾಗೂ ವಾಣಿಜ್ಯ ಪ್ರವಾಸೋದ್ಯಮಕ್ಕೆ ಹೆಚ್ಚಿನ ಅವಕಾಶಗಳಿವೆ. ಹೀಗಾಗಿ ಈ ಭಾಗದ ಎಲ್ಲಾ ಶಾಸಕರ ಜೊತೆಗೆ ನಾನು ಹಾಗೂ ಪ್ರವಾಸೋದ್ಯಮ ಸಚಿವರು ಪ್ರತ್ಯೇಕವಾಗಿ ಸಭೆ ಮಾಡಿ ಎಲ್ಲರ ಅಭಿಪ್ರಾಯ ಸಂಗ್ರಹಿಸಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ವಿಧಾನಸಭೆ ಪ್ರಶ್ನೋತ್ತರ ಕಲಾಪದಲ್ಲಿ ಶಿವಕುಮಾರ್ ಅವರು ಮಂಗಳವಾರ ಮಾತನಾಡಿದರು. ಬಿಜೆಪಿ ಶಾಸಕ ಗುರುರಾಜಶೆಟ್ಟಿ ಗಂಟಿಹೊಳೆ ಅವರು ರಾಜ್ಯ ಪ್ರವಾಸೋದ್ಯಮ ನೀತಿ ವಿಚಾರವಾಗಿ ಕರಾವಳಿ ಭಾಗವನ್ನು ವಿಶೇಷವಾಗಿ ಪರಿಗಣಿಸಬೇಕು ಎಂದು ಕೇಳಿದಾಗ ಪ್ರವಾಸೋದ್ಯಮ ಸಚಿವರು ಈ ಬಗ್ಗೆ ನಾವು ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಈ ವೇಳೆ ಬಿಜೆಪಿ ಶಾಸಕ ಹರೀಶ್ ಪೂಂಜ ಅವರು ಕರಾವಳಿ ಭಾಗದಲ್ಲಿ ಧಾರ್ಮಿಕ ಕೇಂದ್ರಗಳಿಗೆ ಬರುವ ಜನರನ್ನು ಇತರೇ ಪ್ರವಾಸೋದ್ಯಮ ಸ್ಥಳಗಳಿಗೆ ಆಕರ್ಷಿಸುವಂತೆ ಕ್ರಮಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಿಕೆಶಿ, ಮಂಗಳೂರು ಹಾಗೂ ಕರಾವಳಿ ಭಾಗದಲ್ಲಿ ಬಹುತೇಕ ಯುವಕರು ಗೆದ್ದು ಶಾಸಕರಾಗಿದ್ದಾರೆ. ರಾಜ್ಯದಲ್ಲಿ ಆರೋಗ್ಯ ಪ್ರವಾಸೋದ್ಯಮ, ಧಾರ್ಮಿಕ ಪ್ರವಾಸೋದ್ಯಮ, ವಾಣಿಜ್ಯೋದ್ಯಮ ಸೇರಿದಂತೆ ದೊಡ್ಡ ಅವಕಾಶ ಕರಾವಳಿ ಭಾಗದಲ್ಲಿದೆ. ಹೀಗಾಗಿ ನಮ್ಮ ಸಚಿವರಾದ ಹೆಚ್.ಕೆ ಪಾಟೀಲ್ ಅವರು ದೊಡ್ಡ ಕನಸು ಕಂಡಿದ್ದು ನಾವು ಈ ಬಗ್ಗೆ ಸಾಕಷ್ಟು ಚರ್ಚೆ ಮಾಡಿದ್ದೇವೆ. ಈ ಸಂದರ್ಭದಲ್ಲಿ ಈ ಭಾಗದ ಶಾಸಕರ ಸಭೆ ಕರೆದು ಮಾತನಾಡಬೇಕಿದೆ. ರಾತ್ರಿ 7–8 ಗಂಟೆಯ ಮೇಲೆ ಈ ಕರಾವಳಿ ಭಾಗ ಸ್ಥಬ್ಧವಾಗುತ್ತದೆ. ಯಾವುದೇ ಕಾರ್ಯಚಟುವಟಿಕೆ ಇರುವುದಿಲ್ಲ. ಧಾರ್ಮಿಕವಾದ ಭಜನೆ, ಬಯಲಾಟ ಹೊರತಾಗಿ ಬೇರೆ ಯಾವುದೇ ಚಟುವಟಿಕೆ ಇರುವುದಿಲ್ಲ. ಈ ವಿಚಾರವಾಗಿ ಅಲ್ಲಿನ ಶಾಸಕರೇ ಕೂತು ಚರ್ಚೆ ಮಾಡಿ ಸರ್ಕಾರಕ್ಕೆ ಪ್ರಸ್ತಾವನೆ ನೀಡಬೇಕು. ಕಳೆದ ಕೆಲವು ವರ್ಷಗಳಿಂದ ಈ ಭಾಗದಲ್ಲಿ ಮಕ್ಕಳು ಶಾಲಾ ಕಾಲೇಜುಗಳಿಗೆ ಸೇರ್ಪಡೆಯಾಗುವ ಪ್ರಮಾಣವೂ ಕುಸಿಯುತ್ತಿದೆ. ಮೆಡಿಕಲ್ ಹಾಗೂ ಇಂಜಿನಿಯರಿಂಗ್ ಕಾಲೇಜು ನಡೆಸುವವರು ಈ ವಿಚಾರವಾಗಿ ನಮ್ಮ ಬಳಿ ಚರ್ಚೆ ಮಾಡುತ್ತಿದ್ದಾರೆ ಎಂದರು.

ಈ ಮಧ್ಯೆ ರಾತ್ರಿ 8ರ ನಂತರ ಏನು ಮಾಡಬೇಕು ಎಂದು ನೀವೇ ಸಲಹೆ ನೀಡಿ ಎಂದು ಶಾಸಕ ಅರವಿಂದ್ ಬೆಲ್ಲದ್ ಅವರು ಕೇಳಿದರು. ಅದಕ್ಕೆ ಪ್ರತಿಕ್ರಿಯಿಸಿದ ಶಿವಕುಮಾರ್ ಅವರು, ರಾತ್ರಿ 7–8 ಗಂಟೆ ನಂತರ ಮಂಗಳೂರು ಸ್ಥಬ್ಧವಾಗಿದೆ ಎಂದರೆ ಮಂಗಳೂರಿನ ಜನ ಹೆಚ್ಚಾಗಿ ಮನೆಯಿಂದಾಚೆ ಬರುವುದಿಲ್ಲ. ಹೀಗಾದರೆ ಯಾವ ಆರ್ಥಿಕ ವಹಿವಾಟು ನಡೆಯುತ್ತದೆ. ಎಸ್.ಎಂ ಕೃಷ್ಣ ಅವರ ಕಾಲದಲ್ಲಿ ಕರಾವಳಿ ಭಾಗದಲ್ಲಿ ಐಟಿಬಿಟಿ ಸ್ಥಾಪಿಸಲು ಪ್ರಸ್ತಾವನೆ ನೀಡಿತು. ಆದರೆ ಅಲ್ಲಿ ಒಂದೇ ಒಂದು ಕಾಂಪ್ಲೆಕ್ಸ್ ಕೂಡ ಇರಲಿಲ್ಲ. ಈಗ ಮೂರೋ, ನಾಲ್ಕೋ ತಲೆ ಎತ್ತುತ್ತಿವೆ. ರಾಜ್ಯದಲ್ಲಿ ಅತಿ ಹೆಚ್ಚು ಇಂಜಿನಿಯರಿಂಗ್ ಕಾಲೇಜು, ಮೆಡಿಕಲ್ ಕಾಲೇಜು ಇರುವುದೆಲ್ಲ ಅಲ್ಲೇ. ಅಲ್ಲಿರುವ ಪ್ರತಿಭೆಗಳೆಲ್ಲವೂ ಬೆಂಗಳೂರು, ಮುಂಬೈ ಹಾಗೂ ಹೊರದೇಶಗಳಿಗೆ ಹೋಗುತ್ತಿದ್ದಾರೆ. ಯಾಕೆ ಈ ಪರಿಸ್ಥಿತಿ ಇದೆ? ಯಾವುದೇ ನಗರದಲ್ಲಿ ಮನರಂಜನೆಗೆ ಅವಕಾಶವಿಲ್ಲದಿದ್ದರೆ ಅಲ್ಲಿ ಯುವಕರು ಆಸಕ್ತಿ ತೋರುವುದಿಲ್ಲ. ಹೀಗಾಗಿ ಅಲ್ಲಿನ ಶಾಸಕರು ಕೂತು ಚರ್ಚೆ ಮಾಡಿ. ಈ ವಿಚಾರವಾಗಿ ನಾನು ಹಾಗೂ ಪ್ರವಾಸೋದ್ಯಮ ಸಚಿವರಿಬ್ಬರೂ ಸೇರಿ ಜಿಲ್ಲೆಯ ಎಲ್ಲಾ ಶಾಸಕರ ಜತೆ ಪ್ರತ್ಯೇಕವಾಗಿ ಸಭೆ ಮಾಡುತ್ತೇವೆ ಎಂದು ತಿಳಿಸಿದರು.



### ಕೋಳಿ ಅಂಕದ ಕೋಳಿ ರುಚಿ ಬಹಳ ಚೆನ್ನಾಗಿ ಇರುತ್ತೆ, ಬನ್ನಿ ರುಚಿ ತೋರಿಸ್ತೀವಿ

ಯಕ್ಷಗಾನ ಪ್ರದರ್ಶನ ಕಾರ್ಯಕ್ರಮಕ್ಕೆ ಅನುಮತಿ ನೀಡುವ ನಿಯಮಗಳನ್ನು ಸರಳೀಕರಣಗೊಳಿಸುವಂತೆ ವಿಧಾನಸಭೆಯಲ್ಲಿ ಪ್ರಸ್ತಾಪವಾಯ್ತು.

ಗಮನಸೆಳೆಯುವ ಸೂಚನೆ ವೇಳೆ ಬಿಜೆಪಿ ಶಾಸಕ ಸುನೀಲ್ ಕುಮಾರ್ ಪ್ರಸ್ತಾಪಿಸಿ, ಉಡುಪಿ– ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಕ್ಷಗಾನ ಪ್ರದರ್ಶನ ಕಾರ್ಯಕ್ರಮಗಳನ್ನು ನಿಲ್ಲಿಸುವಂತೆ ಎಫ್ಐಆರ್ ದಾಖಲು ಮಾಡುತ್ತಿದ್ದಾರೆ. ಧ್ವನಿವರ್ಧಕ ಬಳಕೆ ಸೇರಿದಂತೆ ಹಲವು ಅಡೆತಡೆಗಳು ಇವೆ. ಹೀಗಾಗಿ ಯಕ್ಷಗಾನ ಪ್ರದರ್ಶನಕ್ಕೆ ಅನುಮತಿ ಸರಳೀಕರಣಗೊಳಿಸಿ ಅಂತಾ ಮನವಿ ಮಾಡಿದರು.

ಈ ವೇಳೆ ಸ್ಪೀಕರ್ ಖಾದರ್ ಸಹ ಮಾತನಾಡಿ, ಮೊದಲು ಈ ರೀತಿ ಇರಲಿಲ್ಲ. ರಾತ್ರಿ 10 ಗಂಟೆ ಮೇಲೆ ಧ್ವನಿವರ್ಧಕ ಬಳಸಬಾರದು ಎಂದು ನಿಯಮ ತಂದರು. ಆದಾದ ಮೇಲೆ ಒಂದೊಂದು ಕಡೆ ಒಬ್ಬೊಬ್ಬ ಅಧಿಕಾರಿಗಳು ನಿಯಮ ಮಾಡುತ್ತಿದ್ದಾರೆ. ಸರ್ಕಾರ ಸರಿಪಡಿಸಿ ಎಂದು ಸೂಚಿಸಿದರು.

ಗೃಹ ಸಚಿವರ ಪರವಾಗಿ ಡಿಸಿಎಂ ಡಿಕೆ ಶಿವಕುಮಾರ್ ಉತ್ತರ ನೀಡಿ, ನಮ್ಮ ಸಂಸ್ಕೃತಿಗೆ ತೊಂದರೆ ಆಗಬಾರದು. ಯಕ್ಷಗಾನ, ಬಯಲಾಟ ನಮ್ಮ ದೇಶದ ಆಸ್ತಿ, ಇದನ್ನ ನಿಲ್ಲಿಸಲು ಆಗುವುದಿಲ್ಲ. ಯಾವುದೇ ಸಮಸ್ಯೆ ಇಲ್ಲದೇ ಸರಳೀಕರಣ ಮಾಡುತ್ತೇವೆ. ಮಧ್ಯರಾತ್ರಿ ನಿಲ್ಲಿಸುವಂತೆ ಯಾರೂ ಹೇಳಲ್ಲ. ಗೃಹ ಸಚಿವರು ಬರಲಿ ಅದನ್ನ ಸರಿ ಮಾಡೋಣ ಎಂದು ಭರವಸೆ ನೀಡಿದ್ರು. ಈ ವೇಳೆ ಊರುಗಳಲ್ಲಿ ನಾಟಕ ಪ್ರದರ್ಶನಕ್ಕೂ ಅಡೆತಡೆ ಉಂಟಾಗುತ್ತಿದೆ ಎಂದು ಶಾಸಕ ನೇಮಿರಾಜ್ ನಾಯ್ಕ್ ಪ್ರಸ್ತಾಪಿಸಿದರೆ ಕೋಳಿ ಅಂಕ, ನಾಗಮಂಡಲಕ್ಕೂ ಅಡೆತಡೆ ಉಂಟುಮಾಡುತ್ತಿದ್ದಾರೆ. ಅದರ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಉಡುಪಿ ಶಾಸಕ ಯಶಪಾಲ್ ಸುವರ್ಣ ಪ್ರಸ್ತಾಪಿಸಿದರು.

ಆಗ ಮಧ್ಯಪ್ರವೇಶ ಮಾಡಿದ ಸುನೀಲ್ ಕುಮಾರ್, ಕೋಳಿ ಅಂಕ ಮೊದಲಿನಿಂದಲೂ ಇದೆ. ಕೋಳಿ ಅಂಕದ ಕೋಳಿ ರುಚಿ ಬಹಳ ಚೆನ್ನಾಗಿದೆ. ನೀವು ಬಂದರೆ ಆ ರುಚಿ ತೋರಿಸುತ್ತೇವೆ ಎಂದು ಡಿಕೆಶಿಗೆ ಸುನೀಲ್ ಹೇಳಿದರು.





## 'ಬಿ' ಖಾತಾ ಅಭಿಯಾನದಿಂದ 55 ಲಕ್ಷ ಮನೆ, ನಿವೇಶನಗಳಿಗೆ ದಾಖಲೆ

**ಬೆಂಗಳೂರು:** ನಗರ–ಪಟ್ಟಣ, ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ಅನಧಿಕೃತ ನಿವೇಶನಗಳಿಗೆ, ಮನೆಗಳಿಗೆ ಒಂದು ಬಾರಿ 'ಬಿ' ಖಾತೆ ಮಾಡಿಕೊಡುವ ನಿರ್ಧಾರ ಐತಿಹಾಸಿಕ ನಿರ್ಧಾರ ಎಂದು ಸಚಿವ ರಹೀಂಖಾನ್, ಸಚಿವ ಬೈರತಿ ಸುರೇಶ್ ಬಣ್ಣಿಸಿದರು.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಪ್ರತಾಪ್ ಸಿಂಹ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವ ಬೈರತಿ ಸುರೇಶ್, ರಾಜ್ಯದಲ್ಲಿ ನಗರ, ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ಬರುವ 55 ಲಕ್ಷ ಮನೆಗಳಿಗೆ ಬಿ ಖಾತೆಗಳೇ ಇರಲಿಲ್ಲ. ಹೀಗಾಗಿ ನಮ್ಮ ಸರ್ಕಾರ 'ಬಿ' ಖಾತೆ ಕೊಡುವ ಕೆಲಸ ಮಾಡ್ತಿದೆ. ಈ ನಿಯಮದಿಂದ ಮಾಲೀಕನಿಗೆ ದಾಖಲಾತಿ ಸಿಗಲಿದೆ. ಸರ್ಕಾರಕ್ಕೆ ಟ್ಯಾಕ್ಸ್ ಬರುತ್ತದೆ. ನಮ್ಮ ನಿರ್ಧಾರದಿಂದ ಸಾರ್ವಜನಿಕರು ಖುಷಿಯಾಗಿದ್ದಾರೆ. ಇದು ನಮ್ಮ ಸರ್ಕಾರದ ಐತಿಹಾಸಿಕ ನಿರ್ಧಾರ ಎಂದರು.

ಬಳಿಕ ಮಾತನಾಡಿದ ಸಚಿವ ರಹೀಂಖಾನ್, ನಗರ–ಪಟ್ಟಣ, ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ಅನಧಿಕೃತ ನಿವೇಶನಗಳಿಗೆ, ಮನೆಗಳಿಗೆ ಒಂದು ಬಾರಿ 'ಬಿ' ಖಾತೆ ಮಾಡಿಕೊಡುವ ಪ್ರಕ್ರಿಯೆ ಶುರುವಾಗಿದೆ. ಇದು ನಮ್ಮ ಸರ್ಕಾರದ ಐತಿಹಾಸಿಕ ನಿರ್ಧಾರ. 40 ವರ್ಷಗಳಿಂದ ದಾಖಲಾತಿ ಇಲ್ಲದೆ ಜನರು ಕಣ್ಣೀರು ಹಾಕ್ತಿದ್ದರು. ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸಚಿವ ಸಂಪುಟ ಉಪಸಮಿತಿ ನಿರ್ಣಯದಂತೆ ಬಿ–ಖಾತಾ ಮಾಡುವ ನಿರ್ಣಯ ಮಾಡಲಾಗಿದೆ. ಈಗಾಗಲೇ ಬಿ ಖಾತಾ ಪ್ರಕ್ರಿಯೆ ಶುರುವಾಗಿದೆ. ಸರ್ಕಾರದ ನಿಯಮದಿಂದ ಅನಧಿಕೃತವಾಗಿ ಮನೆ ನಿರ್ಮಾಣ ಮಾಡಿರೋರಿಗೆ, ಮನೆ ಮಾಲೀಕನಿಗೆ ದಾಖಲಾತಿ ಸಿಗಲಿದೆ. ಇದು ನಮ್ಮ ಸರ್ಕಾರದ ಐತಿಹಾಸಿಕ ತೀರ್ಮಾನವಾಗಿದೆ ಎಂದರು.

### ಕಿಕ್ ಇಳಿಸಿದ ಡಿಕೆಶಿ

**ವಿಧಾನಸಭೆ ಕಲಾಪದಲ್ಲಿಂದು ಗ್ರಾಮೀಣ ಪ್ರದೇಶಗಳಲ್ಲಿ ಅಕ್ರಮ ಮದ್ಯ ಮಾರಾಟ ವಿಚಾರ ಗದ್ದಲ, ಕೋಲಾಹಲ ಸೃಷ್ಟಿಸಿತ್ತು. ಗ್ರಾಮಗಳಲ್ಲಿ ಅಕ್ರಮ ಮದ್ಯ ಮಾರಾಟ ತಡೆಯುವಂತೆ ಶಾಸಕ ಮಹಾಂತೇಶ ಕೌಜಲಗಿ ಪ್ರಶ್ನೆ ಕೇಳಿದ್ರು. ಈ ವೇಳೆ ವಿಪಕ್ಷ ಸದಸ್ಯರು ಅಕ್ರಮ ಮದ್ಯ ಮಾರಾಟಕ್ಕೆ ಅಬಕಾರಿ ಇಲಾಖೆ ಟಾರ್ಗೆಟ್ ಫಿಕ್ಸ್ ಮಾಡಿರೋದೇ ಕಾರಣ ಅಂತ ಆಪಾದಿಸಿದರು. ಈ ವೇಳೆ ಎಸ್‌ಸಿ/ಎಸ್‌ಟಿ ಕಾಲೋನಿಗಳಲ್ಲೇ ಹೆಚ್ಚಾಗಿ ಅಕ್ರಮ ಮದ್ಯ ಮಾರಾಟ ಮಾಡಲಾಗ್ತಿದೆ. ಇದರಿಂದ ತಮ್ಮ ಕ್ಷೇತ್ರದಲ್ಲಿ 35–40 ವರ್ಷದ ಒಬ್ಬೇಒಬ್ಬ ದಲಿತ ಯುವಕರೂ ಬದುಕಿಲ್ಲ ಅಂತ ಶಾಸಕ ಆರಗ ಜ್ಞಾನೇಂದ್ರ, ಸದನದ ಗಮನ ಸೆಳೆದರು. ಆದ್ರೆ, ಆರಗ ಜ್ಞಾನೇಂದ್ರ ಹೇಳಿಕೆಗೆ ಬಂಗಾರಪೇಟೆ ಶಾಸಕ ನಾರಾಯಣಸ್ವಾಮಿ ತೀವ್ರವಾಗಿ ಆಕ್ಷೇಪಿಸಿದ್ರು. ಯಾಕ್ರೀ ಆರಗ ಅವರೇ ಎಸ್ಸಿ–ಎಸ್ಟಿ ಜನ ಮಾತ್ರ ಮದ್ಯ ಕುಡೀತಾರಾ? ಬೇರೆಯವ್ರು, ಯಾರೂ ಕುಡಿಯಲ್ವಾ? ನೀವು ಕುಡಿಯಲ್ವಾ? ನೀವು ಕುಡಿಯಲ್ಲ ಅಂತ ಪ್ರಮಾಣ ಮಾಡ್ತೀರ? ಅಂತ ಆರಗ ಮೇಲೆ ಗರಂ ಆದ್ರು. ಈ ವೇಳೆ ಡಿಸಿಎಂ ಡಿಕೆಶಿ ಮಧ್ಯಪ್ರವೇಶಿಸಿ, ರಾಜ್ಯಪಾಲರು ಭಾಷಣ ಮಾಡಿದ್ದಾರೆ, ಅದರ ಮೇಲಿನ ಚರ್ಚೆ ವೇಳೆ ಇದು ಚರ್ಚೆ ಆಗಲಿ. ಆರಗ ಜ್ಞಾನೇಂದ್ರ, ಗೃಹ ಸಚಿವರು ಆಗಿದ್ದವರು, ಅವರ ಕಾಲದಲ್ಲಿ ಇಂಥ ಎಷ್ಟು ಅಕ್ರಮ ಮದ್ಯದಂಗಡಿ ನಿಲ್ಲಿಸಿದ್ದಾರೆ? ಅಂತ ಚರ್ಚೆ ಆಗಲಿ ಅಂತ ಕೋಲಾಹಕ್ಕೆ ತೆರೆ ಎಳೆದ್ರು.**

## ಎಲೆ ಚುಕ್ಕೆ ರೋಗ, ಹಳದಿ ರೋಗ ಪರಿಹಾರ ಹೆಚ್ಚಳಕ್ಕೆ ಕೇಂದ್ರಕ್ಕೆ ಮನ

**ಬೆಂಗಳೂರು:** ಎಲೆ ಚುಕ್ಕೆ ರೋಗ ಮತ್ತು ಹಳದಿ ರೋಗ ಪರಿಹಾರವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೇಂದ್ರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ತಿಳಿಸಿದರು.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಕಿಶೋರ್ ಕುಮಾರ್ ಪ್ರಶ್ನಿಸಿ, ರಾಜ್ಯದ ಕರಾವಳಿ ಭಾಗಗಳಲ್ಲಿ ಅಡಿಕೆಗೆ ಎಲೆ ಚುಕ್ಕೆ ರೋಗ, ಹಳದಿ ರೋಗ ಬಂದಿದೆ. ಸರ್ಕಾರ ರೈತರಿಗೆ ಪರಿಹಾರ ಸರಿಯಾಗಿ ಕೊಟ್ಟಿಲ್ಲ. ಕೇಂದ್ರ ಸರ್ಕಾರ 60% ಅನುದಾನ ಕೊಟ್ಟಿದ್ದರು. ರಾಜ್ಯ ಸರ್ಕಾರ ಪರಿಹಾರ ಬಿಡುಗಡೆ ಮಾಡಿಲ್ಲ. ಕೂಡಲೇ ಪರಿಹಾರ ಬಿಡುಗಡೆ ಮಾಡಬೇಕು. ಸರ್ಕಾರ ಕೂಡಲೇ ಕ್ರಮ ತೆಗೆದುಕೊಳ್ಳಬೇಕು ಎಂದು ಮನವಿ ಮಾಡಿದರು. ಇದಕ್ಕೆ ಸಚಿವ ಎಸ್‌ಎಸ್ ಮಲ್ಲಿಕಾರ್ಜುನ ಉತ್ತರ ನೀಡಿ, ಕೇಂದ್ರದಿಂದ ಹಣ ಬಂದಿದೆ. ರಾಜ್ಯದ ಹಣ ಸೇರಿಸಿ ಶೀಘ್ರವೇ ಪರಿಹಾರದ ಹಣ ಬಿಡುಗಡೆ ಮಾಡ್ತೀವಿ. ಪ್ರತಿ ಹೆಕ್ಟೇರ್‌ಗೆ ಈಗ 1,200 ರೂ. ಪರಿಹಾರ ಕೊಡುತ್ತಿದ್ದೇವೆ. ಪರಿಹಾರ ಜಾಸ್ತಿ ಮಾಡುವ ಬಗ್ಗೆ ಕೇಂದ್ರಕ್ಕೆ ಪತ್ರ ಬರೆಯಲಾಗಿದೆ. ಕೇಂದ್ರದಿಂದ ಉತ್ತರ ಬಂದ ಕೂಡಲೇ ಪರಿಹಾರ ಹೆಚ್ಚು ಮಾಡಲು ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

# ನಿಮಗೂ ವಯಸ್ಸಾಗಿದೆ, ಅಧ್ಯಕ್ಷರ ಅವಧಿ ಮುಗಿಯೋದ್ರಲ್ಲಿ ದಲಿತ ಸಿಎಂ ಮಾಡಿ

**ಬೀದರ್:** ನಿಮಗೂ ವಯಸ್ಸಾಗಿದೆ, ನಿಮ್ಮ ಅಧ್ಯಕ್ಷ ಸ್ಥಾನ ಮುಗಿಯುವಷ್ಟರಲ್ಲಿ ದಲಿತ ಸಿಎಂ ಮಾಡಿ ಎಂದು ಮಲ್ಲಿಕಾರ್ಜುನ ಖರ್ಗೆಗೆ ಮಾಜಿ ಡಿಸಿಎಂ ಗೋವಿಂದ ಕಾರಜೋಳ ಸವಾಲು ಹಾಕಿದ್ದಾರೆ.





ಜಿಲ್ಲೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ದಿನಗೂಲಿ ಕೆಲಸ ಮಾಡುವ ಕಾರ್ಮಿಕರು ಸೇರಿದಂತೆ ಯಾರಿಗೂ ಸಂಬಳ ಬಂದಿಲ್ಲ. ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ. ಇಲ್ಲಿಯವರೆಗೂ 14 ಸಾವು, 35 ಸಾವಿರ ಕೋಟಿ ರೂ, ನುಂಗಿ ನೀರು ಕುಡಿದಿದ್ದಾರೆ. ಸಿದ್ದರಾಮಯ್ಯ ಸರ್ಕಾರ ದಲಿತರಿಗೆ ಮೋಸ ಮಾಡುತ್ತಿದೆ. ಸಿದ್ದರಾಮಯ್ಯವರೇ ಇದೇನಾ ಸಾಮಾಜಿಕ ನ್ಯಾಯ? ಇದು ನ್ಯಾಯ ಅಲ್ಲ, ಅನ್ಯಾಯ. 7 ಲಕ್ಷ ಕೋಟಿ ರೂ.ಯ ಬಜೆಟ್ ಮಾಡುತ್ತಿದ್ದೀರಿ, ನೀವು ಜಿಲ್ಲೆಗೆ 60 ಸಾವಿರ ಕೋಟಿ ರೂ. ಅನುದಾನ ಕೊಡಬೇಕು. ಅಹಿಂದ ನಾಯಕರಿಂದ ಮಹಾ ಮೋಸವಾಗಿದೆ. ದಲಿತ ಸಚಿವರಿಗೆ ಮಾನ ಮರ್ಯಾದೆ ಇಲ್ಲ. ರಾಜೀನಾಮೆ ಕೊಟ್ಟು ಹೊರಗೆ ಬರಬೇಕು ಎಂದು ಕಿಡಿಕಾರಿದರು.

ಎರಡು ವರ್ಷದಲ್ಲಿ ಒಂದೇ ಒಂದು ಅಭಿವೃದ್ಧಿ ಕೆಲಸಗಳು ಆಗಿಲ್ಲ. ಖರ್ಗೆಯನ್ನು ಕಾಂಗ್ರೆಸ್ ಅಧ್ಯಕ್ಷ ಮಾಡಿದ್ದು ಯಾಕೆ? ಖರ್ಗೆಯನ್ನು ಮುಳಗುವ ಹಡಗಿನ ಅಧ್ಯಕ್ಷ ಮಾಡಿದ್ದಾರೆ. ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಸರ್ವಾಧಿಕಾರಿಗಳು. ಖರ್ಗೆ ನಿಮ್ಮಗೆ ತಾಕತ್ತಿದ್ದರೆ ರಾಜ್ಯದಲ್ಲಿ ದಲಿತ ಸಿಎಂ ಮಾಡಿ, ನಿಮಗೂ ವಯಸ್ಸಾಗಿದೆ ಅಧ್ಯಕ್ಷ ಸ್ಥಾನ ಮುಗಿಯುವಷ್ಟರಲ್ಲಿ ದಲಿತ ಸಿಎಂ ಮಾಡಿ. ನಿಮ್ಮ ಪ್ರಣಾಳಿಕೆಯಲ್ಲಿ ಒಳಮೀಸಲಾತಿ ಕೊಡುತ್ತೇನೆ ಎಂದು ಹೇಳಿದ್ದೀರಿ, ನೀವು ಆದೇಶ ಜಾರಿ ಮಾಡಿ, ಇಲ್ಲಿರುವವರಿಗೆ ದಲಿತರು ಮೇಲೆ ಬರುವುದು ಬೇಕಿಲ್ಲ ಎಂದು ಆಕ್ರೋಶ ಹೊರಹಾಕಿದರು.

## ಸ್ವ ಇಚ್ಛೆಯಿಂದ ಗ್ಯಾರಂಟಿ ಬಿಟ್ಟುಕೊಡುವ ಜನರಿಗಾಗಿ ವ್ಯವಸ್ಥೆ ಮಾಡುವ ಬಗ್ಗೆ ಚಿಂತನೆ: ಹೆಚ್.ಎಂ.ರೇವಣ್ಣ

**ನವದೆಹಲಿ:** ಇತ್ತೀಚೆಗೆ ಕಾರವಾರದಲ್ಲಿ ಕೆಲವು ಮಹಿಳೆಯರು ನಮಗೆ ಗ್ಯಾರಂಟಿ ಯೋಜನೆಗಳು ಬೇಡ, ಅದು ಬಡವರಿಗೆ ತಲುಪಲಿ ಎಂದು ಹೇಳಿದರು. ಇದೇ ರೀತಿ ಸ್ವ ಇಚ್ಛೆಯಿಂದ ಗ್ಯಾರಂಟಿ ಬಿಟ್ಟುಕೊಡುವ ಜನರಿಗಾಗಿ ವ್ಯವಸ್ಥೆ ಮಾಡುವ ಬಗ್ಗೆ ಚಿಂತನೆ ನಡೆಸಿದ್ದೇವೆ ಎಂದು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಎಂ.ರೇವಣ್ಣ ಹೇಳಿದ್ದಾರೆ.



ನವದೆಹಲಿಯಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಅನುಷ್ಠಾನದ ಬಗ್ಗೆ ಕಾಂಗ್ರೆಸ್ ನಾಯಕರಾದ ಕೆ.ಸಿ.ವೇಣುಗೋಪಾಲ್, ಉಸ್ತುವಾರಿ ರಣದೀಪ್ ಸುರ್ಜೆವಾಲ ಅವರಿಗೆ ಮಾಹಿತಿ ನೀಡಿದ್ದೇನೆ ಎಂದಿದ್ದಾರೆ.

ಚುನಾವಣಾ ಪೂರ್ವದಲ್ಲಿ ನಾವು ಜನರಿಗೆ ಗ್ಯಾರಂಟಿ ಜಾರಿ ಮಾಡುವ ಭರವಸೆ ನೀಡಿದ್ದೆವು. ಸರ್ಕಾರ ರಚನೆಯಾದ ಬೆನ್ನಲ್ಲೇ ಮೊದಲ ಸಂಪುಟದಲ್ಲೇ ನಾವು ಗ್ಯಾರಂಟಿ ಜಾರಿ ಮಾಡಿದ್ದೇವೆ. ಎಲ್ಲ ಯೋಜನೆಗಳು ಸರಿಯಾಗಿ ಅನುಷ್ಠಾನಕ್ಕೆ ಬಂದಿವೆ. ಗೃಹಲಕ್ಷ್ಮಿ ಯೋಜನೆ ಅಡಿ ಮೂರು ತಿಂಗಳು ಹಣ ಪಾವತಿ ಆಗಿರಲಿಲ್ಲ. ಈಗ ಅದಕ್ಕೂ ವ್ಯವಸ್ಥೆ ಮಾಡಿದೆ ಎಂದು ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆಗಳ ವಿರುದ್ಧ ಮಾತನಾಡುವವರು, ಉಳ್ಳವರು ಮತ್ತು ಬಿಜೆಪಿ ನಾಯಕರು, ಬಡವರಿಗೆ ಬಾಯಿ ಇಲ್ಲ. ಹೀಗಾಗಿ, ಮಾತನಾಡಲ್ಲ. ನಾವು ಗ್ಯಾರಂಟಿಗಳನ್ನು ನಿಲ್ಲಿಸುವುದಿಲ್ಲ. ಗ್ಯಾರಂಟಿ ಯೋಜನೆಗಳು ಜನರ ಆರ್ಥಿಕ ಸ್ಥಿತಿ ಹೆಚ್ಚಿಸಿದೆ ಎಂದು ಆರ್ಥಿಕ ತಜ್ಞರು ಹೇಳಿದ್ದಾರೆ. ಮೊದಲು ಗುಜರಾತ್ ಮಾದರಿ ಅಂತಾ ಇದ್ದರು. ಈಗ ಕರ್ನಾಟಕ ಮಾದರಿ ಆಗುತ್ತಿದೆ. ಬ್ಲಡ್ ಮತ್ತು ದುಡ್ಡು ಎರಡೂ ಚಲಾವಣೆಯಲ್ಲಿ ಇದ್ದರೆ ಮಾತ್ರ ಆರೋಗ್ಯಕ್ಕೆ ಒಳ್ಳೆಯದು ಎಂದಿದ್ದಾರೆ.

ವೀರಪ್ಪ ಮೊಯ್ಲಿ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಇದರ ಬಗ್ಗೆ ನಮ್ಮ ಹೈಕಮಾಂಡ್ ನೋಡಿಕೊಳ್ಳುತ್ತೆ. ಖರ್ಗೆ ಅವರು ಯಾರೂ ಮಾತಾಡಬೇಡಿ ಎಂದಿದ್ದಾರೆ. ಹಾಗಾಗಿ ಮಾತಾಡಲ್ಲ. ಸದ್ಯ ಎರಡು ಕುರ್ಚಿಗಳು ಭರ್ತಿ ಇವೆ ಎಂದು ತಿಳಿಸಿದ್ದಾರೆ.

## ಕೆಪಿಎಸ್‌ಸಿ ಕಳ್ಳರ ಸಂತೆ

ವಿಷಯ ಪ್ರಸ್ತಾವಿಸಿದ ವಿಪಕ್ಷ ನಾಯಕ ಆರ್. ಅಶೋಕ್, ಪೂರ್ವಭಾವಿ ಪರೀಕ್ಷೆಯಿಂದ ಅಂತಿಮ ಸಂದರ್ಶನದ ವರೆಗೆ ಕೆಪಿಎಸ್‌ಸಿಯಲ್ಲಿ, ''ರೇಟ್ ಕಾರ್ಡ್' ನಿಗದಿ ಮಾಡಲಾಗಿದ್ದು, ''ಹರಾಜು ಪ್ರಕ್ರಿಯೆ'ಯ ರೀತಿ ಕೋಟ್ಯಂತರ ರೂ.ಗಳಿಗೆ ಹುದ್ದೆಗಳನ್ನು ಮಾರಾಟ ಮಾಡಲಾಗುತ್ತಿದೆ ಎಂದು ಆಪಾದಿಸಿದರು.

ಕೆಪಿಎಸ್‌ಸಿಯಲ್ಲಿ ಪ್ರತಿಯೊಂದಕ್ಕೂ ದರ ನಿಗದಿ ಮಾಡಲಾಗಿದೆ. ಪೂರ್ವಭಾವಿ ಪರೀಕ್ಷೆಗೆ 60 ಲಕ್ಷ ರೂ., ಮುಖ್ಯ ಪರೀಕ್ಷೆಗೆ ಒಂದು ಕೋಟಿ ರೂ. ನಿಗದಿ ಮಾಡಲಾಗಿದೆ. ಕೆಪಿಎಸ್‌ಸಿಯಲ್ಲಿ 14 ಸದಸ್ಯರಿದ್ದು, ಒಬ್ಬರಿಗೆ ಎರಡೂವರೆ ಲಕ್ಷ ರೂ. ವೇತನವಿದೆ. ಉಳಿದ ಸೌಲಭ್ಯಗಳ ಸಹಿತ 4 ಲಕ್ಷ ರೂ. ಆಗುತ್ತದೆ. ಕರ್ನಾಟಕದಲ್ಲಿ ಆರೂವರೆ ಕೋಟಿ ಜನರಿದ್ದಾರೆ. 20 ಕೋಟಿ ಜನರಿರುವ ಉತ್ತರಪ್ರದೇಶದ ಆಯೋಗದಲ್ಲಿ 8 ಸದಸ್ಯರಿದ್ದಾರೆ.

ಇದರಲ್ಲೂ ರಾಜ್ಯದಲ್ಲಿ ಹಗಲು ದರೋಡೆ ನಡೆಯುತ್ತಿದೆ. ಸಹಾಯಕ ಆಯುಕ್ತ ಹುದ್ದೆಗೆ 2 ಕೋಟಿ ರೂ., ಡಿವೈಎಸ್ಪಿಗೆ 2 ಕೋಟಿ ರೂ., ವಾಣಿಜ್ಯ ತೆರಿಗೆ 1.50 ಕೋಟಿ ರೂ., ಪಂಚಾಯತ್ ಅಧಿಕಾರಿಗೆ ಒಂದೂವರೆ ಕೋಟಿ ರೂ. ನಿಗದಿ ಮಾಡಲಾಗಿದೆ ಎಂದರು.

ಇತ್ತೀಚೆಗೆ ನಡೆದ ಗ್ರೂಪ್ ''ಎ' ಮತ್ತು ''ಬಿ'ಯ 384 ಹುದ್ದೆಗಳಿಗೆ ನಡೆದ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆಪತ್ರಿಕೆ ಲೋಪದ ಬಗ್ಗೆ ಪ್ರಸ್ತಾವಿಸಿ, ಗೂಗಲ್ ಭಾಷಾಂತರದಿಂದ ಕನ್ನಡಕ್ಕೆ ಅವಮಾನ ಮಾಡಲಾಗಿದೆ. ಇದಕ್ಕೆ ಕಾರಣವಾದ ಅಧಿಕಾರಿಯ ನಾಲಗೆ ಸೀಳಬೇಡವೇ ಎಂದು ಅಶೋಕ್ ಅವರು ರಾಜರತ್ನಂ ಅವರ ಕವನದ ಸಾಲನ್ನು ಉಲ್ಲೇಖಿಸಿ ಪ್ರಶ್ನೆ ಮಾಡಿದರು. ಈ ಬಗ್ಗೆ ವಿಚಾರಣೆ ನಡೆಸಬೇಕು, ಜತೆಗೆ ಹಳೆಯ ಅಧಿಸೂಚನೆ ವಾಪಸ್ ಪಡೆದು ಹೊಸದಾಗಿ ನೇಮಕ ಪ್ರಕ್ರಿಯೆ ನಡೆಸುವಂತೆ ಆಗ್ರಹಿಸಿದರು.

ಈ ಪರೀಕ್ಷೆಯಲ್ಲಿ ಕನ್ನಡಕ್ಕೆ ಅವಮಾನ ಮಾಡಲಾಗಿದೆ. ಕನ್ನಡದಲ್ಲಿರುವ ಯಾವುದೇ ಪ್ರಶ್ನೆಯ ಭಾಷಾಂತರದಲ್ಲಿ ಗೊಂದಲವಾದರೆ ಆಂಗ್ಲ ಭಾಷೆಯ ಪ್ರಶ್ನೆಗಳನ್ನು ನೋಡಿ ಅರ್ಥೈಸಿಕೊಳ್ಳಿ ಎಂದು ಹೇಳಿರುವುದೇ ತಪ್ಪು. ಪ್ರತೀ ಪ್ರಶ್ನೆಯ ಅನುವಾದವೂ ತಪ್ಪು. ಇದರಿಂದ 2 ಲಕ್ಷ ಜನರಿಗೆ ಅನ್ಯಾಯವಾಗಿದೆ. ಇವರೆಲ್ಲರೂ ಬಡವರಾಗಿದ್ದು, ಉದ್ಯೋಗದ ಕನಸು ನುಚ್ಚುನೂರಾಗಿದೆ. ಇದಕ್ಕೆ ಕಾರಣವಾದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಡವೇ ಎಂದು ಗುಡುಗಿದರು.

ಈ ಪರೀಕ್ಷೆ ನಡೆಸುವುದಕ್ಕೆ ರಾಜ್ಯ ಸರಕಾರ ಮೊದಲ ಬಾರಿಗೆ 15 ಕೋಟಿ ರೂ. ನೀಡಿತ್ತು. ಆದರೆ ಆಯೋಗ ಸಿದ್ಧಪಡಿಸಿದ ಪ್ರಶ್ನೆಪತ್ರಿಕೆಯಲ್ಲಿ 59 ತಪ್ಪುಗಳಿದ್ದವು. ಈ ಬಗ್ಗೆ ಟೀಕೆಗಳು ಕೇಳಿಬಂದಾಗ ಖುದ್ದು ಸಿಎಂ ಸಿದ್ದರಾಮಯ್ಯನವರೇ ತಮ್ಮ ''ಎಕ್ಸ್' ಖಾತೆಯಲ್ಲಿ ಟ್ವೀಟ್ ಮಾಡಿ, ನಾವು ನಮ್ಮ ನೇಮಕ ಪ್ರಕ್ರಿಯೆಯ ಪಾವಿತ್ರ್ಯವನ್ನು ಎತ್ತಿ ಹಿಡಿಯುವುದಾಗಿ ಭರವಸೆ ನೀಡಿದ್ದರು. ಕನ್ನಡ ಅನುವಾದದಲ್ಲಿ ಆಗಿರುವ ಲೋಪದ ಹಿನ್ನೆಲೆಯಲ್ಲಿ 2 ತಿಂಗಳೊಳಗಾಗಿ ಜವಾಬ್ದಾರಿ ಹಾಗೂ ಉತ್ತರದಾಯಿತ್ವದಿಂದ ಕೂಡಿದ ರೀತಿಯಲ್ಲಿ ಪರೀಕ್ಷೆ ನಡೆಸುವಂತೆ ಕೆಪಿಎಸ್‌ಸಿಗೆ ಸೂಚನೆ ನೀಡುತ್ತೇನೆ

ಮೊದಲನೇ ಪುಟದಿಂದ...

ಎಂದಿದ್ದರು.

ಇದಾದ ಬಳಿಕ ಮರು ಪರೀಕ್ಷೆಗೆ ಮತ್ತೆ ಅಷ್ಟೇ ಹಣ ನೀಡಲಾಗಿದೆ. ಮರು ಪರೀಕ್ಷೆಯಲ್ಲಿ ಮತ್ತೆ 79 ತಪ್ಪುಗಳಾಗಿವೆ. ಈ ಪ್ರಶ್ನೆಪತ್ರಿಕೆಗಳಲ್ಲಿ ಕನ್ನಡವನ್ನು 2ನೇ ದರ್ಜೆ ಎಂಬಂತೆ ನೋಡಲಾಗಿದೆ. 30 ಕೋಟಿ ರೂ. ಹಣ ಹಾಳು ಮಾಡಿದ ಅಧಿಕಾರಿಯನ್ನು ಅಮಾನತು ಮಾಡಬೇಕು. ಮರುಪರೀಕ್ಷೆ ನಡೆಸಬೇಕು. ಅಭ್ಯರ್ಥಿಗಳ ವಯೋಮಿತಿಗೆ ವಿನಾಯಿತಿ ನೀಡಬೇಕು. ಅಕ್ರಮದ ವಿರುದ್ಧ ತನಿಖೆ ಮಾಡಬೇಕು ಎಂದು ಆಗ್ರಹಿಸಿದರು.

### ಸಿದ್ಧವಾಯ್ತು ಬೇಡಿಕೆಗಳ ಪಟ್ಟಿ

ಪ್ರತೀ ವರ್ಷ ಸರ್ಕಾರದಿಂದ ಬುಡಕಟ್ಟು ವಾಲ್ಮೀಕಿ ಜನಾಂಗದ ಇತಿಹಾಸ, ಸಂಸ್ಕೃತಿ, ಕಲೆಗಳನ್ನು ಪ್ರೋತ್ಸಾಹಿಸಿ ಜನಗಳಿಗೆ ಪರಿಚಯಿಸುವುದು, ಚಿತ್ರದುರ್ಗದಲ್ಲಿ ದುರ್ಗೋತ್ಸವ ಎಂಬ ಕಾರ್ಯಕ್ರಮವನ್ನು ರಾಣಿಚನ್ನಮ್ಮ ಇತಿಹಾಸ ಬಿಂಬಿಸುವ ಕಿತ್ತೂರು ಉತ್ಸವ, ಹಂಪಿ ಉತ್ಸವ ಮಾದರಿಯಲ್ಲಿ ಆಯೋಜಿಸುವುದು. ಇದು ನಾಯಕರ ಪರಾಕ್ರಮಗಳ ಕಲೆಗಳನ್ನು ಬಿಂಬಿಸುವ ಸಾಂಸ್ಕೃತಿಕ ದುರ್ಗೋತ್ಸವ ಆಗಬೇಕೆಂದು ಸರ್ಕಾರಕ್ಕೆ ಮನವಿ ಸಲ್ಲಿಸುವುದು. ಇತ್ತೀಚೆಗೆ ರಾಯಚೂರಿನಲ್ಲಿ 25 ಮಂದಿ ಎಸ್‌ಸಿ/ಎಸ್‌ಟಿ ಸಮುದಾಯದ ಹೋರಾಟಗಾರರ ಮೇಲೆ ಹೂಡಿದ ಕೇಸ್‌ಗಳನ್ನು ಸರ್ಕಾರ ತಕ್ಷಣ ಹಿಂತೆಗೆದುಕೊಳ್ಳಲು ಒತ್ತಾಯಿಸುವುದು.

ಬೆಂಗಳೂರಿನ ಬಸವನಗುಡಿಯಲ್ಲಿರುವ ಶ್ರೀ ಶಿವಭಕ್ತ ಬೇಡರ ಕಣ್ಣಪ್ಪ ಸ್ವಾಮಿ ದೇವಸ್ಥಾನ ಶ್ರೀ ಮಹರ್ಷಿ ವಾಲ್ಮೀಕಿ ಆಶ್ರಮ ಮಹಾಸಂಸ್ಥಾನಕ್ಕೆ ಹೊಂದಿಕೊಂಡಿರುವ ನಿವೇಶನವನ್ನು ಸರ್ಕಾರದಿಂದ ಮಂಜೂರು ಮಾಡಿಸುವ ಕುರಿತು ಒತ್ತಡ ಹೇರುವುದು.

ಪರಿಶಿಷ್ಟ ಪಂಗಡದ ಜನಾಂಗಕ್ಕೆ ಮೀಸಲಿಟ್ಟ ಹಣವು ದುರ್ಬಳಕೆಯಾಗದೇ ಸಮರ್ಪಕವಾಗಿ ಜನಾಂಗಕ್ಕೆ ತಲುಪಿಸಿ ನಿಗದಿತ ಅವಧಿಯೊಳಗೆ ಪೂರ್ತಿ ಹಣ ಖರ್ಚಾಗುವಂತೆ ನೋಡಿಕೊಳ್ಳುವುದು.

ಸಚಿವ ಸತೀಶ್ ಜಾರಕಿಹೊಳಿ ನಿವಾಸದಲ್ಲಿ ಎಸ್‌ಟಿ ಶಾಸಕರ ಸಭೆಯಲ್ಲಿ ಸಚಿವ ಕೆಎನ್ ರಾಜಣ್ಣ ಭಾಗಿಯಾಗಿದ್ದಾರೆ. ಡಿಸಿಎಂ ಡಿಕೆ ಶಿವಕುಮಾರ್ ಜೊತೆಗಿನ ಸಭೆಗೆ ಗೈರಾಗಿದ್ದ ಅವರು ಸಮುದಾಯದ ಸಭೆಯಲ್ಲಿ ಭಾಗಿಯಾಗಿದ್ದಾರೆ. ಇದರೊಂದಿಗೆ, ರಾಜಣ್ಣ ಹಾಗೂ ಡಿಕೆ ಶಿವಕುಮಾರ್ ಸಮರ ಮುಂದುವರಿದಂತಾಗಿದೆ.

ಅಪೆಕ್ಸ್ ಬ್ಯಾಂಕ್ ವಿಚಾರವಾಗಿ ರಾಜಣ್ಣ ಜತೆ ಸಭೆ ಮಾಡಲು ಡಿಕೆ ಶಿವಕುಮಾರ್ ತೆರಳಿದ್ದರು. ವಿಧಾನಸೌಧದ ಸಚಿವ ರಾಜಣ್ಣ ಕೊಠಡಿಗೆ ತೆರಳಿದ್ದರು. ಆದರೆ, ಆರೋಗ್ಯ ಸರಿಯಿಲ್ಲ ಎಂಬ ಕಾರಣ ನೀಡಿ ರಾಜಣ್ಣ ಸಭೆಗೆ ಬಂದಿರಲಿಲ್ಲ. ಹೀಗಾಗಿ ರಾಜಣ್ಣ ಕೊಠಡಿಯಲ್ಲಿ ಕಾದು ಡಿಕೆ ಶಿವಕುಮಾರ್ ವಾಪಸ್ ಹೋಗಿದ್ದರು. ಆದರೆ, ಹುಷಾರಿಲ್ಲದ ರಾಜಣ್ಣ ಅತ್ತ ವಾಲ್ಮೀಕಿ ಸಮುದಾಯದ ಸಭೆಗೆ ಹಾಜರಾಗಿದ್ದಾರೆ! ಈ ಮೂಲಕ ಡಿಸಿಎಂ ಡಿಕೆ ಶಿವಕುಮಾರ್ ಜೊತೆಗಿನ ಅವರ ಮುನಿಸು ಮತ್ತೊಮ್ಮೆ ಬಹಿರಂಗವಾಗಿದೆ.

## ದಿನದ ಹಿಂದೆ ಹಸೆಮಣೆ ಏರಿದ ಯುವಕ ಸಾವಿನ ಮನೆ ಸೇರಿದ

ಶಶಾಂಕ್ ಮದುವೆ ದಿನವೂ ಸ್ವಲ್ಪ ಜ್ವರದಿಂದ ಬಳಲುತ್ತಿದ್ದರು. ಈ ಬಗ್ಗೆ ಶಶಾಂಕ್ ತನ್ನ ಸ್ನೇಹಿತರ ಮುಂದೆ ಹೇಳಿಕೊಂಡಿದ್ದನು. ಮಂಗಳವಾರ ಬೆಂಗಳೂರಿನ ನಿವಾಸದಲ್ಲಿ ಶಶಾಂಕ್‌ಗೆ ಎದೆ ನೋವು ಎದೆನೋವು ಕಾಣಿಸಿಕೊಂಡಿದೆ. ಪೋಷಕರು ಕೂಡಲೇ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು. ಆದರೆ, ಶಶಾಂಕ್ ಅಷ್ಟೊತ್ತಿಗಾಗಲೇ ಮೃತಪಟ್ಟಿದ್ದರು.

### ಹಕ್ಕಿಜ್ವರ: ಆರೋಗ್ಯ ಇಲಾಖೆ ಅಲರ್ಟ್

ಹಕ್ಕಿಜ್ವರದ ಗುಣಲಕ್ಷಣ ಕಂಡು ಬಂದರೆ ಅಂಥವರಿಗೆ ಆರ್‌ಟಿಪಿಸಿಆರ್ ಟೆಸ್ಟ್ ಕಡ್ಡಾಯಗೊಳಿಸಲಾಗಿದೆ. ಇನ್ನು ಜ್ವರ ಬಂದಲ್ಲಿ ಜನರು ವೈದ್ಯರನ್ನು ಸಂಪರ್ಕಿಸಲು ಸೂಚಿಸಲಾಗಿದೆ. ಜತೆಗೆ, ಫ್ಲೂ ಬಂದ ಸ್ಥಳದಲ್ಲಿ ಕೆಲಸ ಮಾಡುತ್ತಿದ್ದ ಎಲ್ಲರನ್ನೂ ಕೂಡ ಪರೀಕ್ಷೆಗೆ ಒಳಪಡಿಸಲು ಇಲಾಖೆ ಮುಂದಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಗಾಬರಿ ಬೇಡ, ನಿರ್ಲಕ್ಷ್ಯವೂ ಸಲ್ಲ: ಹಕ್ಕಿಜ್ವರ ಕೂಡ ಸಾಮಾನ್ಯ ಜ್ವರವಾಗಿದ್ದು, ಹೆಚ್ಚಿನ ಆತಂಕ ಪಡುವ ಅಗತ್ಯವಿಲ್ಲ. ಹಾಗೆಂದು ನಿರ್ಲಕ್ಷ್ಯ ವಹಿಸಲೇಬಾರದು ಎಂದು ವೈದ್ಯರು ಹೇಳಿದ್ದು, ಮುಂಜಾಗ್ರತೆ ವಹಿಸುವಂತೆ ಸೂಚನೆ ನೀಡಿದ್ದಾರೆ. ಮಾಂಸವನ್ನು ಚೆನ್ನಾಗಿ ಬೇಯಿಸಿ ತಿಂದರೆ ಸಮಸ್ಯೆ ಇಲ್ಲ ಎಂದು ಕೆಸಿ ಜನರಲ್ ಆಸ್ಪತ್ರೆಯ ಜನರಲ್ ಮೆಡಿಸಿನ್ ವಿಭಾಗದ ಡಾ ರೇಖಾ ಹೇಳಿದ್ದಾರೆ.

ಹಕ್ಕಿ ಜ್ವರದ ಭೀತಿಯಿಂದ ನಗರದ ಜನ ಚಿಕನ್ ಬೇಡವೇ ಬೇಡ ಎನ್ನುತ್ತಿದ್ದಾರೆ. ಕಳೆದ ಭಾನುವಾರದಿಂದಲೇ ಜನ ಮಟನ್ ಕಡೆ ಮುಖ ಮಾಡಿದ್ದು, ಮಟನ್‌ಗೆ ಶೇಕಡಾ 20 ರಷ್ಟು ಬೇಡಿಕೆ ಹೆಚ್ಚಾಗಿದೆ ಎಂದು ಮಟನ್ ಸ್ಟಾಲ್ ಮಾಲೀಕ ಸಂತೋಷ್ ಎಂಬವರು ತಿಳಿಸಿದ್ದಾರೆ.

ಸದ್ಯ ಹಕ್ಕಿಜ್ವರದ ಹಿನ್ನೆಲೆ ಆರೋಗ್ಯ ಇಲಾಖೆ ಅಲರ್ಟ್ ಆಗಿದ್ದು, ಮುಂಜಾಗ್ರತೆ ವಹಿಸಿದೆ. ಮತ್ತೊಂದು ಕಡೆ ಚಿಕನ್ ಬಿಟ್ಟಿರುವ ಜನ ಮಟನ್ ಸವಿಯೋದಕ್ಕೆ ಮುಂದಾಗಿದ್ದಾರೆ.

### ಪ್ರೇಯಸಿ ಕತ್ತು ಸೀಳಿ ಪ್ರಿಯಕರ ಆತ್ಮಹತ್ಯೆ

ಪ್ರಶಾಂತ್ ತನ್ನ ಪ್ರೇಯಸಿಯನ್ನು ಆಕೆಯ ಚಿಕ್ಕಮ್ಮನ ಮನೆಗೆ ಕರೆಸಿಕೊಂಡಿದ್ದ. ಮನೆಯಲ್ಲಿ ಯಾರೂ ಇಲ್ಲದ ವೇಳೆ ಆಕೆಗೆ ವಿಷ ಕುಡಿಸಲು ಯತ್ನಿಸಿದ್ದ. ಬಳಿಕ ಚಾಕುವಿನಿಂದ ಆಕೆಯ ಕತ್ತು ಸೀಳಿ, ಅದೇ ಚಾಕುವಿನಿಂದ ಆತನೂ ಕತ್ತು ಕೊಯ್ದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಸ್ಥಳಕ್ಕೆ ಪೊಲೀಸ್ ಕಮಿಷನರ್ ಯಡಾ ಮಾರ್ಟಿನ್, ಡಿಸಿಪಿ ರೋಹನ್ ಜಗದೀಶ್ ಭೇಟಿ ನೀಡಿ ಪರಿಶೀಲಿಸಿದರು. ಬಳಿಕ ಸಿಪಿಐ ಎಸ್.ಎಸ್.ಸಿಮಾನಿ, ಎಸಿಪಿ ಸಂತೋಷ ಸತ್ಯನಾಯಕರಿಂದ ಮಾಹಿತಿ ಪಡೆದರು. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಬಿಮ್ಸ್ ಆಸ್ಪತ್ರೆಗೆ ರವಾನಿಸಿದ್ದು, ಬಳಿಕ ಮನೆಯವರಿಗೆ ಪೊಲೀಸರು ಹಸ್ತಾಂತರಿಸಿದ್ದಾರೆ. ಶಹಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಗಲಿದ ಗಣ್ಯರಿಗೆ ಉಭಯ ಸದನಗಳಲ್ಲಿ ಸಂತಾಪ

**ಬೆಂಗಳೂರು:** ಇಂದು ಆರಂಭವಾದ ವಿಧಾನ ಮಂಡಲದ ಅಧಿವೇಶನದಲ್ಲಿ ಗೌರವಾನ್ವಿತ ರಾಜ್ಯಪಾಲರು ಉಭಯ ಸದನಗಳನ್ನು ಉದ್ದೇಶಿಸಿ ಭಾಷಣ ಮಾಡಿದ ನಂತರ ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನಲ್ಲಿ ಇತ್ತೀಚೆಗೆ ನಿಧನರಾದ ವಿಧಾನ ಪರಿಷತ್ತಿನ ಮಾಜಿ ಶಾಸಕರಾದ ಪಟೇಲ್ ಶಿವರಾಂ, ಭಾರತದ ಮಾಜಿ ಪ್ರಧಾನ ಮಂತ್ರಿಗಳಾದ ಮನಮೋಹನ ಸಿಂಗ್. ಹಿರಿಯ ಸಾಹಿತಿ ನಾ.ಡಿಸೋಜ, ಸಂಗೀತ ನಿರ್ದೇಶಕರಾದ ಎಸ್.ಸೋಮಸುಂದರಂ, ಚಲನಚಿತ್ರ ನಟ ಆರ್.ವಿಜಯಕುಮಾರ್ (ಸರಿಗಮ ವಿಜಿ) ಹಾಗೂ ಜಾನಪದ ಹಾಡುಗಾರ್ತಿ ಸುಕ್ರಿ ಬೊಮ್ಮಗೌಡ ಅವರುಗಳಿಗೆ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಸಂತಾಪ ಸೂಚಿಸಿದರು.

ವಿಧಾನಸಭೆಯಲ್ಲಿ ಮಾಜಿ ಪ್ರಧಾನಮಂತ್ರಿಯವರಾದ ಡಾ: ಮನಮೋಹನ್ ಸಿಂಗ್, ಲೋಕಸಭೆಯ ಮಾಜಿ ಸದಸ್ಯರು ಹಾಗೂ ವಿಧಾನಸಭೆಯ ಮಾಜಿ ಸದಸ್ಯರಾಗಿದ್ದ ಎಂ. ಶ್ರೀನಿವಾಸ್, ವಿಧಾನಸಭಾ ಸದಸ್ಯರಾದ ಶ್ರೀಮತಿ ಜಯವಾಣಿ ಮಂಚೇಗೌಡ, ಖ್ಯಾತ ಚಿತ್ರ ನಿರ್ಮಾಪಕ ಶ್ಯಾಮ್ ಬೆನಗಲ್, ಹಿರಿಯ ಸಾಹಿತಿ ನಾ. ಡಿಸೋಜಾ, ಜಾನಪದ ಹಾಡುಗಾರ್ತಿ ಸುಕ್ರಿ ಬೊಮ್ಮಗೌಡ, ಅವರುಗಳು ನಿಧನ ಹೊಂದಿದ್ದು ಇವರುಗಳಿಗೆ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ ಖಾದರ್ ಫರೀದ್ ಅವರು ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿ ಸಂತಾಪ ವ್ಯಕ್ತಪಡಿಸಿದರು. ಪಟೇಲ್ ಶಿವರಾಂ: ವಿಧಾನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ ಪಟೇಲ್ ಶಿವರಾಂ ಅವರು 2025 ನೇ ಜನವರಿ 16 ರಂದು ನಿಧನ ಹೊಂದಿರುತ್ತಾರೆ. ಶ್ರೀಯುತರು 1950ರ ಏಪ್ರಿಲ್ 10ರಂದು ಹಾಸನ ಜಿಲ್ಲೆಯ ದೊಡ್ಡಗೇಣಿಗೆರೆ ಗ್ರಾಮದಲ್ಲಿ ಜನಿಸಿದ್ದು, ವೃತ್ತಿಯಲ್ಲಿ ಕೃಷಿಕರಾಗಿದ್ದರು. 2010 ರಿಂದ 2016ರ ಅವಧಿಯಲ್ಲಿ ಹಾಸನ ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿ?ತ್ತಿಗೆ ಚುನಾಯಿತರಾಗಿ ಸೇವೆಯನ್ನು ಸಲ್ಲಿಸಿದ್ದರು. 1978–83ರ ಅವಧಿಗೆ ದೊಡ್ಡಗೇಣಿಗೇರೆ ಗ್ರಾಮ ಪಂಚಾಯತ್ ಅಧ್ಯಕ್ಷರಾಗಿ, 1984ರಲ್ಲಿ ಹಾಸನ ಜಿಲ್ಲಾ ಪಂಚಾಯತ್‌ನ ಅಧ್ಯಕ್ಷರಾಗಿ, ಹಾಸನ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷರಾಗಿ, ಹಾಸನ ಜಿಲ್ಲೆಯ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ, ನವದೆಹಲಿಯ ಕ್ರಿಪ್ಕೊ ಸದಸ್ಯರಾಗಿ ಹಾಗೂ ಅಪೆಕ್ಸ್ ಬ್ಯಾಂಕ್ ನಿರ್ದೇಶಕರಾಗಿ ಮತ್ತು ಡಿ.ಸಿ.ಸಿ.ಬ್ಯಾಂಕ್ ಹಾಸನ ಇದರ ಅಧ್ಯಕ್ಷರಾಗಿ ಸೇವೆಯನ್ನು ಸಲ್ಲಿಸಿದ್ದರು. ಸಹಕಾರಿ ಚಳುವಳಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು. ಶ್ರೀಯುತರು ರಾಜ್ಯ ಮಟ್ಟದ ಸಹಕಾರ ರತ್ನ ಪ್ರಶಸ್ತಿಗೆ ಭಾಜನರಾಗಿದ್ದರು.

ಡಾ: ಮನಮೋಹನ್ ಸಿಂಗ್: ಭಾರತದ ಮಾಜಿ ಪ್ರಧಾನಿ, ರಾಷ್ಟ್ರದ ಅರ್ಥಕ್ರಾಂತಿಯ ಹರಿಕಾರ ಹಾಗೂ ಶಿಕ್ಷಣ ತಜ್ಞರಾಗಿದ್ದ ಡಾ: ಮನಮೋಹನ್ ಸಿಂಗ್ ಅವರು 2024ನೇ ಡಿಸೆಂಬರ್ 26 ರಂದು ನಿಧನ ಹೊಂದಿರುತ್ತಾರೆ.

ಶ್ರೀಯುತರು 1932ರ ಸೆಪ್ಟೆಂಬರ್ 26ರಂದು ಅವಿಭಜಿತ ಭಾರತದ ಪಂಜಾಬ್‌ನ ಗಾಡ್‌ನಲ್ಲಿ ಜನಿಸಿದ್ದು, ಅರ್ಥಶಾಸ್ತ್ರದಲ್ಲಿ ಪಿಎಚ್‌ಡಿ ಪದವೀಧರರಾಗಿದ್ದು, ಕೇಂಬ್ರಿಡ್ಜ್ ವಿಶ್ವವಿದ್ಯಾಲಯದಿಂದ ಅರ್ಥಶಾಸ್ತ್ರದಲ್ಲಿ ಆನರ್ಸ್ ಪದವಿ ಹಾಗೂ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದಿಂದ ಡಿ.ಫಿಲ್. ಗೌರವ ಪಡೆದಿದ್ದು, ಪಂಜಾಬ್ ಹಾಗೂ ದೆಹಲಿ ವಿಶ್ವವಿದ್ಯಾಲಯದಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ್ದರು.

ಸಂಜೆ ಮುಗಿಲು
ಬುಧವಾರ
5.3.2025



### ಕಲಾಪದಲ್ಲಿ ಸಚಿವ ಎಚ್.ಕೆ.ಪಾಟೀಲ್ ಹೇಳಿಕೆ

# ಕರಾವಳಿ ಕರ್ನಾಟಕದ ಪ್ರವಾಸೋದ್ಯಮಕ್ಕೆ ವಿಶೇಷ ಗಮನ

**ಬೆಂಗಳೂರು :** ಕರಾವಳಿ ಕರ್ನಾಟಕದ ಪ್ರವಾಸೋದ್ಯಮಕ್ಕೆ ವಿಶೇಷ ಗಮನ ಹರಿಸಲು ಪ್ರವಾಸೋದ್ಯಮ ನೀತಿಯ ಅವಧಿಯಲ್ಲಿ ಕರಾವಳಿ ಪ್ರವಾಸೋದ್ಯಮಕ್ಕೆ ವಿಶೇಷ ಒತ್ತು ನೀಡಲಾಗುವುದು ಮತ್ತು ಜವಾಬ್ದಾರಿಯುತ ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾದ ವಿಶ್ವ ದರ್ಜೆಯ ಸೌಲಭ್ಯಗಳೊಂದಿಗೆ ಕರಾವಳಿ ಕರ್ನಾಟಕವನ್ನು ಉತ್ತಮ ಗುಣಮಟ್ಟದ ತಾಣವಾಗಿ ಸುಸ್ಥಿರವಾಗಿ ಅಭಿವೃದ್ಧಿಪಡಿಸಲು ಪ್ರಯತ್ನಗಳನ್ನು ಮಾಡಲಾಗುವುದು. ಕರ್ನಾಟಕ ಸರ್ಕಾರವು ರಾಜ್ಯದ ಸಮಗ್ರ 320 ಕಿಮೀ ಉದ್ದದ ಕರಾವಳಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಅಗತ್ಯವಾದ ಒತ್ತು ನೀಡಲು ವಿಶೇಷ ಹಣಕಾಸು ಪ್ಯಾಕೇಜುಗಳನ್ನು ಸೃಜಿಸಲಾಗುವುದು ಎಂದು ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು.

ಇಂದು ವಿಧಾನಸಭೆಯಲ್ಲಿ ಬೈಂದೂರು ಶಾಸಕರಾದ ಗುರುರಾಜ್ ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕರಾವಳಿ ಕರ್ನಾಟಕವು 2023ರಲ್ಲಿ 8 ಕೋಟಿಗೂ ಹೆಚ್ಚು ಪ್ರವಾಸಿಗರನ್ನು ಕಂಡಿದೆ. ಕರ್ನಾಟಕದ ಒಟ್ಟು ಪ್ರವಾಸಿಗರ ಸಂಖ್ಯೆಯಲ್ಲಿ ಕರಾವಳಿ ಕರ್ನಾಟಕಕ್ಕೆ, ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ಸುಮಾರು ಶೇಕಡ 12 ರಿಂದ 15ರಷ್ಟಿದ್ದು, ಕರಾವಳಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಅಪಾರ ಸಾಮರ್ಥ್ಯವಿದೆ. ಕರಾವಳಿ ಕರ್ನಾಟಕದ ಕಾರ್ಯಚಟುವಟಿಕೆಗಳನ್ನು ಯೋಜಿಸಲು ಮತ್ತು ಚಾಲನೆಗೊಳಿಸಲು ಅದಕ್ಕಾಗಿಯೇ ಸಮರ್ಪಿತವಾದ ಕರಾವರಳಿ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯನ್ನು ರಚಿಸಲಾಗುವುದು. ಕರಾವಳಿ ಅಭಿವೃದ್ಧಿಗಾರಿ ವಿಶೇಷ ಉಪಕ್ರಮಗಳನ್ನು ಕೈಗೊಳ್ಳಲು ಮತ್ತು ಪ್ರವಾಸೋದ್ಯಮ ಅಭಿವೃದ್ಧಿಗೆ ಹೆಚ್ಚುವರಿ ಪ್ರೋತ್ಸಾಹವನ್ನು ನೀಡಲು ಕರಾವಳಿ ಅಭಿವೃದ್ಧಿ ಮಂಡಳಿಗೆ ಅಧಿಕಾರ ನೀಡಲಾಗುತ್ತದೆ. ಕರಾವಳಿ ಕರ್ನಾಟಕದಲ್ಲಿ ಯೋಜಿತ ಮತ್ತು ಸುಸ್ಥಿರ ಪ್ರವಾಸೋದ್ಯಮ ಅಭಿವೃದ್ಧಿಯನ್ನು ಉತ್ತೇಜಿಸಲು ಮತ್ತು ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಸಮುದಾಯದ ಸಹಭಾಗಿತ್ವದ ಸಮನ್ವಯತೆಯನ್ನು ಖಚಿತಪಡಿಸಿಕೊಳ್ಳಲು ಸಮಗ್ರ ಕರಾವಳಿ ಮಾಸ್ಟರ್ ಪ್ಲಾನ್ ಸಿದ್ಧಪಡಿಸಲಾಗುವುದು ಹಾಗೂ ಕರಾವಳಿ ಕರ್ನಾಟಕದ ಯೋಜಿತ ಅಭಿವೃದ್ಧಿ ಮತ್ತು ಸಿಆರ್‌ಝಡ್ ಮಾನದಂಡಗಳೊಂದಿಗೆ ಕರ್ನಾಟಕ ಕರಾವಳಿ ಪಟ್ಟಣಗಳು ಮತ್ತು ಕಡಲ ತೀರಗಳಾದ್ಯಂತ ಪ್ರವಾಸೋದ್ಯಮ ಕೊಡುಗೆಗಳನ್ನು ಸಂಪರ್ಕಿಸುವಂಥ ಕರಾವಳಿ ವಲಯಗಳನ್ನು ಅಭಿವೃದ್ಧಿಪಡಿಸುತ್ತದೆ. ಪ್ರವಾಸೋದ್ಯಮ ಯೋಜನೆಗಳನ್ನು ಎಲ್ಲೆಲ್ಲಿ ಅಭಿವೃದ್ಧಿಪಡಿಸಬಹುದು ಎಂಬುದಕ್ಕೆ ಮಾರ್ಗದರ್ಶನವಾಗಿ ಕಾಯನಿರ್ವಹಿಸಲು ಯೋಜಿತ ರೀತಿಯಲ್ಲಿ ಸಂಪರ್ಕ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸಲಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿಧಾನಸಭೆಯಲ್ಲಿ ಉತ್ತರಿಸಿದರು.



## ಬಾಗೇಪಲ್ಲಿ ತಾಲ್ಲೂಕು ಕ್ರೀಡಾಂಗಣದ ಸೌಲಭ್ಯಗಳ ಉನ್ನತೀಕರಣ

ಬಾಗೇಪಲ್ಲಿ ತಾಲ್ಲೂಕಿನ ಕ್ರೀಡಾಂಗಣದ ಸೌಲಭ್ಯಗಳ ಉನ್ನತೀಕರಣಕ್ಕಾಗಿ 2024-25ನೇ ಸಾಲಿಲ್ಲಿ ರೂ. 300.00ಲಕ್ಷ ವೆಚ್ಚದಲಲಿ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಎಂದು ತಿಳಿಸಿದರು.

ಇಂದು ವಿಧಾನಸಭೆಯಲ್ಲಿ ಬಾಗೇಪಲ್ಲಿ ಶಾಸಕರಾದ ಸುಬ್ಬಾರೆಡಿಡಿ ಎಸ್.ಎನ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಬಾಗೇಪಲ್ಲಿ ತಾಲ್ಲೂಕು ಕ್ರೀಡಾಂಗಣದ ಸೌಲಭ್ಯಗಳ ಉನ್ನತೀಕರಣಕ್ಕಾಗಿ ಈಗಾಗಲೇ ಇರುವ ಸೌಲಭ್ಯಗಳ ಜೊತೆಗೆ ಬೋರ್ ವೆಲ್ ಕೊರೆದು, ನೀರು ಸರಬರಾಜು ವ್ಯವಸ್ಥೆ ಕಲ್ಪಿಸುವುದು, ಕಾಂಪೌಂಡ್ ಗೋಡೆ ನಿರ್ಮಾಣ, ಮಳೆ ನೀರು ಚರಂಡಿ ನಿರ್ಮಿಸುವುದರ ಜೊತೆಗೆ ಗುಡಿಬಂಡೆ ತಾಲ್ಲೂಕಿನ ಅಮಾನಿಬೈರ ಸಾಗರ ಗ್ರಾಮದಲ್ಲಿ 6.00 ಎಕರೆ ನಿವೇಶವನ್ನು ಗುರುತಿಸಿದ್ದು, ತಾಲ್ಲೂಕು ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರ ಮಾಡಾಗಿದ್ದು ಇದನ್ನು ಇಲಾಖೆಯ ವಶಕ್ಕೆ ಪಡೆಯಲಾಗಿದೆ ಎಂದು ಮುಖ್ಯಮಂತ್ರಿಗಳ ಪರವಾಗಿ ಕಂದಾಯ ಸಚಿವರು ವಿಧಾನಸಭೆಯಲ್ಲಿ ಉತ್ತರಿಸಿದರು.

## ಆರು ಲಕ್ಷ ಉದ್ಯೋಗವಕಾಶ

ಇನ್ವೆಸ್ಟ್ ಕರ್ನಾಟಕ 2025ರ ಸಮಾವೇಶದಲ್ಲಿ ಒಡಂಬಡಿಕೆ ಮಾಡಿಕೊಂಡಿರುವ ಹಾಗೂ ಅನುಮೋದನೆ ಪಡೆದಿರುವ ಯೋಜನೆಗಳಿಂದ ಅಂದಾಜು 6 ಲಕ್ಷ ಜನರಿಗೆ ಉದ್ಯೋಗ ದೊರೆಯಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಎಂ.ಬಿ. ಪಾಟೀಲ್ ಅವರು ತಿಳಿಸಿದರು. ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ವಿಧಾನ ಪರಿಷತ್ ಸದಸ್ಯ ಎಸ್.ವಿ ಸಂಕನೂರ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಇನ್ವೆಸ್ಟ್ ಕರ್ನಾಟಕ ? 2025ರ ಸಮಾವೇಶವನ್ನು ರೂ 90.00 ಕೋಟಿಗಳ ವೆಚ್ಚದಲ್ಲಿ ಆಯೋಜಿಸಲು ಸರ್ಕಾರವು ಅನುಮೋದನೆ ನೀಡಿರುತ್ತದೆ. ಇದರಲ್ಲಿ ಇಲ್ಲಿಯವರೆಗೆ ರೂ 75.00 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಸಮಾವೇಶವು ಇತ್ತಿಚೆಗೆ ಫೆಬ್ರವರಿ 14ರಂದು ಮುಕ್ತಾವಾಗಿದ್ದು, ಸಮಾವೇಶಕ್ಕಾಗಿ ತಗುಲಿದ ವಾಸ್ತವಿಕ ವೆಚ್ಚದ ವಿವರಗಳನ್ನು ಕ್ರೋಢೀಕರಿಸಲಾಗುತ್ತಿದ್ದು, ಅಂತಿಮ ಹಂತದಲ್ಲಿದೆ ಎಂದು ತಿಳಿಸಿದರು. ಸಮಾವೇಶದಲ್ಲಿ ಒಟ್ಟು 3250 ಉದ್ದಿಮೆದಾರರು ಭಾಗವಹಿಸಿದ್ದು, ವಿವಿಧ ರಾಜ್ಯಗಳಿಂದ 266, ವಿದೇಶಗಳಿಂದ 72, ಕರ್ನಾಟಕ ರಾಜ್ಯದಿಂದ 2892 ಉದ್ದಿಮೆದಾರರು ಭಾಗವಹಿಸಿದ್ದರು. ಒಟ್ಟು 98 ಕಂಪನಿಗಳೊಂದಿಗೆ ಒಡಂಬಡಿಕೆಗಳಾಗಿವೆ. ಅವುಗಳ ಹೂಡಿಕೆಯು ರೂ. 6,23,970 ಕೋಟಿಯಾಗಲಿದೆ. ಅಲ್ಲದೆ, ರೂ. 4,03,533 ಕೋಟಿ ಬಂಡವಾಳ ಹೂಡಿಕೆ ಮಾಡಲು 1101 ಕಂಪನಿಗಳು ಸಂಬಂಧಿಸಿದ ಸಮಿತಿಗಳಿಂದ ಅನುಮೋದನೆ ಪಡೆದಿರುತ್ತಾರೆ ಎಂದು ತಿಳಿಸಿದರು.

ಈ ಹಿಂದೆ ನಡೆದ ಇನ್ವೆಸ್ಟ್ ಕರ್ನಾಟಕ - 2022ರ ಸಮಾವೇಶದಲ್ಲಿ ಉದ್ಯಮ ಪ್ರಾರಂಭಿಸಲು 57 ಕಂಪನಿಗಳೊಂದಿಗೆ ಒಟ್ಟು 5,41,696/- ಕೋಟಿ ಬಂಡವಾಳ ಹೂಡಲು ಒಪ್ಪಂದಗಳಿಗೆ ಸಹಿ ಮಾಡಲಾಗಿತ್ತು. ಸದರಿ 57 ಕಂಪನಿಗಳಲ್ಲಿ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಯಲ್ಲಿ ಒಟ್ಟು 20 ಕಂಪನಿಗಳಿಗೆ ಅನುಮೋದನೆ ನೀಡಲಾಗಿದ್ದು, ಈ ಪ್ರಸ್ತಾವಗಳಿಂದ ಒಟ್ಟು ರೂ. 2,01,167 ಕೋಟಿ ಬಂಡವಾಳ ಹೂಡಿಕೆಯಾಗಲಿದೆ ಹಾಗೂ 70,740 ಉದ್ಯೋಗ ಸೃಜನೆಯಾಗಲಿದೆ ಇವುಗಳಲ್ಲಿ 2 ಯೋಜನೆಗಳು ಅನುಷ್ಠಾನಗೊಂಡಿರುತ್ತದೆ. ಮುಂದುವರೆದು ಈ ಸಮಾವೇಶದ ಸಮಯದಲ್ಲಿ 606 ಯೋಜನೆಗಳಿಗೆ ಒಟ್ಟು ರೂ 3,26,015/- ಹೂಡಿಕೆಗೆ ಏಕ ಗವಾಕ್ಷಿ ಸಮಿತಿ ಸಭೆಗಳಲ್ಲಿ ಅನುಮೋದನೆ ನೀಡಲಾಗಿತ್ತು ಎಂದು ತಿಳಿಸಿದರು.

## ಕಾಜಿ ಅರ್ಷದ್ ಅಲಿ ಅವರಿಗೆ ಸಭಾಪತಿಗಳಿಂದ ಸಂತಾಪ

ವಿಧಾನ ಪರಿಷತ್ ಸದಸ್ಯರೂ ಹಾಗೂ ಹಿರಿಯ ಪತ್ರಕರ್ತರೂ ಆಗಿದ್ದ ಕಾಜಿ ಅರ್ಷದ್ ಅಲಿ ಅವರು 2025ನೇ ಮಾರ್ಚ್ 3 ಸೋಮವಾರದಂದು ಸಂಜೆ ಹೃದಯಾಘಾತದಿಂದ ನಿಧನರಾದರು. ಶ್ರೀಯುತರು ಬಿ.ಡಿ.ಎ. ಅಧ್ಯಕ್ಷರಾಗಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿಯೂ ಸಹ ಕೆಲಸ ನಿರ್ವಹಿಸಿ ಬೀದರ್ ಜಿಲ್ಲೆಗೆ ಅಪಾರ ಕೊಡುಗೆಯನ್ನು ನೀಡಿದ್ದಾರೆ. ಇವರು ಮಾಸ್ ಅಲ್ಲ ಕ್ಲಾಸ್ ರಾಜಕಾರಣಿಯಾಗಿದ್ದರು. ರಾಜಕರಣದಲ್ಲಿ ಬೆಳೆದರೂ ಅವರು ಪತ್ರಿಕಾ ವೃತ್ತಿಯಲ್ಲಿ ಸದಾ ತೊಡಗಿಸಿಕೊಂಡಿದ್ದರು. ದೇಹದಲ್ಲಿ ಶಕ್ತಿ ಇರುವ ತನಕ ಬರವಣಿಗೆಯನ್ನು ಮುಂದುವರೆಸಿದ್ದರು. ಉರ್ದು ಮತ್ತು ಹಿಂದಿ ಪತ್ರಿಕೆಗಳ ಸಂಪಾದಕರಾಗಿದ್ದರು. ಪ್ರಜಾವಾಣಿ ಪತ್ರಿಕೆಯಲ್ಲಿ ಅನೇಕ ಲೇಖನಗಳನ್ನು ಸಹ ಬರೆದ್ದರು. ಬಹಳ ಮೃದು ಸ್ವಭಾವದ ವ್ಯಕ್ತಿತ್ವ ಹೊಂದಿದ್ದ ಇವರು ಸಾಮಾಜಿಕ ಕಾಳಜಿ, ಬದ್ಧತೆಗೆ ಹೆಸರಾಗಿದ್ದರು. ನಿಷ್ಕಳಂಕ ವ್ಯಕ್ತಿತ್ವವನ್ನು ಹೊಂದಿದ್ದರು. ಪತ್ರಕರ್ತರಿಗೆ ಬೆನ್ನು ತಟ್ಟಿ ಹುರುದುಂಬಿಸುತ್ತಿದ್ದರು. ಅವರ ಅಗಲಿಕೆ ಪತ್ರಿಕಾ ರಂಗಕ್ಕೆ ಹಾಗೂ ರಾಜಕರಣಕ್ಕೆ ತುಂಬಲಾರದ ನಷ್ಟವನ್ನುಂಟು ಮಾಡಿದೆ. ಭಗವಂತ ಅವರ ಅತ್ಮಕೆ ಶಾಂತಿ ನೀಡಲಿ ಹಾಗೂ ಅವರ ಕುಟುಂಬದವರಿಗೆ ಅವರ ಅಗಲಿಕೆಯಿಂದಾಗಿರುವ ನಷ್ಟವನ್ನು ತುಂಬುವಂತ ಶಕ್ತಿ ನೀಡಲಿ ಎಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಸಂತಾಪ ವ್ಯಕ್ತಪಡಿಸಿದರು.

ಸಂತಾಪ ಸೂಚಕವನ್ನು ಬೆಂಬಲಿಸಿ ಮಾತನಾಡಿದ ಅರಣ್ಯ, ಜೀವಿ ಪರಿಸ್ಥಿತಿ ಹಾಗೂ ಪರಿಸರ ಇಲಾಖೆ ಸಚಿವ ಈಶ್ವರ್ ಬಿ. ಖಂಡ್ರೆ, ಕಾಜಿ ಅರ್ಷದ್ ಅಲಿ ಅವರು ಓರ್ವ ಸಜ್ಜನ ರಾಜಕಾರಣಿಯಾಗಿದ್ದರು. ಅಲ್ಲದೇ ಪತ್ರಕರ್ತರೂ ಸಹ ಆಗಿದ್ದರು. ಅವರು ಬೀದರ್ ಜಿಲ್ಲೆಗೆ ತನ್ನದೇ ಆದ ಕೊಡುಗೆಯನ್ನು ನೀಡಿದ್ದಾರೆ ಎಂದು ತಿಳಿಸುತ್ತಾ ಸದನದ ಪರವಾಗಿ, ಎಲ್ಲರ ಪರವಾಗಿ ನಾಡಿನ ಜನತೆಯ ಪರವಾಗಿ ಮೃತ ಆತ್ಮಕ್ಕೆ ಶಾಂತಿಯನ್ನು ನೀಡಲಿ ಎಂದು ತಮ್ಮ ಸಂತಾಪವನ್ನು ವ್ಯಕ್ತಪಡಿಸಿದರು.

ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡುತ್ತಾ, ಕಾಜಿ ಅರ್ಷದ್ ಅಲಿ ಅವರು ಎರಡು ಬಾರಿ ವಿಧನ ಪರಿಷತ್ ಸದಸ್ಯರಾಗಿ ಕಾರ್ಯ ನಿರ್ವಹಿಸಿದ್ದಾರೆ. ಮಾಜಿ ಮುಖ್ಯ ಮಂತ್ರಿ ದಿ. ಧರ್ಮಸಿಂಗ್ ಅವರೊಂದಿಗೆ ಉತ್ತಮ ಒಡನಾಟವನ್ನು ಇಟ್ಟುಕೊಂಡಿದ್ದರು. ಉತ್ತರ ಭಾಗದ ಜಿಲ್ಲೆಗಳ ಸಮಸ್ಯೆಗಳು ಬಂದಾಗ ಅವರು ಅದರ ಪರವಾಗಿ ಎದ್ದು ನಿಲ್ಲುತ್ತಿದ್ದರು. ಅವರ ಅಗಲಿಕೆ ನಾಡಿಗೆ ತುಂಬಲಾರದ ನಷ್ಟವನ್ನುಂಟು ಮಾಡಿದೆ ಎಂದು ತಿಳಿಸುತ್ತಾ, ಮೃತರ ಆತ್ಮಕ್ಕೆ ಶಾಂತಿಯನ್ನು ಕೋರಿದರು.

ನಂತರ ಮೃತರ ಗೌರವಾರ್ಥ ಸದನದಲ್ಲಿ ಎಲ್ಲಾ ಸದಸ್ಯರು ಒಂದು ನಿಮಿಷಗಳ ಮೌನಾಚರಣೆ ಮಾಡಿದರು.



## ಅಕ್ರಮ ಮದ್ಯ ಮಾರಾಟ ತಡೆಗೆ ಕ್ರಮ : ಸಚಿವ ಎಚ್.ಕೆ.ಪಾಟೀಲ್

**ಬೆಂಗಳೂರು :** ಅಕ್ರಮವಾಗಿ ಮದ್ಯ ಮಾರಾಟ ಮಾಡುವುದನ್ನು ತಡೆಗಟ್ಟಲು ಅಬಕಾರಿ ಇಲಾಖೆಯಿಂದ ವಲಯ ವ್ಯಾಪ್ತಿಯ ರೂಟ್‌ಗಳಲ್ಲಿ ನಿರಂತರವಾಗಿ ಗಸ್ತು ನಡೆಸಲಾಗುತ್ತಿದೆ. ಗಸ್ತಿನ ಸಮಯದಲ್ಲಿ ಮತ್ತು ಸಾರ್ವಜನಿಕರಿಂದ ವಿಶೇಷವಾಗಿ ಮಹಿಳೆ / ಮಹಿಳಾ ಸಂಘಗಳಿಂದ ದೂರುಗಳು ಸ್ವೀಕೃತವಾದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಸ್ಥಳಗಳ ಮೇಲೆ ದಾಳಿ ನಡೆಸಿ, ಅಕ್ರಮಗಳು ಕಂಡುಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳನುಸಾರ ಪ್ರಕರಣಗಳನ್ನು ದಾಖಲಿಸಿ ಅಕ್ರಮ ಮದ್ಯ ಮಾರಾಟ ತಡೆಗೆ ಕ್ರಮ ವಹಿಸಲಾಗುತ್ತಿದೆ ಎಂದು ವಿಧಾನಸಭೆಯಲ್ಲಿ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರಾದ ಹೆಚ್.ಕೆ.ಪಾಟೀಲ್ ತಿಳಿಸಿದರು. ಇಂದು ವಿಧಾನಸಭೆಯಲ್ಲಿ ಬೈಲಹೊಂಗಲ ಶಾಸಕರಾದ ಕೌಜಲಗಿ ಮಹಾಂತೇಶ್ ಶಿವಾನಂದ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಎಲ್ಲಾ ಮದ್ಯ ಮಾರಾಟ ಸನ್ನದುಗಳನ್ನು ನಿಯಮಿತವಾಗಿ ಮಾಸಿಕವಾಗಿ ಪರಿಶೀಲಿಸಲಾಗುತ್ತಿದ್ದು ಕಾಯ್ದೆ/ನಿಯಮ/ಸನ್ನದು ಷರತ್ತು ಉಲ್ಲಂಘನೆಯಾದಲ್ಲಿ ಅಂತಹ ಸನ್ನದುದಾರರ ವಿರುದ್ಧ ಅಬಕಾರಿ ಕಾಯ್ದೆ ಪ್ರಕರಣ ದಾಖಲಿಸಲಾಗುತ್ತಿದ್ದು, ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ ಅಲ್ಲದೇ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಅತ್ತಿಕ್ಕಲು ಕ್ರಮ ವಹಿಸಲು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಸಂರಕ್ಷಣಾಧಿಕಾರಿಗಳೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದೆ.

ಗ್ರಾಮ ಸಭೆಗಳಲ್ಲಿ ಮತ್ತು ವಿದ್ಯಾರ್ಥಿಗಳಿಗೆ ಶಾಲಾ/ಕಾಲೇಜುಗಳಲ್ಲಿ ಮದ್ಯ ವ್ಯಸನ ಮತ್ತು ಮಾದಕ ವಸ್ತುಗಳ ಸೇವನೆಯಿಂದ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಆರೋಗ್ಯಕ್ಕೆ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಕ್ರಮ ವಹಿಸಲಾಗಿದೆ. ಅಲ್ಲದೇ 2024-25ನೇ ಸಾಲಿನ ಜನವರಿ ಅಂತ್ಯದವರೆಗೆ 17,390 ಮೊಕದ್ದಮೆಗಳನ್ನು ದಾಖಲಿಸಿ ಅದೇ ಅವಧಿಯಲ್ಲಿ 18,253 ಆರೋಪಿತರನ್ನು ದಸ್ತಗಿರಿಗೊಳಪಡಿಸಲಾಗಿರುತ್ತದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿಧಾನಸಭೆಯಲ್ಲಿ ಉತ್ತರಿಸಿದರು.

## ಅನಧಿಕೃತ ಸತ್ತುಗಳನು ಆಸ್ತಿ ತೆರಿಗೆ ವ್ಯಾಪ್ತಿಗೆ ಒಳಪಡಿಸಿ ಇ-ಖಾತಾ ನೀಡಲು ಕ್ರಮ

**ಬೆಂಗಳೂರು:** ಪ್ರಸ್ತುತ ಅನಧಿಕೃತ ಸ್ವತ್ತುಗಳನ್ನು ಆಸ್ತಿ ತೆರಿಗೆ ವ್ಯಾಪ್ತಿಗೆ ಒಳಪಡಿಸಿ ಇ-ಖಾತಾ ನೀಡಲು ಕ್ರಮ ವಹಿಸಲಾಗಿರುತ್ತದೆ ಎಂದು ಪೌರಾಡಳಿತ ಮತ್ತು ಹಜ್ ಸಚಿವ ರಹೀಂಖಾನ್ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿಷತ್ ಸದಸ್ಯ ಪ್ರತಾಪ್ ಸಿಂಹ ನಾಯಕ್. ಕೆ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕರ್ನಾಟಕ ಮುನಿಸಿಪಲ್ ಕಾಯ್ದೆಗಳ ತಿದ್ದುಪಡಿಯಂತೆ ಕರ್ನಾಟಕ ಪೌರಸಭೆಗಳ (ತೆರಿಗೆ) ನಿಯಮಗಳು 1995 ಮತ್ತು ಕರ್ನಾಟಕ ಪೌರನಿಗಮಗಳ ಅಧಿನಿಯಮ 1976 ಶೆಡ್ಯೂಲ್ 3ರ ತೆರಿಗೆ ನಿಯಮಗಳಿಗೆ ತಿದ್ದುಪಡಿ ತರಲಾಗಿದೆ. ಅದರಂತೆ ಅನಧಿಕೃತ ಸ್ವತ್ತುಗಳನ್ನು ತೆರಿಗೆ ವ್ಯಾಪ್ತಿಗೆ ತಂದು ಇ-ಖಾತಾ ವಿತರಿಸಲು ಈಗಾಗಲೇ ಕ್ರಮ ವಹಿಸಲಾಗಿರುತ್ತದೆ ಎಂದು ತಿಳಿಸಿದರು. ಇ-ಆಸ್ತಿ ತಂತ್ರಾಂಶದಲ್ಲಿ ಖಾತಾ ಸೃಜನೆ ಮಾಡಲು ಅನುಸರಿಸಬೇಕಾದ ಕ್ರಮಗಳು ಮತ್ತು ತೆಗೆದುಕೊಳ್ಳಬೇಕಾದ ದಾಖಲೆಗಳ ಕುರಿತು ವ್ಯವಸ್ಥಿತ ಕಾರ್ಯಾಚರಣೆ ವಿಧಾನವನ್ನು ಪೌರಾಡಳಿತ ನಿರ್ದೇಶನಾಲಯದಿಂದ 2025ನೇ ಫೆಬ್ರವರಿ 17ರಂದು ಹೊರಡಿಸಲಾಗಿದೆ ಹಾಗೂ 2025ನೇ ಫೆಬ್ರವರಿ 11ರಿಂದ ಅನಧಿಕೃತ ಸ್ವತ್ತುಗಳಿಗೆ ಖಾತ ನೀಡಲು ಇ-ಆಸ್ತಿ ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.



## ಕಾಗದಪತ್ರಗಳ ಮಂಡನೆ

ಬೆಂಗಳೂರು: ಉಪಮುಖ್ಯಮಂತ್ರಿಗಳು, ಗೃಹಮಂತ್ರಿಗಳು, ಕಂದಾಯ ಸಚಿವರು, ಆರೋಗ್ಯ ಸಚಿವರು, ಆಹಾರ ಮತ್ತು ನಾಗರೀಕ ಸಚಿವರು, ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು, ಸಮಾಜ ಕಲ್ಯಾಣ ಇಲಾಖೆ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು, ವಸತಿ ಸಚಿವರು, ವಕ್ಫ್ ಸಚಿವರು, ಅರಣ್ಯ, ಜೀವಿಶಾಸ್ತ್ರ ಸಚಿವರು, ಕೃಷಿ ಸಚಿವರು, ವೈದ್ಯಕೀಯ ಸಚಿವರು, ಪಶುಸಂಗೋಪನೆ ಸಚಿವರು, ಹಿಂದುಳಿದ ವರ್ಗಗಳ ಸಚಿವರು, ನಗರಾಭಿವೃದ್ಧಿ ಸಚಿವರು, ಉನ್ನತ ಶಿಕ್ಷಣ ಸಚಿವರು, ಸಣ್ಣ ನೀರಾವರಿ ಸಚಿವರು ವಿಧಾನಸಭೆಯಲ್ಲಿ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳನ್ನು ಮಂಡಿಸಿದರು.

## ರೈತರಿಗೆ ಯಾವುದೇ ತಾರತಮ್ಯವಿಲ್ಲದೆ ಪರಿಹಾರ ನೀಡಲಾಗಿದೆ

ಮೆ। ಶ್ರೀ ಸಿಮೆಂಟ್ ಲಿಮಿಟೆಡ್ ಘಟಕಕ್ಕೆ ಅನುಷ್ಠಾನಕ್ಕೆ ರೈತರಿಂದ ಪಡೆಯಲಾದ ಭೂಮಿಗೆ ಯಾವುದೇ ತಾರತಮ್ಯವಿಲ್ಲದೆ ಪರಿಹಾರ ಮೊತ್ತವನ್ನು ಪಾವತಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಅವರು ತಿಳಿಸಿದರು. ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿಷತ್ ಸದಸ್ಯ ಡಾ. ತಳವಾರ್ ಸಾಬಣ್ಣ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು 2010ನೇ ಜನವರಿ 05ರಂದು ಎಸ್.ಎಚ್.ಎಲ್.ಸಿ.ಸಿ ಸಭೆಯಲ್ಲಿ ಮೆ। ಶ್ರೀ ಸಿಮೆಂಟ್ ಲಿಮಿಟೆಡ್ ಘಟಕಕ್ಕೆ ರೂ 100ಕೋಟಿ ಬಂಡವಾಳ ಹೂಡಿಕೆ ಮಾಡಿ 3 ಎಚ್.ಟಿ.ಪಿ.ಎ ಸಿಮೆಂಟ್ ಘಟಕವನ್ನು ಕೊಡ್ಲಾ ಹಾಗೂ ಬೆನಕನಹಳ್ಳಿ ಗ್ರಾಮ ಸೇಡಂ ತಾಲ್ಲೂಕು ಕಲಬುರಗಿ ಜಿಲ್ಲೆ ಇಲ್ಲಿ ಸ್ಥಾಪಿಸಲು ಅನುಮೋದನೆ ನೀಡಿರುತ್ತದೆ.

ಮೆ। ಶ್ರೀ ಸಿಮೆಂಟ್ ಲಿಮಿಟೆಡ್ ಕಲಬುರಗಿ ಜಿಲ್ಲೆ ಅವರು ಅಂದಾಜು 1348.38 ಎಕರೆ ಖಾಸಗಿ ಕೃಷಿ ಭೂಮಿಯನ್ನು ಎಕರೆಗೆ ರೂ. 2.35 ಲಕ್ಷದಂತೆ ಕೆ.ಎಲ್. ಆರ್. ಕಾಯ್ದೆ ಸೆಕ್ಷನ್ 109ರಡಿ ಖರೀದಿಸಿರುತ್ತದೆ. ನಂತರ ರೈತರು ಹೆಚ್ಚಿನ ಭೂ ಪರಿಹಾರ ಕೋರಿದ್ದರಿಂದ, ಈ ವಿಷಯವಾಗಿ ರೈತರೊಂದಿಗೆ ಚರ್ಚಿಸಿ ಪ್ರತಿ ಎಕರೆಗೆ ರೂ. 3.65 ಲಕ್ಷ ಹೆಚ್ಚುವರಿ ಪರಿಹಾರವಾಗಿ ಪಾವತಿಸಲಾಗಿರುತ್ತದೆ. ತದ ನಂತರ ಮೆ। ಶ್ರೀ ಸಿಮೆಂಟ್ ಲಿಮಿಟೆಡ್ ಯೋಜನೆಯ ಅನುಷ್ಠಾನದ ಸಮಯದಲ್ಲಿ ರೈತರು ಮತ್ತೆ ಹೆಚ್ಚುವರಿ ಭೂ ಪರಿಹಾರ ಬೇಡಿಕೆ ಕೋರಿದ್ದರಿಂದ ಕಂಪನಿಯು ಮಾನವೀಯ ನೆಲೆಯಲ್ಲಿ ಪರಿಗಣಿಸಿ ಮತ್ತು ಆ ಪ್ರದೇಶದಲ್ಲಿ ಶಾಂತಿ ಕಾಪಾಡಲು ಗುಲ್ಬರ್ಗ ಜಿಲ್ಲಾಧಿಕಾರಿಗಳ ಉಪಸ್ಥಿತಿಯಲ್ಲಿ ಹೆಚ್ಚುವರಿ ಪರಿಹಾರವನ್ನು ಪ್ರತಿ ಎಕರೆಗೆ ರೂ 2 ಲಕ್ಷಗಳನ್ನು ನೀಡಿರುತ್ತದೆ. ಹೀಗೆ ಒಟ್ಟಾರೆಯಾಗಿ 3 ಕಂತುಗಳಲ್ಲಿ ಪ್ರತಿ ಎಕರೆಗೆ ರೂ. 8,00,000/-ಗಳ ಭೂ ಪರಿಹಾರವನ್ನು ನೀಡಿರುವುದಾಗಿ ಘಟಕದವರು ತಿಳಿಸಿರುತ್ತಾರೆ. ರೈತರಿಗೆ ಹೆಚ್ಚುವರಿ ಭೂ ಪರಿಹಾರವನ್ನು ಈಗಾಗಲೇ ಪಾವತಿಸಲಾಗಿರುತ್ತದೆ ಮತ್ತು ಕಂಪನಿಯು ಭೂಮಿಯನ್ನು ಖರೀದಿಸಿರುವುದರಿಂದ ಆ ಭೂಮಿಗಳ ಬೆಳೆ ಪರಿಹಾರ ಅನ್ವಯಿಸುವುದಿಲ್ಲ. ರೈತರು ಮತ್ತು ಕಂಪನಿಯ ನಡುವಿನ ಒಪ್ಪಂದದ ಪ್ರಕಾರ ಕಂಪನಿಯು 483 ಭೂ ಸಂತ್ರಸ್ತರಿಗೆ ಉದ್ಯೋಗ ಒದಗಿಸಬೇಕಾಗಿದ್ದು, ಇಲ್ಲಿಯವರೆಗೆ 328 ಭೂ ಸಂತ್ರಸ್ತರಿಗೆ ಉದ್ಯೋಗ ಒದಗಿಸಿರುತ್ತದೆ. ಬಾಕಿ 145 ಭೂ ಸಂತ್ರಸ್ತರಿಗೆ ಅರ್ಹತೆ, ವಯಸ್ಸು, ಮಾನದಂಡಗಳ ಮೇರೆಗೆ ಉದ್ಯೋಗವನ್ನು ನೀಡಬೇಕಾಗಿರುತ್ತದೆ ಎಂದು ತಿಳಿಸಿದರು. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕಲಬುರಗಿ ಅವರು ಈ ಘಟಕದ ಚಟುವಟಿಕೆಯಿಂದ ಉಂಟಾಗಿರುವ ಧೂಳಿನಿಂದ ಬೆಳೆಗಳ ಹಾನಿ ಕುರಿತು ವರದಿ ನೀಡುವಂತೆ ಸಹಾಯಕ ನಿರ್ದೇಶಕರು ಕೃಷಿ ಇಲಾಖೆ, ಸೇಡಂ ಇವರಿಗೆ ಪತ್ರವನ್ನು ಬರೆದಿರುತ್ತಾರೆ. ವರದಿ ನಿರೀಕ್ಷಣೆಯಲ್ಲಿದೆ. ವರದಿ ಬಂದ ನಂತರ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## 7ರಂದು ರಾಮನಗರ ಜಿಲ್ಲಾ ಮಟ್ಟದ ಮಹಿಳಾ ಕ್ರೀಡಾಕೂಟ

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಮತ್ತು ಕಾಲೇಜು ಶಿಕ್ಷಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಮಾ. 7ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ರಾಮನಗರ ಜಿಲ್ಲಾ ಮಟ್ಟದ ಮಹಿಳಾ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ. ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಚಿವರಾದ ಸಿದ್ದರಾಮಯ್ಯ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಉಪ ಮುಖ್ಯಮಂತ್ರಿಗಳು ಹಾಗೂ ಭಾರಿ ಮತ್ತು ಮಧ್ಯಮ ನೀರಾವರಿ, ಬೆಂಗಳೂರು ನಗರ ಅಭಿವೃದ್ಧಿ ಹಾಗೂ ಬೆಂಗಳೂರು ನಗರ ಉಸ್ತುವಾರಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರು ಘನ ಉಪಸ್ಥಿತಿ ವಹಿಸುವರು. ಸಾರಿಗೆ, ಮುಜರಾಯಿ ಇಲಾಖೆ ಹಾಗೂ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗರೆಡ್ಡಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅವರು ಅಧ್ಯಕ್ಷತೆ ವಹಿಸುವರು. ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ್, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ. ಸುಧಾಕರ್, ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ್, ವಿಧಾನ ಪರಿಷತ್ ಶಾಸಕರಾದ ಪುಟ್ಟಣ್ಣ, ನೆಲಮಂಗಲ ವಿಧಾನಸಭಾ ಕ್ಷೇತ್ರದ ಶಾಸಕರಾದ ಎನ್. ಶ್ರೀನಿವಾಸ್, ವಿಧಾನ ಪರಿಷತ್ ಶಾಸಕರಾದ ಎಸ್. ರವಿ, ಎಚ್.ಪಿ. ಸುಧಾಮ್‌ದಾಸ್, ರಾಮೋಜಿಗೌಡ, ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಎಚ್.ಎಂ. ರೇವಣ್ಣ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಕೆ. ರಾಜು, ಬಿ.ಎಂ.ಐ.ಸಿ.ಪಿ.ಎ ಅಧ್ಯಕ್ಷರಾದ ರಘುನಂದನ್ ರಾಮಣ್ಣ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಜಿ.ಎನ್. ನಟರಾಜು ಗಾಣಕಲ್, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಚೇತನ್ ಕುಮಾರ್ ಎ.ಬಿ ಹಾಗೂ ರಾಮನಗರ ನಗರಸಭೆ ಅಧ್ಯಕ್ಷರಾದ ಕೆ. ಶೇಷಾದ್ರಿ, (ಶಶಿ) ಅವರು ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

## ದಿತೀಯ ಪಿ.ಯು ಪರೀಕ್ಷೆ: 205 ವಿದ್ಯಾರ್ಥಿಗಳು ಹಾಜರು

**ರಾಮನಗರ:** ಬೆಂಗಳೂರಿನ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿಯಿಂದ 2025ರ ಮಾರ್ಚ್ 4ರ ಮಂಗಳವಾರ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯ ತಮಿಳು, ಉರ್ದು ಹಾಗೂ ಸಂಸ್ಕೃತ ವಿಷಯದಲ್ಲಿ ರಾಮನಗರ ಜಿಲ್ಲೆಯ 13 ಕೇಂದ್ರಗಳಲ್ಲಿ 205 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. 7 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ ಎಂದು ರಾಮನಗರ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರೋಗ್ಯ ಇಲಾಖೆಯಿಂದ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ

**ಹುಳಿಯಾರು:** ಆರೋಗ್ಯ ಇಲಾಖೆಯಿಂದ ತಂಬಾಕು ಮುಕ್ತ ಯುವ ಅಭಿಯಾನ 2.0 ಕಾರ್ಯಕ್ರಮದ ಅಡಿ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಿ ಬಹುಮಾನ ವಿತರಿಸಲಾಯಿತು. ಕನಕದಾಸ ಪ್ರೌಢಶಾಲೆ, ಟಿಆರ್‌ಎಸ್ ಆರ್ ಪ್ರೌಢಶಾಲೆ, ಬಸವೇಶ್ವರ ಪ್ರೌಢಶಾಲೆ, ಶ್ರೀ ಯೋಗಿ ನಾರಾಯಣ ತಾಂತ್ರಿಕ ಐಟಿಐ ಕಾಲೇಜುಗಳಲ್ಲಿ ಪ್ರಬಂಧ ಸ್ಪರ್ಧೆ ನಡೆಸಿ ಪ್ರಥಮ, ದ್ವಿತೀಯ, ತೃತಿಯ ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ವಿದ್ಯಾರ್ಥಿಗಳಿಗೆ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ತುಮಕೂರು ಮತ್ತು ತಾಲೂಕು ತಂಬಾಕು ನಿಯಂತ್ರಣ ಕೋಶ ಚಿಕ್ಕನಾಯಕನಹಳ್ಳಿ ವತಿಯಿಂದ ವಿತರಿಸಲಾಯಿತು. ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಪರವಾಗಿ ಹರೀಶ್, ತಾಲೂಕು ತಂಬಾಕು ನಿಯಂತ್ರಣ ಕೋಶದ ಪರವಾಗಿ ಕ್ಷೇತ್ರ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸಿ.ವಿ.ವೆಂಕಟರಾಮಯ್ಯನವರು ಹಾಜರಿದ್ದು ಸ್ಪರ್ಧೆ ನಡೆಸಿಕೊಟ್ಟರು. ಅಲ್ಲದೆ ಈ ಸಂದರ್ಬದಲ್ಲಿ ಶಾಲೆಗಳಿಗೆ ನಾಮಫಲಕ ಮತ್ತು ಪೋಸ್ಟರ್‌ಗಳನ್ನು ವಿತರಿಸಲಾಯಿತು. ವಿದ್ಯಾರ್ಥಿಗಳಿಗೆ ತಂಬಾಕು ಉತ್ಪನ್ನಗಳ ಬಳಕೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮತ್ತು ಅರಿವು ಕಾರ್ಯಕ್ರಮದಲ್ಲಿ ನೀಡಲಾಯಿತು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕರು, ಸಹ ಶಿಕ್ಷಕರುಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## 5ನೇ ವರ್ಷದ ವಾರ್ಷಿಕೋತ್ಸವ

**ತುಮಕೂರು:** ಶ್ರೀದೇವಿ ಶಿಕ್ಷಣ ಸಂಸ್ಥೆಯಲ್ಲಿ ಫೆಬ್ರವರಿ 4ರಂದು ಸಂಭ್ರಮದ ದಿನವಾಗಿದೆ. ಶ್ರೀದುರ್ಗಾಂಬಿಕಾ ದೇವಿಯ 5ನೇ ವಾರ್ಷಿಕೋತ್ಸವದ ಅಂಗವಾಗಿ ಶತಚಂಡಿಕಾ ಹೋಮವನ್ನು ಹಮ್ಮಿಕೊಳ್ಳಲಾಗಿದೆ. 2 ಮತ್ತು 3 ರಂದು ಗಣಪತಿ ಹೋಮ, ಚಂಡಿಕಾಪಾರಾಯಣ, ಆಶ್ಲೇಷ ಬಲಿ ಹಾಗೂ ರುದ್ರ ಹೋಮಗಳು ಸಾಂಗೋಪಸಾಂಗವಾಗಿ ಜರುಗಿದವು. ಈ ಎಲ್ಲಾ ಧಾರ್ಮಿಕ ಕಾರ್ಯಗಳು ಮಂಜೇಶ್ವರದ ಅನಂತೇಶ್ವರ ದೇವಾಲಯದ ಮುಖ್ಯ ಅರ್ಚಕರಾಗಿರುವ ವೇದಜ್ಞ ಶ್ರೀ ತ್ರಿವಿಕ್ರಮಭಟ್ಟರ ಮಾರ್ಗದರ್ಶನದಲ್ಲಿ ಜರುಗಿತು. ಇದರಲ್ಲಿ ಶ್ರೀದೇವಿ ವಿದ್ಯಾಸಂಸ್ಥೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ಭಾಗವಹಿಸಿದ್ದಾರೆ. ವಿವಿಧ ಕೋರ್ಸುಗಳಲ್ಲಿ ಅಧ್ಯಯನ ಮಾಡುವ ವಿದ್ಯಾರ್ಥಿ ವಿದ್ಯಾರ್ಥಿನಿಯರು ಶ್ರದ್ಧಾ ಭಕ್ತಿಯಿಂದ ಶ್ರೀ ದುರ್ಗಾಂಬಿಕಾದೇವಿಯ ಪೂಜಾಕಾರ್ಯಗಳಲ್ಲಿ ಭಾಗವಹಿಸಿ ಶ್ರೀದೇವಿಯ ಆಶೀರ್ವಾದಕ್ಕೆ ಪಾತ್ರರಾದರು.

# ಅನಿಲ ವಿತರಣೆ ಯೋಜನೆ ಅನುಷ್ಠಾನಗೊಳಿಸಲು ಕ್ರಮ

**ಬೆಂಗಳೂರು:** ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ನಿಯಂತ್ರಣ ಮಂಡಳಿ ರಾಜ್ಯದ ಎಲ್ಲಾ ಜಿಲ್ಲೆಗಳನ್ನು ಒಳಗೊಂಡಿರುವ 18 ಭೌಗೋಳಿಕ ಪ್ರದೇಶಗಳಲ್ಲಿ ನಗರ ಅನಿಲ ವಿತರಣೆ ಯೋಜನೆಗಳನ್ನು ಅನುಷ್ಠಾನಗೊಳಿಸಲು 8 ನಗರ ಅನಿಲ ವಿತರಣ ಸಂಸ್ಥೆಗಳನ್ನು ಅಧಿಕೃತವಾಗಿ ನೇಮಿಸಲಾಗಿದೆ ಎಂದು ಎಂ.ಬಿ.ಪಾಟಿಲ್ ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಸದಸ್ಯ ಡಿ.ಎಸ್. ಅರುಣ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು ನಗರ ಅನಿಲ ವಿತರಣೆ ಸಂಸ್ಥೆಗಳು, ಕೊಳವೆ ನೈಸರ್ಗಿಕ ಅನಿಲ ವಿತರಣೆಯನ್ನು ಗೃಹ ಬಳಕೆ, ವಾಣಿಜ್ಯ ಮತ್ತು ಕೈಗಾರಿಕಾ ವಿಭಾಗಗಳಿಗೆ ಪೂರೈಸಲು ನಗರ ಅನಿಲ ವಿತರಣೆ ಜಾಲವನ್ನು ಅಭಿವೃದ್ಧಿಪಡಿಸುವ ಜವಬ್ದಾರಿಯನ್ನು ಹೊಂದಿದೆ. ಸಿ.ಎನ್.ಜಿ. ಸ್ಟೇಷನ್‌ಗಳ ಮೂಲಕ ವಾಹನಗಳಿಗೆ ಇಂಧನವಾಗಿ ಪೂರೈಸಲಾಗುತ್ತಿದೆ. ಭಾರತ ಸರ್ಕಾರವು ಸಿ.ಜಿ.ಡಿ ಯೋಜನೆಗಳನ್ನು ಸಾರ್ವಜನಿಕ ಉಪಯುಕ್ತ ಯೋಜನೆಗಳೆಂದು ಪರಿಗಣಿಸಿದೆ. ಈ ಯೋಜನೆಗಳು ಗೃಹ ಬಳಕೆಗಾಗಿ ಹಾಗೂ ವಾಹನ ಇಂಧನವಾಗಿ ಶುದ್ಧ ಮತ್ತು ಹಸಿರು ಇಂಧನ ತರುವುದಲ್ಲದೆ ಇದು ರಾಜ್ಯದ ಸುಸ್ಥಿರ ಕೈಗಾರಿಕೆ ಬೆಳವಣಿಗೆಗೆ ಒಂದು ಸಾಧನವಾಗಿದೆ.

ಭಾರತ ಸರ್ಕಾರದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಮಂತ್ರಾಲಯದ ಕಾರ್ಯದರ್ಶಿಯವರ ಪ್ರಾಮಾಣೀಕರಣ ಸೇರಿದಂತೆ ಸಿಜಿಡಿ ವಲಯದ ತ್ವರಿತ ಅಭಿವೃದ್ಧಿಗಾಗಿ ಏಕರೂಪದ ಚೌಕಟ್ಟನ್ನು ರಚಿಸಲು ಅನುಕೂಲವಾಗುವಂತೆ ಸಿಜಿಡಿ ನೀತಿಯನ್ನು ರಚಿಸಲು ವಿನಂತಿಸಿರುತ್ತಾರೆ. ಇದರಲ್ಲಿ ರಸ್ತೆ ಪುನರ್ ಸ್ಥಾಪನೆ / ಅನುಮತಿ ಶುಲ್ಕವು ಸೇರಿರುತ್ತದೆ. ಇದಲ್ಲದೆ, ಭಾರತದಲ್ಲಿ ಕೆಲವು ರಾಜ್ಯಗಳು ಅಳವಡಿಸಿಕೊಂಡಿರುವ ಬೆಸ್ಟ್ ಪ್ರಾಕ್ಟೀಸ್ ಗಳನ್ನು ಉಲ್ಲೇಖಿಸಿದ್ದು, ಇದರಲ್ಲಿ ಉತ್ತರ ಪ್ರದೇಶದ ರಾಜ್ಯದಲ್ಲಿ ಪ್ರತಿ ಕಿ.ಮೀ.ಗೆ ರೂ 1000/- ಗಳ ಅನುಮತಿ ಶುಲ್ಕವನ್ನು ನಿರ್ದಿಷ್ಟವಾಗಿ ಪಟ್ಟಿ ಮಾಡಲಾಗಿರುತ್ತದೆ.

ಪಿ.ಎನ್.ಜಿ.ಆರ್.ಬಿ ಕಾರ್ಯದರ್ಶಿಗಳ 2021ರ ಸೆಪ್ಟೆಂಬರ್ 15ರ ಪತ್ರದಲ್ಲಿ ಕರ್ನಾಟಕ ರಾಜ್ಯದಲ್ಲಿ ಸಿ.ಜಿ.ಡಿ ನೀತಿಯನ್ನು ಸೂಕ್ತವಾಗಿ ಅಳವಡಿಸಿಕೊಳ್ಳುವುದನ್ನು ಪರಿಗಣಿಸಲು ವಿನಂತಿಸಿ ಇದು ಸಿ.ಜಿ.ಡಿ ತ್ವರಿತ ಅನುಷ್ಠಾನ ಅನುಮತಿಗಳು / ಅನುಮೋದನೆಗಳನ್ನು ಪಡೆಯುವಲ್ಲಿ ತಪ್ಪಿಸಬಹುದಾದ ವಿಳಂಬವನ್ನು ತಡೆಯುತ್ತದೆ ಎಂದು ತಿಳಿಸಿದ್ದಾರೆ. ಇದಲ್ಲದೆ ಭಾರತ ಸರ್ಕಾರದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ, ವಸತಿ ಮತ್ತು ನಗರ ವ್ಯವಹಾರಗಳ ಸಚಿವರು 2021ನೇ ಅಕ್ಟೋಬರ್ 02 ಪತ್ರದನ್ವಯ ರಸ್ತೆ ಮರು ಸ್ಥಾಪನೆ / ಅನುಮತಿ ಶುಲ್ಕಗಳ ಪ್ರಮಾಣೀಕರವನ್ನು ಒಳಗೊಂಡಂತೆ ಸಿ.ಜಿ.ಡಿ ನೀತಿಯನ್ನು ಬೆಂಬಲಿಸಲು ಕ್ರಮಗಳನ್ನು ತೆಗೆದುಕೊಳ್ಳುವಂತೆ ರಾಜ್ಯ ಸರ್ಕಾರವನ್ನು ವಿನಂತಿಸಿರುತ್ತಾರೆ. ಕರ್ನಾಟಕ ರಾಜ್ಯದಲ್ಲಿ ಸಮೃದ್ಧ ಹಸಿರು ಮತ್ತು ಸ್ವಚ್ಛ ಪರಿಸರವನ್ನು ತರಲು ನೈಸರ್ಗಿಗಕ ಅನಿಲದ ಬಳಕೆಯನ್ನು ಹೆಚ್ಚಿಸಲು ಮತ್ತು ಅನಿಲ ಆಧಾರಿತ ಆರ್ಥಿಕತೆಯ ಅಭಿವೃದ್ಧಿಗೆ ರಾಜ್ಯ ಸರ್ಕಾರದ ನೆರವನ್ನು ಕೋರಿರುತ್ತಾರೆ.

ಉತ್ತರ ಪ್ರದೇಶ ಹಾಗೂ ಬೇರೆ ರಾಜ್ಯಗಳಲ್ಲಿರುವ ಇಂತಹ ಪ್ರಗತಿಪರ ಉಪಕ್ರಮಗಳನ್ನು ಗಮನಿಸಿ ರಾಜ್ಯದ ಸಿಜಿಡಿ ಮೂಲಭೂತ ಸೌಕರ್ಯವನ್ನು ಹೆಚ್ಚಿಸುವ ಉದ್ದೇಶದಿಂದ ಹಾಗೂ ರಾಜ್ಯದ ನಗರ ಅನಿಲ ಪೈಪ್ ಲೈನ್ ಮೂಲಸೌಕರ್ಯ ವಿತರಣಾ ಜಾಲದ ಅಭಿವೃದ್ಧಿ ನೀತಿಯನ್ನು ರಚಿಸಲಾಗಿದೆ. ರಾಜ್ಯದಲ್ಲಿ ನೈಸರ್ಗಿಕ ಅನಿಲದ ಬಳಕೆಯನ್ನು ಉತ್ತೇಜಿಸುವುದು ಮತ್ತು ರಾಜ್ಯದಾದ್ಯಂತ ಅನಿಲ ಪೈಪ್‌ಲೈನ್ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸುವುದು ನೀತಿಯ ಮುಖ್ಯ ಉದ್ದೇಶವಾಗಿದೆ. ನೀತಿಯ ಮೂಲಕ ವಿವಿಧ ಜಿಲ್ಲೆಗಳಲ್ಲಿ ಅನುಮತಿ ಶುಲ್ಕಗಳ ಅಸಮಾನತೆಯನ್ನು ತೆಗೆದುಹಾಕಲು ಮತ್ತು ರಾಜ್ಯದಾದ್ಯಂತ ಏಕ ರೂಪದ ಅನುಮತಿ ಶುಲ್ಕಗಳು ಅನ್ವಯವಾಗುವಂತೆ ಮಾಡಲಾಗಿದೆ ಎಂದು ತಿಳಿಸಿದರು.

ನಗರ ಅನಿಲ ವಿತರಣಾ ಸಂಸ್ಥೆಗಳು ತಮ್ಮ ಭೌಗೋಳಿಕ ಪ್ರದೇಶಗಳಿಗೆ ಸಂಬಂಧಿಸಿದಂತೆ ಸಿಜಿಡಿ ಹಾಗೂ ಅನುಮತಿ ಶುಲ್ಕಗಳಲ್ಲಿನ ಕಡಿತದ ಲಾಭವನ್ನು ಸಾರ್ವಜನಿಕರಿಗೆ ವರ್ಗಾಯಿಸುವ ಷರತ್ತನ್ನು ಈ ನೀತಿಯ ಅಧ್ಯಾಯ 6ರ ಷರತ್ತು (ಥ) ನಲ್ಲಿ ಸೇರಿಸಲಾಗಿದ್ದು, ಅದರಂತೆ ಸಿಜಿಡಿ ನೀತಿಯನ್ನು ಹೊರಡಿಸಲಾಗಿರುತ್ತದೆ. ಸದರಿ ನೀತಿಯನ್ನು ಹೊರಡಿಸಿದ ನಂತರ ಅನಿಲ ಪೈಪ್ ಅಳವಡಿಕೆಗೆ ಮತ್ತು ಮೇಲ್ವಿಚಾರಣಾ ಶುಲ್ಕಗಳನ್ನು ಮೀಟರ್‌ಗೆ ರೂ 1/-ಕ್ಕೆ ಇಳಿಸುವ ಅನುಗುಣವಾದ ಪ್ರಯೋಜನವನ್ನು ಸಿಜಿಡಿ ಸಂಸ್ಥೆಗಳು ತಮ್ಮ ಭೌಗೋಳಿಕ ಪ್ರದೇಶಗಳಲ್ಲಿ ಪಿ.ಎನ್.ಜಿ ಮತ್ತು ಸಿ.ಎನ್.ಜಿ ಶುಲ್ಕಗಳಲ್ಲಿ ಸಾರ್ವಜನಿಕರಿಗೆ ವರ್ಗಾಯಿಸುವುದುದನ್ನು ಖಚಿತಪಡಿಸಿಕೊಳ್ಳಲು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಮತ್ತು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ನಿಯಂತ್ರಣ ಮಂಡಳಿ ಎರಡಕ್ಕೂ 2023ನೇ ನವೆಂಬರ್ 08ರ ಪತ್ರದ ಮೂಲಕ ವಿನಂತಿಸಲಾಗಿದೆ. ನೀತಿಯ ಉಪಕ್ರಮಗಳಿಂದ ಬರುವ ಲಾಭವನ್ನು ಯಾವುದೇ ಸಿಜಿಡಿ ಸಂಸ್ಥೆಗಳಲ್ಲಿ ಉಳಿಸಿಕೊಳ್ಳದೇ ಸಾರ್ವಜನಿಕರಿಗೆ ವರ್ಗಾಯಿಸಲು ಇದು ಅನುವು ಮಾಡಿಕೊಡುತ್ತದೆ ಎಂದು ತಿಳಿಸಿದರು. ಆರ್ಥಿಕ ಇಲಾಖೆ ಸೇರಿದಂತೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳೊಂದಿಗೆ ಸಮಾಲೋಚನೆ ನಡೆಸಿ ನೀತಿಯನ್ನು ಸಿದ್ಧಪಡಿಸಲಾಗಿದೆ. ಆರ್ಥಿಕ ಇಲಾಖೆ ಈಗಾಗಲೇ ಸಹಮತಿ ವ್ಯಕ್ತಪಡಿಸಿದೆ. ಸಚಿವ ಸಂಪುಟದ ಅನುಮೋದನೆಯ ಮೇರೆಗೆ ರಾಜ್ಯ ನಗರ ಅನಿಲ ವಿತರಣೆ (ಸಿ.ಜಿ.ಡಿ) ನೀತಿಯನ್ನು ಹೊರಡಿಸಲಾಗಿರುತ್ತದೆ ಎಂದು ತಿಳಿಸಿದರು.

## ಸ್ಮಾರ್ಟ್ ಸಿಟಿ ಯೋಜನೆ ಅವ್ಯವಹಾರಗಳ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು

**ಬೆಂಗಳೂರು:** ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಭಾಗಿತ್ವದ ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಅವ್ಯವಹಾರಗಳ ಕುರಿತು ಯಾವುದೇ ದೂರುಗಳು ದಾಖಲಾಗಿರುವುದಿಲ್ಲ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಬಿ.ಎಸ್. ಸುರೇಶ್ ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿಷತ್ ಸದಸ್ಯ ಎಂ. ನಾಗರಾಜು ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಅವ್ಯವಹಾರಗಳು ನಡೆದಿರುವ ಬಗ್ಗೆ ಇಲ್ಲಿಯ ವರೆಗೂ ಯಾವುದೇ ದೂರುಗಳು ದಾಖಲಾಗಿರುವುದಿಲ್ಲ. ದೂರುಗಳನ್ನು ಬಂದಲ್ಲಿ ಪರಿಶೀಲಿಸಿ ವರದಿಯನ್ನು ನೀಡಲು ಈಗಾಗಲೇ ಸಮಿತಿಯನ್ನು ಸಹ ರಚಿಸಲಾಗಿದೆ. ಸ್ಮಾರ್ಟ್ ಸಿಟಿ ಅಭಿಯಾನದಡಿ ರಾಜ್ಯದ 07 ನಗರಗಳಾದ ಬೆಳಗಾವಿ, ದಾವಣಗೆರೆ, ಹುಬ್ಬಳ್ಳಿ - ಧಾರವಾಡ, ಮಂಗಳೂರು, ಶಿವಮೊಗ್ಗ, ತುಮಕೂರು ಮತ್ತು ಬೆಂಗಳೂರು ನಗರಗಳು ಆಯ್ಕೆಯಾಗಿರುತ್ತದೆ. ಸ್ಮಾರ್ಟ್ ಸಿಟಿ ಯೋಜನೆಯಡಿ ಇಲ್ಲಿಯವರೆಗೂ ಬಿಡುಗಡೆಯಾದ ರೂ. 6854.5 ಕೋಟಿ ಅನುದಾನದಲ್ಲಿ ರೂ. 6472.08 ಕೋಟಿಗಳನ್ನು ವೆಚ್ಚ ಮಾಡಲಾಗಿದೆ ಎಂದು ತಿಳಿಸಿದರು.



## ವರದಹಳ್ಳಿ ಗ್ರಾಮಕ್ಕೆ ಹಕ್ಕಿ ಸಾಗಾಣಿಕೆ ನಿರ್ಬಂಧ: ಜಿಲ್ಲಾಧಿಕಾರಿ ಆದೇಶ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನ ಕಸಬಾ ಹೋಬಳಿಯ ವರದಹಳ್ಳಿ ಗ್ರಾಮದಲ್ಲಿ ಸುಮಾರು 30 ರಿಂದ 32 ಕೋಳಿಗಳು ಏಕ ಕಾಲದಲ್ಲಿ ಸಾವನ್ನಪ್ಪಿದ್ದರಿಂದ ಈ ಕೋಳಿಗಳನ್ನು ಪರೀಕ್ಷೆಗೊಳಪಡಿಸಲು ಬೆಂಗಳೂರಿನ ಭಾರತೀಯ ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಗೆ ಕಳುಹಿಸಲಾಗಿದ್ದು, ಈ ಮಾದರಿಯನ್ನು ಪರೀಕ್ಷಿಸಿದ ನಂತರ ಹಕ್ಕಿ ಜ್ವರ ದೃಢಪಟ್ಟಿರುವ ಹಿನ್ನಲೆಯಲ್ಲಿ ಈ ಸೋಂಕನ್ನು ತುರ್ತಾಗಿ ಹತೋಟಿಗೆ ತರುವ ಉದ್ದೇಶದಿಂದ 2025ರ ಮೇ 27 ರವರೆಗೆ ವರದಹಳ್ಳಿ ಗ್ರಾಮಕ್ಕೆ ಹಕ್ಕಿ ಸಾಗಾಣಿಕೆ ವಾಹನ ಹಾಗೂ ಹೊರಗಡೆಯಿಂದ ಕೋಳಿಗಳನ್ನು ಗ್ರಾಮಕ್ಕೆ ತರುವುದನ್ನು ಮತ್ತು 1 ಕಿಮೀ ವ್ಯಾಪ್ತಿಯ ಗ್ರಾಮದ ಸುತ್ತ ಮುತ್ತ ಪ್ರದೇಶಕ್ಕೆ ತರುವುದನ್ನು ನಿರ್ಬಂಧಿಸಿ ಆದೇಶಿಸಲಾಗಿದೆ ಹಾಗೂ ಈ ಆದೇಶವನ್ನು ಪಾಲನೆ ಮಾಡಲು ಹಾಗೂ ಕ್ರಮವಹಿಸಲು ಪೊಲೀಸ್ ಇಲಾಖೆಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ತಿಳಿಸಿದ್ದಾರೆ.

## ತೋಟಗಾರಿಕೆ ತರಬೇತಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಜಿಲ್ಲೆಯ ತೋಟಗಾರಿಕೆ ಇಲಾಖೆ ವತಿಯಿಂದ ತೋಟಗಾರಿಕೆ ತರಬೇತಿ ಕೇಂದ್ರ, ಲಾಲ್ ಬಾಗ್. ಬೆಂಗಳೂರು ಇಲ್ಲಿ 2025-26ನೇ ಸಾಲಿನಲ್ಲಿ ರೈತರ ಮಕ್ಕಳಿಗೆ ತೋಟಗಾರಿಕೆ ತರಬೇತಿಯನ್ನು (2025ರ ಮೇ 2 ರಿಂದ 2026ರ ಫೆಬ್ರವರಿ 28 ವರೆಗೆ) ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಕಚೇರಿಗೆ ಕೆಲಸದ ಸಮಯದಲ್ಲಿ ತೋಟಗಾರಿಕೆ ಉಪ ನಿರ್ದೇಶಕರು, (ಜಿಲ್ಲಾ ಪಂಚಾಯತ್) ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಲ್ಲಾ ಪಂಚಾಯತ್) ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯ ವಲಯ) ಅವರ ಕಚೇರಿಯಿಂದ ಪಡೆದುಕೊಳ್ಳಬಹುದು ಅಥವಾ ಇಲಾಖೆಯ ವೆಬ್ ಸೈಟ್ ನಲ್ಲಿ ಮಾಡಿಕೊಳ್ಳಬಹುದು. ಅರ್ಜಿ ಶುಲ್ಕ ಸಾಮಾನ್ಯ ಅಭ್ಯರ್ಥಿಗಳಿಗೆ ರೂ.30 ಮತ್ತು ಪರಿಶಿಷ್ಟ ಜಾತಿ ಮತ್ತು /ಪರಿಶಿಷ್ಟ ಪಂಗಡದ ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ರೂ.15 ಗಳ ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ (ಐಪಿಒ) ಡಿಮ್ಯಾಂಡ್ ಡ್ರಾಫ್ಟ್ ಅನ್ನು ತೋಟಗಾರಿಕೆ ಉಪ ನಿರ್ದೇಶಕರು ಜಿಲ್ಲಾ ಪಂಚಾಯತ್ ಚಿಕ್ಕಬಳ್ಳಾಪುರ ರವರ ಹೆಸರಿನಲ್ಲಿ ಪಡೆದ ಅರ್ಜಿಯ ಜೊತೆಗೆ ಲಗತ್ತಿಸಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಏಪ್ರಿಲ್ 1 ರಂದು ಸಂಜೆ 5.30 ಗಂಟೆಯೊಳಗೆ ಈ ಕಚೇರಿಗೆ ಸಲ್ಲಿಸತಕ್ಕದ್ದು. ಅರ್ಹ ಅಭ್ಯರ್ಥಿಗಳಿಗೆ ಏಪ್ರಿಲ್ 8 ರಂದು ತೋಟಗಾರಿಕೆ ಉಪನಿರ್ದೇಶಕರ ಕಚೇರಿಯಲ್ಲಿ ಸಂದರ್ಶನ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಉಪ ನಿರ್ದೇಶಕರು, ಪಿ.ಆರ್.ಎಸ್.ತೋಟಗಾರಿಕೆ ಕ್ಷೇತ್ರ, ನಂದಿ ಕ್ರಾಸ್ ಚಿಕ್ಕಬಳ್ಳಾಪುರ ಅಥವಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದ ಬಾಲಕನ ಪತ್ತೆಗೆ ಮನವಿ

**ಮೈಸೂರು:** ಸುಮಾರು 16 ವರ್ಷದ ಹೇಮೇಶ ಎಂಬುವ ಬಾಲಕ ಕಾಣೆಯಾಗಿದ್ದು, ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಚಹರೆ: ಸುಮಾರು 16 ವರ್ಷ ವಯಸ್ಸಾಗಿದ್ದು, ತಂದೆ ವಿಶ್ವನಾಥಪ್ಪ ತಾಯಿ ಎಂ.ಅನಿತಾ, ಮೈಸೂರು ತಾಲ್ಲೂಕಿನ ಕೆ.ಎಂ.ಹುಂಡಿ ಗ್ರಾಮದವರು, ನಂಜನಗೂಡು ತಾಲ್ಲೂಕಿನ ತಾಂಡವಪುರ ಗ್ರಾಮದ ಸರ್ಕಾರಿ ಪ್ರೌಡಶಾಲೆಯಲ್ಲಿ 9 ತರಗತಿಯ ವಿದ್ಯಾರ್ಥಿಯಾಗಿರುತ್ತಾರೆ. 5 ಅಡಿ ಎತ್ತರ, ಕನ್ನಡ, ತೆಲುಗು, ಇಂಗ್ಲೀಷ್, ಹಿಂದಿ ಭಾಷೆಗಳನ್ನು ಮಾತನಾಡುತ್ತಾರೆ. ಸಾಧಾರಣ ಮೈಕಟ್ಟು, ಕೋಲು ಮುಖ. ಎಣ್ಣೆ ಗೆಂಪು ಮೈ ಬಣ್ಣ, ಕಪ್ಪು ತಲೆಗೂದಲು, ಎಡಗೈ ಮೇಲೆ MUMMY & DADY ಎಂಬ ಹಸಿರು ಹಚ್ಚೆ ಇರುತ್ತದೆ. ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಟೀ ಶರ್ಟ್ , ಲೈ ಸಿಮೆಂಟ್ ಕಲರ್ ಪ್ಯಾಂಟ್ ಧರಿಸಿರುತ್ತಾರೆ. ಕಾಣೆಯಾದ ಬಾಲಕನ ಬಗ್ಗೆ ಮಾಹಿತಿ ಕಂಡು ಬಂದಲ್ಲಿ ಮೈಸೂರು ದಕ್ಷಿಣ ಪೊಲೀಸ್ ಠಾಣೆಯ ದೂ. ಸಂ: 0821-2444955 ಗೆ ಅಥವಾ ಮೈಸೂರು ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ.ಸಂ 0821-244800 ನ್ನು ಸಂಪರ್ಕಿಸಬಹುದು ಎಂದು ಮೈಸೂರು ದಕ್ಷಿಣ ಪೊಲೀಸ್ ಠಾಣೆಯ ಪೊಲೀಸ್ ಉಪ-ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿ.ಹೆಚ್.ಡಿ ಪದವಿ ಅಂಗೀಕಾರ

**ಮೈಸೂರು:** ಐಶ್ವರ್ಯ.ಎನ್ ಅವರು ಡಾ. ಪ್ರಕಾಶ್ ಬಿ ನಾಯಕ್ ಅವರ ಮಾರ್ಗದರ್ಶನದಲ್ಲಿ "Role of workplace Diversity, Inclusion and Equity on Employee Productivity in Higher Management Educational Institutions –A study" ಎಂಬ ವಾಣಿಜ್ಯ ವಿಷಯದಲ್ಲಿ ಸಂಶೋಧನೆ ನಡೆಸಿರುತ್ತಾರೆ ಮತ್ತು ಮಹಾಪ್ರಬಂಧವನ್ನು ಆಂಗ್ಲ ಭಾಷೆಯಲ್ಲಿ ಸಿದ್ಧಪಡಿಸಿದ್ದು, 2017 ರ ಮೈಸೂರು ವಿಶ್ವವಿದ್ಯಾನಿಲಯದ ಪಿಹೆಚ್‌ಡಿ ನಿಯಾಮಾವಳಿಯಡಿಯಲ್ಲಿ ಅಂಗೀಕರಿಸಲಾಗಿದೆ. ಅಭ್ಯರ್ಥಿಯು ಸದರಿ ಪಿಹೆಚ್‌ಡಿ ಪದವಿಯನ್ನು ಮುಂದೆ ನಡೆಯುವ ವಾರ್ಷಿಕ ಘಟಿಕೋತ್ಸವದಲ್ಲಿ (ಖುದ್ದಾಗಿ/ಗೈರುಹಾಜರಿಯಲ್ಲಿ) ಪಡೆಯಬಹುದಾಗಿದೆ ಎಂದು ಮೈಸೂರು ವಿಶ್ವ ವಿದ್ಯಾನಿಲಯದ ಕುಲಸಚಿವ(ಪರೀಕ್ಷಾಂಗ)ರಾದ ಪ್ರೊ.ಎನ್ ನಾಗರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದ ವ್ಯಕ್ತಿಪತ್ತೆಗೆ ಮನವಿ

**ಮೈಸೂರು:** ಸುಮಾರು 48 ವರ್ಷದ ನಾಗೇಂದ್ರ ಎಂಬುವವರು ಜನವರಿ 25.2025 ರಂದು ಕಾಣೆಯಾಗಿದ್ದು, ಕವಲಂದೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಗಿದೆ. ಚಹರೆ: ಸುಮಾರು 48 ವರ್ಷ ವಯಸ್ಸಾಗಿದ್ದು, 5.5 ಅಡಿ ಎತ್ತರ , ಕೋಲು ಮುಖ , ಕೆಂಪು ಬಣ್ಣ, ಕನ್ನಡ ಮಾತನಾಡುತ್ತಾರೆ. ಕಾಣೆಯಾದ ಸಂದರ್ಭದಲ್ಲಿ ಗುಲಾಬಿ ಬಣ್ಣದ ಶರ್ಟ್ ಪಂಚೆ(ಲಬ್ಬೆ)ಯನ್ನು ಧರಿಸಿರುತ್ತಾರೆ. ಕಾಣೆಯಾದ ವ್ಯಕ್ತಿಯ ಬಗ್ಗೆ ಕಂಡುಬಂದಲ್ಲಿ ಮೈಸೂರು ಜಿಲ್ಲಾ ಪೊಲೀಸ್ ವರಷ್ಠಾಧಿಕಾರಿಗಳ ಕಛೇರಿಯ ದೂ.ಸಂ: 0821-2520040, ಮೈಸೂರು ಜಿಲ್ಲಾ ನಿಸ್ತಂತು ಕೊಠಡಿ ದೂ.ಸಂ: 0821-2444800 ಕವಲಂದೆ ಪೊಲೀಸ್ ಠಾಣೆ 08221-295621, ಸಂಪರ್ಕಿಸಿ.

# ಚಿಕ್ಕಬಳ್ಳಾಪುರದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರ

**ಚಿಕ್ಕಬಳ್ಳಾಪುರ:** ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಅಂಚೆ ಇಲಾಖೆ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಚಿಕ್ಕಬಳ್ಳಾಪುರ ಇವರ ಸಹಯೋಗದಲ್ಲಿ ನಗರದ ಪ್ರಧಾನ ಅಂಚೆ ಕಛೇರಿ ಆವರಣದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಪ್ರಧಾನ ಅಂಚೆ ಕಚೇರಿ ಸಿಬ್ಬಂದಿ ಸೇರಿದಂತೆ ಚಿಕ್ಕಬಳ್ಳಾಪುರ ನಗರದ ವಿವಿಧ ಅಂಚೆ ಕಚೇರಿ, ಹಾಗೂ ಗ್ರಾಮೀಣ ಅಂಚೆ ವಿಭಾಗಗಳ ಸಿಬ್ಬಂದಿ ಭಾಗವಹಿಸಿ ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಿದರು.

ರಕ್ತದಾನ ಶಿಬಿರಕ್ಕೂ ಮುನ್ನ ಕೋಲಾರ ವಿಭಾಗದ ಹಿರಿಯ ಅಂಚೆ ಅಧೀಕ್ಷಕ ವಿಎಸ್ಎಲ್ ನರಸಿಂಹರಾವ್ ಮಾತನಾಡಿ, ರಕ್ತ ಕೊಡುವುದರಿಂದ ನಮ್ಮ ಆರೋಗ್ಯ ಉತ್ತಮಗೊಳ್ಳಲಿದೆ ರಕ್ತ ಕೊಡುವುದರಿಂದ ಇನ್ನೊಬ್ಬರ ಜೀವ ರಕ್ಷಣೆ ಮಾಡಿದಂತಾಗುತ್ತದೆ ಪ್ರತಿಯೊಬ್ಬರು ಇದನ್ನು ಮನಗಂಡು ರಕ್ತದಾನ ಮಾಡುವ ಕುರಿತಾಗಿ ಇನ್ನಿತರರಲ್ಲಿ ಜಾಗೃತಿ ಮೂಡಿಸಬೇಕು ಅಂಚೆ ಇಲಾಖೆಯಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಸಿಬ್ಬಂದಿಯಿಂದ ನೂರಕ್ಕೂ ಅಧಿಕ ಯೂನಿಟ್ ರಕ್ತ ದಾನ ಮಾಡುವ ಇಂಗಿತ ವ್ಯಕ್ತಪಡಿಸಿದ ಅವರು ಇಂದಿನ ದಿನಮಾನಗಳಲ್ಲಿ ರಸ್ತೆ ಅಪಘಾತದಲ್ಲಿ ರಕ್ತಸ್ರಾವಗೊಂಡ ರೋಗಿಗಳು ಸೇರಿ ಹೆರಿಗೆ ಸಂದರ್ಭದಲ್ಲಿ ಗರ್ಭಿಣಿಯರಿಗೆ ಹಾಗೂ ಇನ್ನಿತರರಿಗೆ ರಕ್ತದ ಅವಶ್ಯಕತೆ ಇರುತ್ತದೆ. ಇಂಥ ಸಂದರ್ಭದಲ್ಲಿ ರಕ್ತದಾನಿಗಳು ನೀಡುವ ರಕ್ತ ಮಹತ್ವ ಪಡೆಯುತ್ತದೆ. ವೈದ್ಯಕೀಯ ತಜ್ಞರ ಪ್ರಕಾರ ಒಬ್ಬರ ರಕ್ತದಾನದಿಂದ ಮೂರು ಜನರ ಪ್ರಾಣ ಉಳಿಸಬಹುದಾಗಿದೆ ಎಂದು ಹೇಳಿ ತಾನೂ ಸಹಾ ರಕ್ತದಾನ ಮಾಡಿದ್ದೇನೆ ಇತರರು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡುವುದರ ಮಹತ್ವವನ್ನು ವಿವರಿಸಿದರು.




ಈ ವೇಳೆ ಚಿಕ್ಕಬಳ್ಳಾಪುರ ಪ್ರಧಾನ ಅಂಚೆ ಕಚೇರಿ ಸೇರಿದಂತೆ ವಿವಿಧ ಭಾಗಗಳ ಅಂಚೆ ಕಚೇರಿಗಳಿಂದ ಆಗಮಿಸಿದ್ದ ಸಿಬ್ಬಂದಿ ವರ್ಗದವರು ರಕ್ತದಾನ ಮಾಡಿದರು ಒಟ್ಟು 36ಕ್ಕೂ ಅಧಿಕ ಯೂನಿಟ್ ರಕ್ತವನ್ನು ಚಿಕ್ಕಬಳ್ಳಾಪುರದ ಭಾರತೀಯ ರೆಡ್ ಕ್ರಾಸ್ ಸಂಸ್ಥೆಗೆ ನೀಡಲಾಯಿತು. ಈ ಸಂದರ್ಭದಲ್ಲಿ ಚಿಕ್ಕಬಳ್ಳಾಪುರ ಉಪ ವಿಭಾಗ ಅಂಚೆ ನಿರೀಕ್ಷಕರಾದ ಶಶಿಕುಮಾರ್ ಶೆಟ್ಟಿಕೆರಿ, ಗೌರಿಬಿದನೂರು ಉಪವಿಭಾಗದ ಅಂಚೆ ನಿರೀಕ್ಷಕರಾದ ಹನುಮಂತಯ್ಯ ಕೆ. ಚಿಕ್ಕಬಳ್ಳಾಪುರ ಅಂಚೆಪಾಲಕರಾದ ಎಂಎಸ್ ಸಂತೋಷ್, ಅಂಚೆ ಜೀವವಿಮೆ ಅಭಿವೃದ್ಧಿ ಅಧಿಕಾರಿ ಸತೀಶ್, ಉಪ ಅಂಚೆ ಪಾಲಕರಾದ ಚಂದ್ರಶೇಖರ್, ಸಹಾಯಕರಾದ ಶ್ರೀನಿವಾಸ್, ಮಂಜುನಾಥ್ ನಂದಿನಿ ನಾರಾಯಣಸ್ವಾಮಿ ರಾಮಪ್ಪ ವಿಜಯಶಂಕರ್, ಭಾರತೀಯ ರೆಡ್ ಕ್ರಾಸ್ ಚಿಕ್ಕಬಳ್ಳಾಪುರದ ವರದರಾಜು ಅನಸುರುಲ್ಲಾ , ಕೃಷ್ಣವೇಣಿ, ಬಾಲಾಜಿ ಸೇರಿದಂತೆ ಇತರರು ಇದ್ದರು.

## ಪ್ರವೇಶಾತಿಗೆ ಅರ್ಜಿ ಆಹ್ವಾನ

**ಮೈಸೂರು:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಶೈಕ್ಷಣಿಕ ಸಾಲಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಜಾತಿಯ ಅಸ್ಪೃಶ್ಯತೆ ನಿರ್ಮೂಲನ ವೃತ್ತಿಯಲ್ಲಿ ತೊಡಗಿರುವ ಆರ್ಥಿಕವಾಗಿ ಹಿಂದುಳಿದಿರುವ ಪ್ರತಿಭಾವಂತ ಗಂಡು ಮಕ್ಕಳಿಗೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಶ್ರೀ ರಾಮಕೃಷ್ಣ ವಿದ್ಯಾಶಾಲೆ ಮೈಸೂರು ಇಲ್ಲಿಗೆ 8 ನೇ ತರಗತಿಗಾಗಿ ಪ್ರವೇಶಾತಿಗೆ ಪರೀಕ್ಷೆಯ ಮುಖಾಂತರ ಆಯ್ಕೆ ಮಾಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಅರ್ಜಿಗಳನ್ನು ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ಕಛೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರ ಸಮಾಜ ಕಲ್ಯಾಣ ಇಲಾಖೆ, ಮೈಸೂರು ಇಲ್ಲಿಗೆ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಮಾರ್ಚ್ 25 ರಂದು ಕೊನೆಯ ದಿನಾಂಕವಾಗಿದ್ದು, ಏಪ್ರಿಲ್ 12 ಬೆಳಿಗ್ಗೆ 10 ಗಂಟೆಗೆ ಪ್ರವೇಶ ಪರೀಕ್ಷೆಯನ್ನು ಶ್ರೀ ರಾಮಕೃಷ್ಣ ವಿದ್ಯಾಶಾಲಾ, ಯಾದವಗಿರಿ ಮೈಸೂರು ಇಲ್ಲಿ ನಡೆಸಲಾಗುವುದು. ಅರ್ಜಿಯೊಂದಿಗೆ ಸಲ್ಲಿಸಬೇಕಾಗಿರುವ ದಾಖಲೆಗಳು: ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, 7ನೇ ತರಗತಿ ಅಂಕಪಟ್ಟಿ, ಅಭ್ಯರ್ಥಿಯ ಭಾವಚಿತ್ರ, ಆಧಾರ್ ಕಾರ್ಡ್/ ವಿಳಾಸ ದೃಢೀಕರಣ ಪತ್ರದೊಂದಿಗೆ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್-1 ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐಎಸ್‌ಐ ಗುರುತು ಖಾತ್ರಿ ಜವಾಬ್ದಾರಿ

**ಚಿಕ್ಕಬಳ್ಳಾಪುರ:** ಚಿನ್ನಾಭರಣ ಖರೀದಿಸುವಾಗ ಹಾಲ್ ಮಾರ್ಕ್ ನ ದೃಢೀಕರಣಕ್ಕಾಗಿ '' ಬಿ ಐ ಎಸ್ ಕೇರ್'' ಅಪ್ಲಿಕೇಶನ್ ಮೂಲಕ ಪರಿಶೀಲಿಸುವುದು ಉತ್ತಮ ಎಂದು ಜಿಲ್ಲಾಧಿಕಾರಿ ಪಿ ಎನ್ ರವೀಂದ್ರ ಅವರು ತಿಳಿಸಿದರು.



ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ನ ಸರ್. ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ರಾಷ್ಟ್ರೀಯ ಗುಣಮಟ್ಟ ಸಂಸ್ಥೆ (ಃಖುಖು), ಗ್ರಾಹಕರ ವ್ಯವಹಾರಗಳ ಹಾಗೂ ಸಾರ್ವಜನಿಕ ವಿತರಣಾ ಪದ್ಧತಿ ಸಚಿವಾಲಯ, ಆಹಾರ ಮತ್ತು ಸಾರ್ವಜನಿಕ ವಿತರಣೆ, ಭಾರತ ಸರ್ಕಾರ, ಜಿಲ್ಲಾಡಳಿತ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಮಹಿಳೆಯರು ಹೆಚ್ಚು ಇಷ್ಟಪಡುವ ವಸ್ತುಗಳ ಪಟ್ಟಿಯಲ್ಲಿ ಸಾಮಾನ್ಯವಾಗಿ ಚಿನ್ನ, ಬೆಳ್ಳಿ, ವಜ್ರದ ಆಭರಣಗಳು ಸಾಮಾನ್ಯ. ಬಡವ, ಮಧ್ಯಮ ವರ್ಗದವರ ಮನೆಯಲ್ಲೂ ಬಂಗಾರ ಖರೀದಿ ಮಾಡುತ್ತಾರೆ. ಮದುವೆ ಮುಂತಾದ ಸಮಾರಂಭಗಳ ಸಂದರ್ಭದಲ್ಲಿ ಚಿನ್ನ ಅನಿವಾರ್ಯ ಎನ್ನುವಂತಾಗಿದೆ. ಚಿನ್ನದ ಗುಣಮಟ್ಟದ ಬಗ್ಗೆ ಸರಿಯಾಗಿ ಪರಿಶೀಲಿಸುವ ವಿಧಾನಗಳ ಅರಿವು ಖರೀದಿದಾರರಿಗೆ ಇರಬೇಕು. ಆ ನಿಟ್ಟಿನಲ್ಲಿ ಬಿಐಎಸ್ ಹಾಲ್‌ಮಾರ್ಕ್ ಬಂದ ಬಳಿಕ ಖರೀದಿದಾರರು ತಮ್ಮ ಚಿನ್ನದ ಖರೀದಿಯಲ್ಲಿ ಹೆಚ್ಚು ವಿಶ್ವಾಸ ಹೊಂದಿದ್ದಾರೆ. ಚಿನ್ನ ಅಸಲಿಯೋ ಇಲ್ಲ ನಕಲಿಯೋ ಎಂದು ನೋಡುವುದೇ ಚಿನ್ನದ ಹಾಲ್ ಮಾರ್ಕ್‌ನಿಂದ, ಆದರೆ ಹಾಲ್ ಮಾರ್ಕ್‌ನಲ್ಲೂ ಮೋಸ ಮಾಡುವುದು ನಡೆಯುತ್ತಿದೆ. ಹೀಗಾಗಿ ಇನ್ಮುಂದೆ ಹಾಲ್ ಮಾರ್ಕ್ ಇದ್ದರೂ ಚಿನ್ನವನ್ನು ಮತ್ತೊಮ್ಮೆ ಪರಿಶೀಲನೆ ಮಾಡಿಕೊಳ್ಳುವುದು ಉತ್ತಮ. ಇತ್ತೀಚಿನ ದಿನಗಳಲ್ಲಿ ನಕಲಿ ಚಿನ್ನವನ್ನು ಪರಿಶೀಲಿಸುವುದಕ್ಕೆ ಕೇಂದ್ರ, ಬ್ಯೂರೋ ಆಫ್ ಇಂಡಿಯನ್ ಸ್ಟಾಂಡಡ್ಸ್ ರವರು ಚಿನ್ನದ ಹಾಲ್ ಮಾರ್ಕ್ ನಕಲಿಯೋ ಅಥವಾ ಅಸಲಿಯೋ ಎಂದು ಪತ್ತೆ ಮಾಡುವುದಕ್ಕೆ ''ಬಿಐಎಸ್ಐ ಕೇರ್ ಆ?ಯಪ್'' ಪರಿಚಯಿಸಿದೆ. ಈ ಆ?ಯಪ್‌ನ ಮೂಲಕ ಅತ್ಯಂತ ಸುಲಭವಾಗಿ ಚಿನ್ನದ ಗುಣಮಟ್ಟವನ್ನ ಖಾತ್ರಿ ಮಾಡಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಕೇಂದ್ರ ಬ್ಯೂರೋ ಆಫ್ ಇಂಡಿಯನ್ ಸ್ಟಾಂಡರ್ಡ್ಸ್ನ ಫಾರ್ಮರ್ ಡೈರೆಕ್ಟರ್ ಎಸ್. ಡಿ. ಸೆಲ್ವನ್ ರವರು ಮಾತನಾಡುತ್ತಾ, ಗ್ರಾಹಕ ಬಳಕೆಯ ವಸ್ತುಗಳಿಗೆ ಐಎಸ್‌ಐ, ಖಾದ್ಯ ವಸ್ತುಗಳಿಗೆ ಅಗ್ ಮಾರ್ಕ್ ಇದ್ದಂತೆ ಚಿನ್ನಾಭರಣಗಳ ಶುದ್ಧತೆಗೆ ಹಾಲ್ ಮಾರ್ಕ್ ಇದೆ. ಆಭರಣದಲ್ಲಿ ಬಳಸಲಾಗಿರುವ ಚಿನ್ನದ ಶುದ್ಧತೆಗೆ ಇದೊಂದು ಪ್ರಮಾಣ ಪತ್ರ ನೀಡಲಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಶತಮಾನಗಳಿಂದಲೂ ಹಾಲ್‌ಮಾರ್ಕ್ ಗುಣಮಟ್ಟ ಪರಿಶೀಲನೆಯ ಮಾನದಂಡವಾಗಿದೆ. ಗ್ರಾಹಕರ ಜಾಗೃತಿ ಮತ್ತು ರಕ್ಷಣೆ ಮತ್ತು ಇನ್ನೂ ಹೆಚ್ಚಿನ ಕುರಿತು ಜಾಗೃತವಾಗಿರಬೇಕು. ಗ್ರಾಹಕರು ವಸ್ತುವಿನ ಪ್ರಮಾಣ ಎಷ್ಟಿದೆ ಎಂಬುದಕ್ಕಿಂತ ಅದರ ಗುಣಮಟ್ಟ ಹೇಗಿದೆ ಎಂಬುದನ್ನು ಅರಿಯುವುದೇ ಮುಖ್ಯ. ದೈನಂದಿನ ಬದುಕಿನಲ್ಲಿ ಖರೀದಿಸುವ ವಸ್ತುಗಳ ಗುಣಮಟ್ಟದ ಬಗ್ಗೆ ಗಮನ ಕೊಡಬೇಕು. ಆದರೆ ಕೆಲವರು ಹೆಚ್ಚು ಹಣ ಕೊಟ್ಟು ಸಾಕಷ್ಟು ವಸ್ತುಗಳನ್ನು ಖರೀದಿಸುತ್ತಾರೆ. ಈ ವೇಳೆಯಲ್ಲಿ ಗುಣಮಟ್ಟದ ಬಗ್ಗೆ ಯೋಚನೆ ಮಾಡುವುದಿಲ್ಲ. ಸ್ವಿಚ್‌ಗಳು, ವಿದ್ಯುತ್ ಮೋಟಾರ್‌ಗಳು, ವೈರಿಂಗ್ ಕೇಬಲ್‌ಗಳು, ಹೀಟರ್ ಗಳು, ಅಡಿಗೆಯ ಉಪಕರಣಗಳು, ಸಿಮೆಂಟ್, ವಿದ್ಯುತ್ ಉಪಕರಣಗಳಂತಹ ಕೆಲವು ಉತ್ಪನ್ನಗಳನ್ನು ಭಾರತದಲ್ಲಿ ಮಾರಾಟ ಮಾಡಲು ಐಎಸ್‌ಐ ಗುರುತು ಕಡ್ಡಾಯವಾಗಿದೆ. ಅಲ್ಲದೆ ಇತರ ಉತ್ಪನ್ನಗಳಾದ ಎಲ್.ಪಿ.ಜಿ ಸಿಲಿಂಡರ್‌ಗಳು, ಆಟೋಮೊಬೈಲ್ಸ್ ಉಪಕರಣಗಳು, ಟೈರ್‌ಗಳು ಇತ್ಯಾದಿಗಳಿಗೂ ಕೂಡ ಐಎಸ್‌ಐ ಗುರುತು ಕಡ್ಡಾಯವಾಗಿದೆ. ಈ ಕುರಿತು ಜನ ಸಾಮಾನ್ಯರಲ್ಲಿ ವಸ್ತುವಿನ ಗುಣ ಮಟ್ಟದ ಬಗ್ಗೆ ಅರಿವು ಮೂಡಿಸಬೇಕು ಎಂದು ಸೂಚಿಸಿ ಕೇಂದ್ರ ಬ್ಯೂರೋ ಆಫ್ ಇಂಡಿಯನ್ ಸ್ಟಾಂಡರ್ಡ್ಸ್ ರವರು ಆರಂಭಮಾಡಿರುವ ''ಬಿಐಎಸ್ಐ ಕೇರ್ ಆ?ಯಪ್ ''ಅನ್ನು ಹೇಗೆ ಬಳಸಬೇಕು ಎಂದು ತಿಳಿಸಿ ಹಾಗೂ ಗ್ರಾಹಕರಿಗೆ ಅಗುವ ಉಪಯೋಗಗಳ ಬಗ್ಗೆ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಇಲಾಖೆಯ ಜಂಟಿ ನಿರ್ದೇಶಕ ನಾಗರಾಜ್, ಎಸ್.ಪಿ.ಸಿ ಅಫೀಫಾ.ಎಂ ಫಾತಿಮಾ, ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

## ಚುನಾವಣಾಧಿಕಾರಿಗಳು ನಿಯಮಿತವಾಗಿ ರಾಜಕೀಯ ಪಕ್ಷಗಳ ಸಭೆ ನಡೆಸಲು ಸೂಚನೆ

**ಬೆಂಗಳೂರು:** ಪ್ರಜಾಪ್ರಭುತ್ವದ ಸದೃಢಗೊಳಿಸಲು ಸಹಾಯವಾಗುವಂತೆ ಹಾಗೂ ಚುನಾವಣಾ ಸಂಬಂಧಿತ ಸಮಸ್ಯೆಗಳು ಉದ್ಭವಿಸಿದಲ್ಲಿ ಸಂಬಂಧಿತ ಚುನಾವಣಾಧಿಕಾರಿಗಳು ನಿಯಮಿತವಾಗಿ ರಾಜಕೀಯ ಪಕ್ಷಗಳ ಸಭೆ ನಡೆಸುವ ಮೂಲಕ ಚುನಾವಣಾ ಕಾನೂನುಗಳ ಕುರಿತು ಅರಿವು ಮೂಡಿಸುವ ಕಾರ್ಯವನ್ನು ನಿರಂತರವಾಗಿ ಮಾಡಬೇಕು ಎಂದು ಭಾರತ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರು ಕರೆ ನೀಡಿದರು. ಭಾರತ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾಗಿ ಅಧಿಕಾರ ಸ್ವೀಕರಿಸಿದ ನಂತರ ನವದೆಹಲಿಯ ಭಾರತೀಯ ಪ್ರಜಾಪ್ರಭುತ್ವ ನಿರ್ವಹಣಾ ಸಂಸ್ಥೆ (ಖಖಖಆಇಒ) ಯಲ್ಲಿ ಇಂದು ಹಮ್ಮಿಕೊಂಡಿದ್ದ ಎಲ್ಲಾ ರಾಜ್ಯಗಳು / ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳ ಎರಡು ದಿನಗಳ ಸಮ್ಮೇಳನ ಉದ್ದೇಶಿಸಿ ಮಾತನಾಡಿದರು. ದೇಶಾದ್ಯಂತ ಸಿಇಒಗಳು, ಡಿಇಒಗಳು, ಇಆರ್‌ಒಗಳು, ಬಿಎಲ್‌ಒಗಳು ಸೇರಿದಂತೆ ಎಲ್ಲಾ ಅಧಿಕಾರಿಗಳು ಪಾರದರ್ಶಕವಾಗಿ ಕೆಲಸ ಮಾಡಬೇಕು. ಪ್ರಜಾಪ್ರತಿನಿಧಿ ಕಾಯ್ದೆ 1950 ಮತ್ತು 1951; ಮತದಾರರ ನೋಂದಣಿ ನಿಯಮಗಳು 1960 ಹಾಗೂ ಚುನಾವಣಾ ನಿಯಮಗಳು 1961 ಮತ್ತು ಕಾಲಕಾಲಕ್ಕೆ ಭಾರತ ಚುನಾವಣಾ ಆಯೋಗ ಹೊರಡಿಸಿದ ಸೂಚನೆಗಳ ಪ್ರಕಾರ ಶಾಸನಬದ್ಧವಾಗಿ ಕರ್ತವ್ಯ ನಿರ್ವಹಿಸಲು ಸೂಚಿಸಿದರು. ರಾಜಕೀಯ ಪಕ್ಷಗಳ ಮನವಿಗಳಿಗೆ ಕಾನೂನು ಚೌಕಟ್ಟಿನಲ್ಲಿ ತ್ವರಿತವಾಗಿ ಸ್ಪಂದಿಸಬೇಕು. ಎಲ್ಲಾ ಶಾಸನಬದ್ಧ ಹಂತಗಳಲ್ಲಿ ರಾಜಕೀಯ ಪಕ್ಷಗಳ ಸಭೆಗಳನ್ನು ನಿಯಮಿತವಾಗಿ ನಡೆಸಬೇಕು. ಸಂಬಂಧಪಟ್ಟ ಪ್ರಾಧಿಕಾರದಿಂದ ಸಮಸ್ಯೆಗಳನ್ನು ಪರಿಹರಿಸಬೇಕು. ಎಲ್ಲಾ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳು ಮಾರ್ಚ್ 31 ರೊಳಗೆ ತಮ್ಮ ಸಂಬಂಧಿತ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಕ್ರಮ ಕೈಗೊಂಡ ವರದಿಯನ್ನು ಸಲ್ಲಿಸಬೇಕು ಎಂದು ಅವರು ಹೇಳಿದರು. ಎಲ್ಲಾ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿಗಳು, ಆರ್‌ಒಎಸ್, ಇಆರ್‌ಒಗಳು ಚುನಾವಣಾ ಕಾನೂನುಗಳು ಮತ್ತು ಆಯೋಗ ಕಾಲ-ಕಾಲಕ್ಕೆ ಆದೇಶಿಸುವ ಸೂಚನೆಗಳನ್ನು ಸ್ಪಷ್ಟವಾಗಿ ಅರಿತಿರಬೇಕು. ಎಲ್ಲಾ ಬಿಎಲ್‌ಒಗಳಿಗೆ ಮತದಾರರೊಂದಿಗೆ ಸೌಜನ್ಯದಿಂದ ವರ್ತಿಸಲು ತರಬೇತಿ ನೀಡಬೇಕು ಮತ್ತು ಯಾವುದೇ ಚುನಾವಣಾ ಸಿಬ್ಬಂದಿ ಅಥವಾ ಅಧಿಕಾರಿಗಳು ಭಯಮುಕ್ತ ವಾತಾವರಣದಲ್ಲಿ ನಿರ್ಭೀತಿಯಿಂದ ಕರ್ತವ್ಯ ನಿರ್ವಹಿಸಬೇಕು ಎಂದರು.

## ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

**ಮೈಸೂರು:** ಮಾರ್ಚ್ 5 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯ ವರೆಗೆ ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯ 66/11 ಕೆ.ವಿ ಕೆ.ಹೆಚ್.ಬಿ, 66/11 ಕೆ.ವಿ ಡಿ.ಎಂ.ಜಿ ಹಳ್ಳಿ ಮತ್ತು 66/11 ಕೆ.ವಿ ಜೆ.ಐ.ಎಸ್ ಕಲಾಮಂದಿರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ 4ನೇ ತ್ರೈಮಾಸಿಕ ನಿರ್ವಹಣಾ ಕೆಲಸದ ಹಮ್ಮಿಕೊಂಡಿರುವುದರಿಂದ ಈ ಕೆಳಕಂಡ ಪ್ರದೇಶಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.66/11 ಕೆ.ವಿ ಕೆ.ಹೆಚ್.ಬಿ ವಿದ್ಯುತ್ ವಿತರಣಾಕೇಂದ್ರದ ವ್ಯಾಪ್ತಿಯ ಪ್ರದೇಶಗಳು: ವಿಜಯನಗರ 4ನೇ ಹಂತ, ಕೆ.ಹೆಚ್.ಬಿ ಕಾಲೋನಿ, ಹೂಟಗಳ್ಳಿ ಗ್ರಾಮ, ಬೆಳವಾಡಿ ಗ್ರಾಮ, ಬಸವನಪುರ, ಮರಟಿಕ್ಯಾತನಹಳ್ಳಿ, ಪಂಚಚಾರ್ಯ್ಯ ಲೇಔಟ್, ಕೆ. ಹೆಮ್ಮನಹಳ್ಳಿ, ಲಿಂಗದೇವರಕೊಪ್ಪಲು, ಇಲವಾಲ, ಹೂಟಗಳ್ಳಿ ಕೆ.ಆರ್.ಎಸ್.ರೋಡ್, ಆದಿತ್ಯಾ ಬಡಾವಣೆ, ಎಸ್.ಆರ್.ಎಸ್. ಕಾಲೋನಿ, ಕೂರ್ಗಳ್ಳಿ ಗ್ರಾಮ, ಎನ್.ಹೆಚ್.ಬಿ ಕಾಲೋನಿ, ಬೆಳವಾಡಿ ಕೈಗಾರಿಕಾ ಪ್ರದೇಶ, ಶಾಹಿ ಗಾರ್ಮೆಂಟ್ಸ್, ಹೂಟಗಳ್ಳಿ ಕೈಗಾರಿಕಾ ಪ್ರದೇಶ, ಕೂರ್ಗಳ್ಳಿ ಕೈಗಾರಿಕಾ ಪ್ರದೇಶ, ಗ್ರ್ಯಾಂಡ್ ಮೌರ್ಯ್ಯ ಹೋಟೆಲ್, ರಿಲಾಯನ್ಸ್, ಮಾಸ್ ಫರ್ನಿಚರ್ಸ್, ಯಶಸ್ವಿನಿ ಕಲ್ಯಾಣ ಮಂಟಪ, ಸೌಪರ್ಣಿಕ ಅಪಾರ್ಟ್‌ಮೆಂಟ್ ಹಿನಕಲ್, ಎಸ್.ವಿ.ಇ.ಐ ಕಾಲೇಜು ಸುತ್ತಮುತ್ತ, ಜಟ್ಟಿಹುಂಡಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

**66/11 ಕೆ.ವಿ ಡಿ.ಎಂ.ಜಿ ಹಳ್ಳಿ ವಿದ್ಯುತ್ ವಿತರಣಾಕೇಂದ್ರದ ವ್ಯಾಪ್ತಿಯ ಪ್ರದೇಶಗಳು:** ಡಿ.ಎಂ.ಜಿ. ಹಳ್ಳಿ, ಕಮರಹಳ್ಳಿ ಗ್ರಾಮ, ಮಾಣಿಕ್ಯಪುರ, ದೊಡ್ಡಹಟ್ಟಿಹುಂಡಿ, ಮರಿಯ್ಯನಹುಂಡಿ, ಕಟ್ಟೆಹುಂಡಿ, ಶೆಟ್ಟಿನಾಯಕನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಪ್ರದೇಶಗಳು. 66/11 ಕೆ.ವಿ ಜೆ.ಐ.ಎಸ್ ಕಲಾಮಂದಿರ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯ ಪ್ರದೇಶಗಳು: ಸರಸ್ವತಿಪುರಂ 1 ರಿಂದ 5ನೇ ಮೇನ್, ನ್ಯೂಕಾಂತರಾಜ ಅರಸ್ ರಸ್ತೆ, ಕೆ,ಜಿಕೊಪ್ಪಲು ಮುಖ್ಯರಸ್ತೆ, ಯುನಿವರ್ಸಿಟಿ ಕ್ವಾಟ್ರ್ರಸ್, ಮುಸ್ಲಿಂ ಹಾಸ್ಟೆಲ್, ವಿಶ್ವಮಾನವ ಜೋಡಿರಸ್ತೆ ಮುರಗನ್ ಮೆಡಿಕಲ್ಸ್ ಯಿಂದ ಕುಕ್ಕರಹಳ್ಳಿ ಕೆರೆರಸ್ತೆವರೆಗೆ, ಸರಸ್ವತಿಪುರಂ 5 ರಿಂದ 16ನೇ ಮೇನ್, ಪಡುವರಾಹಳ್ಳಿ, ಡಿ.ಸಿ ರೆಸಿಡೆನ್ಸಿ, ರಿಜನಲ್‌ಕಮಿಷನರ್‌ಆಫೀಸ್, ಸಿ.ಎಫ್.ಟಿ.ಆರ್.ಐ ಕ್ಯಾಂಪಸ್, ವಾಲ್ಮೀಕಿರಸ್ತೆ, ಜಡ್ಜ್ ಕ್ವಾಟ್ರ್ರಸ್, ಒಂಟಿಕೊಪ್ಪಲು, ಹುಣಸೂರು ಮುಖ್ಯರಸ್ತೆ, ವಾಗ್ದೇವಿ ನಗರ, ಜೆ.ಸಿ ಕಾಲೇಜು ಸುತ್ತಮುತ್ತ, ಚಾಮರಾಜ ಮೊಹಲ್ಲಾ, ಜಿಲ್ಲಾ ಪಂಚಾಯತ್ ಕಛೇರಿ, ಕೋರ್ಟ್, ಅರಸುರಸ್ತೆ, ಜಿಲ್ಲಾಧಿಕಾರಿಕಛೇರಿ, ಮಹಾರಾಜ ಮತ್ತು ಯುವರಾಜ ಕಾಲೇಜು ಸುತ್ತಮುತ್ತ, ಶಿವರಾಂಪೇಟೆ, ದಿವಾನ್ಸ್ ರಸ್ತೆ, ಧನ್ವಂತರಿರಸ್ತೆ, ಜೆ.ಕೆ.ಗ್ರೌಂಡ್ ಸುತ್ತಮುತ್ತಲಿನ ಪ್ರದೇಶ, ಮೆಟ್ರೋಪೋಲ್ ಸುತ್ತಮುತ್ತ, ಜೆ.ಎಲ್.ಬಿ ರಸ್ತೆ, ಜಯಲಕ್ಷ್ಮೀ ವಿಲಾಸ್, ಜಿಲ್ಲಾ ಪಂಚಾಯತ್ ಕಛೇರಿ, ನ್ಯಾಯಾಲಯದ ಆವರಣ, ಏರ್‌ಲೈನ್ಸ್ ಹೋಟೇಲ್ ರಸ್ತೆ, ಮಹಾರಾಜ ಹಾಸ್ಟೆಲ್ ಏರಿಯಾ, ಗೀತಾ ರಸ್ತೆ, ರಾಮಸ್ವಾಮಿ ವೃತ್ತ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಆದರಿಂದ ಸಾರ್ವಜನಿಕರು ಸಹಕರಿಸಬೇಕೆಂದು ಚಾ.ವಿ.ಸ.ನಿ.ನಿ.,ಯ ವಿ.ವಿ.ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ.) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದ ವ್ಯಕ್ತಿಯ ಪತ್ತೆಗೆ ಮನವಿ

**ಮೈಸೂರು:** ಸುಮಾರು 70 ವರ್ಷದ ಕೆಂಪಯ್ಯ ಎಂಬುವವರು ಸೆಪ್ಟೆಂಬರ್ 2024 ರಲ್ಲಿ ಕಾಣೆಯಾಗಿದ್ದು, ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ಚಹರೆ: ಸುಮಾರು 70 ವರ್ಷ ವಯಸ್ಸಾಗಿದ್ದು, 5.8 ಅಡಿ ಎತ್ತರ, ಸಾಧಾರಣ ಮೈಕಟ್ಟು, ಕೋಲುಮುಖ, ಕಪ್ಪು ಮೈಬಣ್ಣ, ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ಶರ್ಟ್ , ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಕಾನೆಯಾದ ವ್ಯಕ್ತಿಯ ಬಗ್ಗೆ ಮಾಹಿತಿ ಕಂಡುಬಂದಲ್ಲಿ ಮೈಸೂರು ಜಿಲ್ಲಾ ಪೊಲೀಸ್ ವರಷ್ಠಾಧಿಕಾರಿಗಳ ಕಛೇರಿಯ ದೂ.ಸಂ: 2520040 ಅಥವಾ ಮೈಸೂರು ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ: 2444800, ಮೈಸೂರು ಸೌತ್ ಪೊಲೀಸ್ ಠಾಣೆಯ ದೂ.ಸಂ: 0821-2444955 ನ್ನು ಸಂಪರ್ಕಿಸಬಹುದು ಎಂದು ಮೈಸೂರು ಸೌತ್ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್ ಅವರು ರಾಜಭವನದಲ್ಲಿ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಸೌಹಾರ್ದಯುತವಾಗಿ ಮಂಗಳಾರ ಭೇಟಿ ಮಾಡಿದರು.

## ಡಿಶ್ ಕೇಬಲ್ ನೆಟ್ವರ್ಕ್ ಸಂಸ್ಥೆಗಳಿಗೆ ಮುನ್ನೆಚ್ಚರಿಕೆ ಕ್ರಮ

**ಮೈಸೂರು:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ವತಿಯಿಂದ ನ.ರಾ ಮೊಹಲ್ಲಾದ ಕಾರ್ಯ ಮತ್ತು ಪಾಲನಾ ವಿಭಾಗದ ವ್ಯಾಪ್ತಿಯ ಕೇಂದ್ರಗಳಾದ ಜ್ಯೋತಿನಗರ, ಚಾಮುಂಡಿಪುರಂ ಹಾಗೂ ವರುಣ ಉಪವಿಭಾಗಗಳಲ್ಲಿನ ಹಲವಾರು ನಿಗಮದ ವಿದ್ಯುತ್ ಕಂಬಗಳನ್ನು ಬಳಸಿ ಅವುಗಳ ಮೇಲೆ ಡಿಶ್ ಕೇಬಲ್ ಹಾಗೂ ನೆಟ್ವರ್ಕ್ ಕೇಬಲ್‌ಗಳನ್ನು ಅಧಿಕೃತವಾಗಿ/ಅನಧಿಕೃತವಾಗಿ ಹಾಗೂ ಸರಿಯಾದ ಕ್ರಮ ಅನುಸರಿಸದೇ ಎಳೆದಿರುವುದು ಚಾ.ವಿ.ಸ.ನಿ.ನಿ ಯ ನಿಯಮಗಳಿಗೆ ವಿರುದ್ಧವಾಗಿದೆ.

ಡಿಶ್ ಕೇಬಲ್ ಮತ್ತಿತರೆ ಕೇಬಲ್‌ಗಳನ್ನು ಸರಿಯಾದ ರೀತಿಯಲ್ಲಿ ಎಳೆಯದೇ ಇರುವುದರಿಂದ ವಿದ್ಯುತ್ ಅಪಘಾತಗಳು ಘಟನೆಗಳು ಸಂಭವವಿರುತ್ತದೆ ಹಾಗೂ ಸಾರ್ವಜನಿಕ ಆಸ್ತಿ-ಪಾಸ್ತಿಗಳಿಗೆ ಹಾನಿಯುಂಟಾಗಬಹುದಾಗಿರುತ್ತದೆ. ಇಂತಹ ಘಟನೆಗಳು ಸಂಭವಿಸಿದಲ್ಲಿ ಚಾ.ವಿ.ಸ.ನಿ.ನಿ ಯು ಜವಾಬ್ದಾರಿಯಾಗಿರುವುದಿಲ್ಲ ಬದಲಾಗಿ ಕೇಬಲ್ ನೆಟವರ್ಕ್ ಏಜೆನ್ಸಿಗಳೇ ನೇರವಾಗಿ ಜವಾಬ್ದಾರರಾಗಿರುತ್ತಾರೆ. ಈ ಬಗ್ಗೆ ಹಿಂದೆಯೂ ಪತ್ರಿಕಾ ಪ್ರಕಟಣೆ ನೀಡಿ ಸೂಚಿಸಿದ್ದರೂ ಕೂಡ ಹಲವರು ಡಿಶ್ ಕೇಬಲ್ ನೆಟ್ವರ್ಕ್ ಸಂಸ್ಥೆಗಳು ಯಾವೂದೇ ಕ್ರಮ ಕೈಗೊಂಡಿರುವುದಿಲ್ಲ, ಆದ್ದರಿಂದ ಸಂಬಂಧ ಪಟ್ಟ ಕೇಬಲ್ ಆಪರೇಟರ್/ ನೆಟ್ವರ್ಕ್ ಸಂಸ್ಥೆಗಳು ಕೂಡಲೇ ತುರ್ತು ಕ್ರಮವನ್ನು ವಹಿಸಿ ಚಾ.ವಿ.ಸ.ನಿ.ನಿ ವಿದ್ಯುತ್ ಕಂಬಗಳನ್ನು ಬಳಸಿ ಎಳೆಯಲಾದ ಕೇಬಲ್‌ಗಳನ್ನು ಪರಿವೀಕ್ಷಣೆ ನಡೆಸಿ ತಪಶೀಲು ಪಟ್ಟಿ ಹಾಗೂ ಪ್ರತಿ ಕಂಬಗಳಲ್ಲಿ ಎಳೆದಿರುವ ತಮ್ಮ ಸಂಸ್ಥೆಯ ಕೇಬಲ್ ಸಂಖ್ಯೆಗಳನ್ನು ಗುರುತಿಸಿ ಚಾವಿಸನಿನಿ ಯಿಂದ ನೀಡಲಾಗಿರುವ ಮಂಜೂರಾತಿ ಆದೇಶದಂತೆ ನಿಯಮಾನುಸಾರ ಕ್ರಮವಹಿಸಿ ತಮ್ಮ ನೆಟ್ವರ್ಕ್ ಕೇಬಲ್‌ಗಳನ್ನು ಮುಂದಿನ 7 ದಿನಗಳೊಳಗಾಗಿ ಸರಿಪಡಿಸಿಕೊಳ್ಳುವುದು ಹಾಗೂ ಅನಧಿಕೃತವಾಗಿ ಕೇಬಲ್‌ಗಳನ್ನು ಎಳೆದಿದ್ದಲ್ಲಿ ಕೂಡಲೇ ಸಂಬಂಧಪಟ್ಟ ಉಪವಿಭಾಗಗಳನ್ನು ಸಂಪರ್ಕಿಸಿ ನಿಗಮದ ನಿಯಮಾನುಸಾರ ಮಂಜೂರಾತಿ ಪಡೆದು ಹಣವನ್ನು ಪಾವತಿಸುವಂತೆ ಸೂಚಿಸಲಾಗಿದೆ. ನ.ರಾ ಮೊಹಲ್ಲಾ ವಿಭಾಗದಿಂದಲೇ ಪುನಃ ಯಾವುದೇ ಮುನ್ಸೂಚನೆ ನೀಡದೇ ಅಂತಹ ಕೇಬಲ್‌ಗಳನ್ನು ಮತ್ತು ಅನಧಿಕೃತ ಕೇಬಲ್ ನೆಟ್ವರ್ಕ್‌ಗಳನ್ನು ತೆರವುಗೊಳಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಹಾಗೂ ಇದರಿಂದ ಉಂಟಾಗುವ ಯಾವುದೇ ತೊಂದರೆಗಳಿಗೆ ಚಾ.ವಿ.ಸ.ನಿ.ನಿ ಯು ಜವದ್ದಾರಿಯಾಗಿರುವುದಿಲ್ಲ ಎಂದು ಚಾ.ವಿ.ಸ.ನಿ.ನಿ ಯ ನ.ರಾ ಮೊಹಲ್ಲಾದ ಕಾರ್ಯ ಮತ್ತು ಪಾಲನೆಯ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತರಬೇತಿಯಿಂದ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಲು ಸಾಧ್ಯ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾಪಂಚಾಯಿತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕಾಲೇಜು ಶಿಕ್ಷಣ ಇಲಾಖೆ ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ ಶಿಡ್ಲಘಟ್ಟ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಆಯೋಜಿಸಲಾಗಿದ್ದ ಸ್ಪರ್ಧಾತ್ಮಕ ಪರೀಕ್ಷಾ ತಯಾರಿಗೆ ಒಂದು ದಿನದ ತರಬೇತಿ ಕಾರ್ಯಗಾರ ಕಾರ್ಯಕ್ರಮವನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಮುರಳಿ ಆನಂದ್ ರವರು ಉದ್ಘಾಟಿಸಿ ಮಾತನಾಡುತ್ತಾ, ವಿದ್ಯಾರ್ಥಿಗಳನ್ನು ಕುರಿತು ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಲು ಪೂರ್ವ ತಯಾರಿ ಹಾಗೂ ತರಬೇತಿಯಿಲ್ಲದೆ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಬಾರದು ಎಂದು ಸಲಹೆ ನೀಡಿದರು ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಹಮ್ಮಿಕೊಂಡಿರುವುದು ನಮ್ಮೆಲ್ಲರ ಅದೃಷ್ಟ ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸುವ ಯಾವುದೇ ಅಭ್ಯರ್ಥಿ, ಸಾಮಾನ್ಯ ಜ್ಞಾನ ಪತ್ರಿಕೆಗೆ ಪರಿಣಾಮಕಾರಿಯಾಗಿ ಸಿದ್ದವಾಗಲು ದಿನಪತ್ರಿಕೆಗಳ ಓದು ಕಡ್ಡಾಯ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಓದುವವರ ಸಿದ್ಧತೆಗೆ ಒಂದು ನಿರ್ದಿಷ್ಟ ಕ್ರಮವಿದ್ದರೇ ಮಾತ್ರ ಯಶಸ್ಸು ಸಾಧ್ಯ. ಸ್ಪರ್ಧಾತ್ಮಕ ಪರೀಕ್ಷೆ ತಯಾರಿಕೆ ಇಲಾಖೆವತಿಯಿಂದ ಉತ್ತಮವಾದ ಸಂಪನ್ಮೂಲ ವ್ಯಕ್ತಿಯನ್ನು ಕರೆಸಿ ಈ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತರಬೇತಿಯನ್ನು ನೀಡುತ್ತಿದ್ದಾರೆ ಇದನ್ನು ಎಲ್ಲರೂ ಸದುಪಯೋಗಪಡಿಸಿಕೊಳ್ಳಿ ಎಂದು ತಿಳಿಸಿದರು.



ಶಿಶು ಅಭಿವೃದ್ಧಿ ಯೋಜನಾಧಿಕಾರಿ ವಿದ್ಯಾ.ಎ ರವರು ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುವ ವಿದ್ಯಾರ್ಥಿಗಳ ಗುರಿ ಐಎಎಸ್, ಐಪಿಎಸ್ ಅಥವಾ ಕೆಎಎಸ್‌ಅಧಿಕಾರಿ ಆಗಬೇಕು ಎಂದಾಗಿದ್ದರೆ ಶ್ರದ್ದೆ ಮತ್ತು ಆಸಕ್ತಿಯಿಂದ ಓದಿದರೆ ಮಾತ್ರ ಯಶಸ್ಸು ಕಾಣಲು ಸಾಧ್ಯ. ನಾನು ಓದಿ ಪರೀಕ್ಷೆಯನ್ನು ಬರೆದಿದ್ದು ಕೆಪಿಎಸ್ಸಿ ಪರೀಕ್ಷೆ ಮಾತ್ರ, ನನ್ನ ಗುರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕೆಲಸ ಮಾಡಲು ಇಚ್ಚಿಸಿದ್ದೆ ಅದರಂತೆ ಇಂದು ಯಶಸ್ಸು ಕಂಡಿದ್ದೇನೆ. ಈಗಿನ ವಿದ್ಯಾರ್ಥಿಗಳು ಮೊಬೈಲ್ ಬಳಕೆಯನ್ನು ಹೆಚ್ಚು ಬಳಸುತ್ತಿದ್ದೀರಿ ಅದರಿಂದ ದೂರವಿರಿ ಪದೇಪದೇ ಬರುವ ಮೇಸಜ್ಗಳ ಸದ್ದು, ಆಗಾಗ ಬರುವ ಫೋನ್ಕಾಲ್ಗಳು ನಿಮ್ಮ ಏಕಾಗ್ರತೆಯನ್ನು ಹಾಳು ಮಾಡಬಹುದು. ಹೀಗಾಗಿ ಓದುವ ಸಮಯದಲ್ಲಿ ಮೊಬೈಲ್ಬಳಕೆಯಿಂದ ಸ್ವಲ್ಪ ದೂರವಿದ್ದರೆ ಒಳ್ಳೆಯದು. ವಿದ್ಯಾರ್ಥಿಗಳು ಒಂದು ಗುರಿಯನ್ನು ಇಟ್ಟುಕೊಂಡು ಉನ್ನತ ಅಧಿಕಾರಿಗಳಾಗಬೇಕು ಎಂದು ತಿಳಿಸಿದರು.

ನಂತರ ಸಂಪನ್ಮೂಲ ವ್ಯಕ್ತಿಗಳು ಈ ಸ್ಪರ್ಧಾತ್ಮಕ ಪರೀಕ್ಷೆಗೆ ಹೇಗೆ ತಯಾರಿ ಮಾಡಬೇಕು ಯಾವ ರೀತಿ ಓದಬೇಕು ಎಂಬುವುದರ ಬಗ್ಗೆ ತಿಳಿಸಿದರು. ಈ ಕಾರ್ಯಕ್ರಮದಲ್ಲಿ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಸಮಾಜಶಾಸ್ತ್ರದ ಉಪನ್ಯಾಸಕ ಪ್ರೊ.ಆದಿನಾರಾಯಣ, ಸಂಪನ್ಮೂಲ ವ್ಯಕ್ತಿಯಾದ ಸುಪ್ರಿಯಾ, ಜಿಲ್ಲಾ ವಿಕಲಚೇತನ ಪುನರ್ವಸತಿ ಕೇಂದ್ರದ ನೋಡಲ್ ಅಧಿಕಾರಿ ಗಣೇಶ್, ಹಿರಿಯ ನಾಗರಿಕ ಸಹಾಯವಾಣಿ ಕೇಂದ್ರದ ಜಿಲ್ಲಾ ಸಂಯೋಜಕರು ಶ್ರೀನಿವಾಸ್, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗೆ ಕುಡಿಯುವ ನೀರನ್ನು ಒದಗಿಸಲು ಕ್ರಮ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

**ಬೆಂಗಳೂರು:** ಎತ್ತಿನಹೊಳೆ ಯೋಜನೆಯಡಿಯ ಮೂಲ ಉದ್ದೇಶ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಕುಡಿಯುವ ನೀರಿನ ಭವಣೆಯನ್ನು ನಿವಾರಿಸುವುದು ಹಾಗೂ ಅಂತರ್ಜಲ ಮಟ್ಟ ವೃದ್ಧಿಸುವುದು ಎಂದು ಮೂಲ ಡಿಪಿಆರ್ ನಲ್ಲಿ ಅನುಮೋದಿಸಲಾಗಿದ್ದು ಕೋಲಾರ ಲಿಫ್ಟ್ ಕಾಮಗಾರಿ 22.30 ಕಿಮೀ ಉದ್ದದ



ಗುರುತ್ವ ಪೈಪ್‌ಲೈನ್ ನಿರ್ಮಾಣ ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿದ್ದು, ಉಳಿಕೆ ಗುರುತ್ವ ಪೈಪ್ ಲೈನ್ ನಿರ್ಮಾಣ ಹಾಗೂ ಶ್ರೀನಿವಾಸಪುರ ಫೀಡರ್ ಪೈಪ್‌ಲೈನ್ ನಿರ್ಮಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಗುತ್ತಿಗೆ ವಹಿಸಲಾಗಿದ್ದು, ಅವುಗಳ ಪಂಕ್ತೀಕರಣಗಳನ್ನು ಅಂತಿಮಗೊಳಿಸಿದ್ದು, ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಇಂದು ವಿಧಾನಸಭೆಯಲ್ಲಿ ಶ್ರೀನಿವಾಸಪುರ ಶಾಸಕರಾದ ವಿಂಕಟಶಿವಾರೆಡ್ಡಿ ಜಿ.ಕೆ. ಇವರ ಪ್ರಶ್ನೆಗೆ ಉತ್ತಿರಿಸಿದ ಉಪ ಮುಖ್ಯಮಂತ್ರಿಗಳು, ಆಗಸ್ಟ್ 2025ರ ಅಂತ್ಯಕ್ಕೆ ಸದರಿ ಯೋಜನೆಯ ಎಲ್ಲಾ 8 ವಿಯರ್ ಗಳಿಂದ ಲಭ್ಯವಾಗಲಿರುವ 24.01 ಟಿ.ಎಂ.ಸಿ ನೀರನ್ನು ಮೇಲೆತ್ತಿ ಗುರುತ್ವ ಕಾಲುವೆ 231.00 ಕಿಮೀ (ತುಮಕೂರು) ವರೆಗೆ ನಾಲೆಗೆ ನೀರು ಹರಿಸಲು ಯೋಜಿಸಲಾಗಿದೆ. ಭೂಸ್ವಾಧೀನ ಪ್ರಕಿಯೆಯನ್ನು ಶೀಘ್ರವಾಗಿ ಪೂರ್ಣಗೊಳಿಸಿ ಕೋಲಾರ ಮತ್ತು ಶ್ರೀನಿವಾಸಪುರ ಫೀಡರ್ ಪೈಪ್ ಲೈನ್ ಕಾಮಗಾರಿಗಳನ್ನು 2025-26ನೇ ಸಾಲಿನಲ್ಲಿ ಪ್ರಾರಂಭಿಸಲಾಗುವುದು. ಈ ಯೋಜನೆಯನ್ನು ಮಾರ್ಚ್ 2027ರ ಅಂತ್ಯಕ್ಕೆ ಅನುದಾನದ ಲಭ್ಯತೆ ಮೇರೆಗೆ ಸಂಪೂರ್ಣವಾಗಿ ಪೂರ್ಣಗೊಳಿಸಲು ಕಾರ್ಯಕ್ರಮ ರೂಪಿಸಲಾಗಿದೆ ಎಂದು ತಿಳಿಸಿದರು.

## ಬಂಗಾರಪೇಟೆ ಕೆರೆಗಳ ಅಭಿವೃದ್ದಿಗಾಗಿ ಕ್ರಮ - ಸಚಿವ .ಭೋಸರಾಜು

**ಬೆಂಗಳೂರು:** ಬಂಗಾರಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 7 ಸಣ್ಣ ನೀರಾವರಿ ಕೆರೆಗಳಿದ್ದು ಅವುಗಳ ಅಭಿವೃದ್ಧಿಗೆ ಈಗಾಗಲೇ ಅನುದಾನ ಬಿಡುಗಡೆ ಮಾಡಲಾಗಿದೆ. ಕೆ.ಅಂಡ್ ಸಿ ವ್ಯಾಲಿ ಎರಡನೇ ಹಂತದ ಕಾಮಗಾರಿಯನ್ನು ಟರ್ನ್ ಕೀ ಆಧಾರದ ಮೇಲೆ 30 ತಿಂಗಳ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಒಪ್ಪಂದವಾಗಿದ್ದು ಕರಾರಿನಂತೆ ಕಾಮಗಾರಿಯನ್ನು ನವೆಂಬರ್ 2024 ರೊಳಗೆ ಪೂರ್ಣಗೊಳಿಸಬೇಕಾಗಿದೆ. ಈ ಯೋಜನೆಯಡಿ ಒಟ್ಟು 9 ಸಂಖ್ಯೆ ಪಂಪ್ ಹೌಸ್, 221 ಕಿಮೀ ಉದ್ದದ ರೈಸಿಂಗ್ ಮೈನ್ ನ್ನು ಅಳವಡಿಸಿ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಒಟ್ಟು 272 ಕೆರೆಗಳನ್ನು ತುಂಬಿಸಲು ಯೋಜಿಸಲಾಗಿರುತ್ತದೆ ಎಂದು ಸಣ್ಣ ನೀರಾವರಿ, ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್. ಭೋಸರಾಜು ಅವರು ತಿಳಿಸಿದರು. ಇಂದು ವಿಧಾನಸಭೆಯಲ್ಲಿ ಬಂಗಾರಪೇಟೆ ಶಾಸಕರಾದ ಎಸ್.ಎನ್.ನಾರಾಯಣಸ್ವಾಮಿ ಕೆ.ಎಂ ಇವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪ್ರಸ್ತುತ 9 ಪಂಪಿಂಗ್ ಸ್ಟೇಷನ್ ಗಳ ಎದುರಾಗಿ ಡಿಸೆಂಬರ್ 2024ರ ಅಂತ್ಯಕ್ಕೆ ಮೂರು ಪಂಪ್ ಹೌಸ್ ಗಳನ್ನು ಪೂರ್ಣಗೊಳಿಸಿ ಒಂದು ಪಂಪ್ ಹೌಸ್ ನ್ನು ಪ್ರಾಯೋಗಿಕವಾಗಿ ಚಾಲನೆ ಮಾಡಲಾಗಿರುತ್ತದೆ ಮತ್ತು ಎರಡು ಪಂಪ್ ಹೌಸ್‌ಗಳನ್ನು ಡ್ರೈ ರನ್ ಮಾಡಲಾಗಿರುತ್ತದೆ. ಇನ್ನು ಮೂರು ಪಂಪ್ ಹೌಸ್ ಗಳನ್ನು ಮಾರ್ಚ್ 2025ರ ಅಂತ್ಯದೊಳಗೆ ಪ್ರಾಯೋಗಿಕವಾಗಿ ಚಾಲನೆ ಮಾಡಲಾಗುವುದು. ಬಾಕಿ ಮೂರು ಪಂಪ್ ಹೌಸ್ ಗಳನ್ನು ಶೇ.80ರಷ್ಟು ಪೂರ್ಣಗೊಳಿಸಲಾಗಿರುತ್ತದೆ. ಒಟ್ಟಾರೆ ಕಾಮಗಾರಿಯನ್ನು ಸೆಪ್ಟೆಂಬರ್ 2025ರೊಳಗಾಗಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ಎಂದರು.

# ಸಂಜೆ ಟಿಪ್ಸ್

## SIL 4000 ಉದ್ಯೋಗಿಗಳ ನೇಮಕ

SIL, ರಿಯಲ್ ಎಸ್ಟೇಟ್ ಪ್ಲಾಟ್ಫಾರ್ಮ್, ಹೊಸ ವರ್ಷವನ್ನು ದೇಶದಾದ್ಯಂತ 50+ ಹೊಸ ಕ್ಲೈಂಟ್ಗಳನ್ನು ಸೇರಿಸಿಕೊಳ್ಳುವುದರೊಂದಿಗೆ ಯಶಸ್ವಿಯಾಗಿ ಆರಂಭಿಸಿದೆ. ಈ ಹೊಸ ವಿಸ್ತರಣೆಗೆ ಅನುಗುಣವಾಗಿ, SILA ಮಾರ್ಚ್ 2025ರೊಳಗೆ ಮುಂಬೈ, ಹೈದರಾಬಾದ್, ಬೆಂಗಳೂರು ಮತ್ತು ಚೆನ್ನೈಯಂತಹ ಪ್ರಮುಖ ನಗರಗಳಲ್ಲಿ 4,000+ ಉದ್ಯೋಗಿಗಳ ನೇಮಕಾತಿ ಮಾಡುತ್ತಿದೆ. SILAಯ ಹೊಸ ಕ್ಲೈಂಟ್ಗಳಲ್ಲಿ GJSW Steel, Jindal Steel and Power, Foxconn, L&T Technology Services, JM Finance, DLF, Piramal, Honda, TVS, Brigade - World Trade Center, Prestige Estates, ICICI Prudential ಮುಂತಾದವರು ಸೇರಿದ್ದಾರೆ. SIL ನ ನಿರ್ದೇಶಕ ರಾಘವ್ ಕಪೂರ್ ಹೇಳುತ್ತಾರೆ, SIL ಸೇವಾ ವ್ಯಾಪಾರದಲ್ಲಿ ತೀವ್ರವಾದ ಬೆಳವಣಿಗೆಯನ್ನು ಕಾಣುತ್ತಿದೆ. ಕಳೆದ 45 ದಿನಗಳಲ್ಲಿ ಹಲವಾರು ಕ್ಲೈಂಟ್ಗಳು ನಮ್ಮ ಸೇವೆಗಳ ಮೇಲೆ ವಿಶ್ವಾಸವನ್ನು ಹೊಂದಿದ್ದಾರೆ. ಸದ್ಯ, ಖಖಐಂ ದೇಶದಾದ್ಯಂತ 200 ಮಿಲಿಯನ್ ಚದರ ಅಡಿ ಮೌಲ್ಯದ ಆಸ್ತಿ ನಿರ್ವಹಿಸುತ್ತಿದೆ ಮತ್ತು 25,000ಕ್ಕೂ ಹೆಚ್ಚು ಉದ್ಯೋಗಿಗಳನ್ನು ಹೊಂದಿದೆ.ನಿಮ್ಮ ಹೆಸರು, ಸಂಖ್ಯೆ ಮತ್ತು ಇಚ್ಛಿತ ಸ್ಥಳವನ್ನು ನಮ್ಮ ವಾಟ್ಸಾಪ್ಗೆ ಕಳುಹಿಸಿ, ನಮ್ಮ ತಂಡ ನಿಮಗೆ ಸಂಪರ್ಕಿಸುತ್ತದೆ – +91 7738259830 SILವಿಕಲಚೇತನ ವ್ಯಕ್ತಿಗಳಿಗೆ ಉದ್ಯೋಗ ಅವಕಾಶ ನೀಡುವ ಮೂಲಕ ಒಳಗೊಂಡು ಪ್ರೋತ್ಸಾಹಿಸುತ್ತಿದೆ. ನಾವು Stree Mukti Sanghatana (SMS), Bombay Foundation of Deaf Women (BFDW), National Society for Equal Opportunities for the Handicapped (NASEOH)ಜತೆ ಸಹಕರಿಸುತ್ತಿದ್ದೇವೆ ಎಂದರು.

## ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

55.'ಅಬ್ಬಿಫಾಲ್ಸ್' ಯಾವ ಜಿಲ್ಲೆಯಲ್ಲಿದೆ ?

[illegible] :[illegible]

## ಮೆಣಸಿನಕಾಯಿ ಬಜ್ಜಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಕಡಲೆ ಹಿಟ್ಟು- 1ಕಪ್, ಅಕ್ಕಿ ಹಿಟ್ಟು- ಸ್ವಲ್ಪ, ಕಾರ್ನ್ ಫ್ಲೋರ್ - ಸ್ವಲ್ಪ, ಚಿರೋಟಿ ರವೆ -ಸ್ವಲ್ಪ, ಅಡುಗೆ ಸೋಡಾ- ಸ್ವಲ್ಪ, ಜೀರಿಗೆ- ಸ್ವಲ್ಪ, ಅರಿಶಿಣ- ಸ್ವಲ್ಪ, ರುಚಿಗೆ ತಕ್ಕಷ್ಟು ಉಪ್ಪು, ಅಡುಗೆ ಎಣ್ಣೆ- ಸ್ವಲ್ಪ, ಮೆಣಸಿನ ಕಾಯಿ- 5 ರಿಂದ 6

### ಮಾಡುವ ವಿಧಾನ

ಮೊದಲಿಗೆ ಕಡಲೆ ಹಿಟ್ಟು, ಅಕ್ಕಿ ಹಿಟ್ಟು, ಕಾರ್ನ್ ಫ್ಲೋರ್, ಚಿರೋಟಿ ರವೆ ,ಅಡುಗೆ ಸೋಡಾ, ಉಪ್ಪು, ಜೀರಿಗೆ, ಬಣ್ಣಕ್ಕೆ ಅರಿಶಿಣ ಹಾಕಿ ಸ್ವಲ್ಪ ಗಟ್ಟಿಯಾದ ಹದಕ್ಕೆ ಮಿಶ್ರಣವನ್ನು ಸಿದ್ಧ ಪಡಿಸಿಕೊಳ್ಳಬೇಕು. ಬಾಣಲೆಯಲ್ಲಿ ಅಡುಗೆ ಎಣ್ಣೆಯನ್ನು ಹಾಕಿ ಬಿಸಿಯಾಗಲು ಬಿಡಿ. ಹಸಿ ಮೆಣಸಿನ ಕಾಯಿಯನ್ನು ಹಿಟ್ಟಿನಲ್ಲಿ ಅದ್ದಿ ಬಿಸಿ ಎಣ್ಣೆಯಲ್ಲಿ ಹಾಕಿ ಕಂದು ಬಣ್ಣಕ್ಕೆ ಬೇಯಿಸಿದರೆ ರುಚಿಯಾದ ಬಜ್ಜಿ ಸವಿಯಲು ಸಿದ್ಧವಾಗುತ್ತದೆ.

# ದಿಢೀರ್ ಶಾಕ್ ಕೊಟ್ಟ ಪವರ್‌ಸ್ಟಾರ್...



ತೆಲುಗು ಚಿತ್ರರಂಗದ ಪವರ್‌ಸ್ಟಾರ್ ಪವನ್ ಕಲ್ಯಾಣ್ ಪ್ರಸ್ತುತ ಆಂಧ್ರ ಪ್ರದೇಶದ ಉಪಮುಖ್ಯಮಂತ್ರಿಯಾಗಿಯೂ ಸಾಕಷ್ಟು ಚರ್ಚೆಯಲ್ಲಿದ್ದಾರೆ. ಪಾಲಿಟಿಕ್ಸ್ ಪ್ರವೇಶಿಸಿದಾಗ ರಾಜಕೀಯ ಹಾಗೂ ಸಿನಿಮಾ ಎರಡನ್ನೂ ಬ್ಯಾಲೆನ್ಸ್ ಮಾಡಿಕೊಂಡು ಹೋಗುವುದಾಗಿ ಭರವಸೆ ನೀಡಿದ್ದ ಪವರ್‌ಸ್ಟಾರ್ ಗೆ ಸದ್ಯ ಅದು ಸಾಧ್ಯವಾಗುತ್ತಿಲ್ಲವೇನೋ ಎಂಬ ಅನುಮಾನಗಳು ವ್ಯಕ್ತವಾಗುತ್ತಿದ್ದು, ಅವರ ಅಭಿಮಾನಿಗಳಿಗೊಂದು ಬೇಸರದ ಸುದ್ದಿಯಿದೆ.

ಪವರ್‌ಸ್ಟಾರ್ ಪವನ್ ಕಲ್ಯಾಣ್ ಅವರ ಭಾರೀ ನಿರೀಕ್ಷಿತ ಚಿತ್ರ, ಹರಿ ಹರ ವೀರ ಮಲ್ಲು ಸೆಟ್ಟೇರಿ ಬಹಳ ತಿಂಗಳುಗಳೇ ಕಳೆದಿವೆ. ಈ ತಿಂಗಳಾಂತ್ಯಕ್ಕೆ ಸಿನಿಮಾ ರಿಲೀಸ್ ಆಗುವ ನಿರೀಕ್ಷೆ ಇತ್ತು. ರಾಜ್ಯದ ಡಿಸಿಎಂ ಆಗಿ ಸಾಕಷ್ಟು ಜನಪರ ಕೆಲಸಗಳನ್ನು ಮಾಡಿರುವ ಪವನ್ ಕಲ್ಯಾಣ್ ಹೀರೋ ಆಗಿ ನಟಿಸಿರುವ ಈ ಚಿತ್ರವನ್ನು ಕಣ್ತುಂಬಿಕೊಳ್ಳಲು ಅಭಿಮಾನಿಗಳು ಕಾತುರರಾಗಿ ಕಾಯುತ್ತಿದ್ದರು. ಇದೀಗ ಸಿನಿಮಾ ನಿಗದಿಯಂತೆ ಮಾರ್ಚ್ 28ರಂದು ತೆರೆಕಾಣುತ್ತಿಲ್ಲ. ಸಿನಿಮಾ ರಿಲೀಸ್ ಡೇಟ್ ಅನ್ನು ಮುಂದೂಡಲಾಗಿದೆ ಎಂದು ಚಿತ್ರತಂಡದ ಮೂಲಗಳು ತಿಳಿಸಿದ್ದು ಪವರ್‌ಸ್ಟಾರ್ ಅಭಿಮಾನಿಗಳಲ್ಲಿ ಬೇಸರ ಮೂಡಿದೆ.

ಪ್ರಸ್ತುತ, ರಾಜಕೀಯದಲ್ಲಿ ನಿರತರಾಗಿರುವ ಪವನ್ ಕಲ್ಯಾಣ್ ಅಂದುಕೊಂಡಂತೆ ನಿಗದಿತ ಸಮಯದೊಳಗೆ ಸಿನಿಮಾ ಶೂಟ್ ಮುಗಿಸಲು ಸಾಧ್ಯವಾಗದ ಹಿನ್ನಲೆಯಲ್ಲಿ ಹರಿ ಹರ ವೀರ ಮಲ್ಲು ಸಿನಿಮಾ ರಿಲೀಸ್ ಡೇಟ್ ಮುಂದೂಡಲ್ಪಟ್ಟಿದೆ.



ವರ್ಷಗಳಿಂದ ಪವನ್ ಕಲ್ಯಾಣ್ ಅವರನ್ನು ಮತ್ತೆ ಹೀರೋ ಆಗಿ ತೆರೆಯ ಮೇಲೆ ಕಾಣಲು ಕಾತುರರಾಗಿದ್ದೇವೆ. ಸದ್ಯ 'ಹರಿ ಹರ ವೀರ ಮಲ್ಲು' ಸಿನಿಮಾ ಬಿಡುಗಡೆ ವಿಳಂಬವಾಗುತ್ತಿರುವ ಸುದ್ದಿಯಿಂದ ಬೇಸರವಾಗಿದೆ ಎಂದು ನೆಚ್ಚಿನ ನಟನ ಬಗ್ಗೆ ಅಭಿಮಾನಿಗಳು ಮನದಾಳದ ಮಾತುಗಳನ್ನು ಹಂಚಿಕೊಂಡಿದ್ದಾರೆ.

ವಾಸ್ತವವಾಗಿ, ಪವರ್‌ಸ್ಟಾರ್ ಪವನ್ ಕಲ್ಯಾಣ್ ಅವರ ಕೊನೆಯದಾಗಿ ರಿಲೀಸ್ ಆದ ಚಿತ್ರ, 'ಭೀಮ್ಲಾ ನಾಯಕ್'. 2022ರಲ್ಲಿ ತೆರೆಕಂಡ ಈ ಸಿನಿಮಾ ಅಷ್ಟು ಹಿಟ್ ಆಗಿಲ್ಲ.

## ಮೆಂತ್ಯಸೊಪ್ಪಿನ ಪ್ರಯೋಜನ

### ಹೆಲ್ತ್ ಟಿಪ್ಸ್



ಮೆಂತ್ಯಸೊಪ್ಪು ಕಡಿಮೆ ಕ್ಯಾಲೊರಿ ಹೊಂದಿದ್ದು ಹೆಚ್ಚಿನ ಪ್ರಮಾಣದಲ್ಲಿ ಕರಗುವ ನಾರು ಹೊಂದಿದೆ. ಇದು ಪಥ್ಯ ಮಾಡುವ ಅಥವಾ ಕ್ಯಾಲೊರಿ ಸೇವನೆಯ ಬಗ್ಗೆ ಹೆಚ್ಚು ಗಮನ ನೀಡುವ ವ್ಯಕ್ತಿಗಳಿಗೆ ಅತ್ಯಂತ ಪ್ರಯೋಜನಕಾರಿಯಾಗಿದ್ದು, ಹೆಚ್ಚಿನ ಸಮಯದವರೆಗೆ ಹೊಟ್ಟೆ ತುಂಬಿದ ಭಾವನೆ ನೀಡುವುದರಿಂದ ಅನಗತ್ಯ ಆಹಾರ ಸೇವನೆಯನ್ನು ಕಡಿಮೆ ಮಾಡಲು ನೆರವಾಗುತ್ತದೆ. ಹೊಟ್ಟೆ ತುಂಬಿದ ಭಾವನೆಯೊಂದಿಗೆ, ನೀವು ಎದೆಯುರಿಯ ಲಕ್ಷಣಗಳನ್ನು ಹೊಂದಿದ್ದರೆ, ಅದನ್ನೂ ಸಹ ಇದು ಕಡಿಮೆ ಮಾಡುತ್ತದೆ. ಮೆಂತ್ಯಸೊಪ್ಪು ಆಂಟಾಸಿಡ್ ಔಷಧಿಯ ಪರಿಣಾಮಕ್ಕೆ ಸಮನಾಗಿದೆ. ಒಟ್ಟಾರೆಯಾಗಿ, ಮೆಂತ್ಯ ನೀವು ಆರೋಗ್ಯದಿಂದಿರಲು ಮತ್ತು ಉತ್ತಮ ಜೀರ್ಣಕ್ರಿಯೆ ಹೊಂದಲು ನೆರವಾಗುತ್ತದೆ.

ನಮ್ಮ ಶರೀರ ಆಂಟಿಆಕ್ಸಿಡೆಂಟ್ ನಿಂದ ಸಮೃದ್ಧವಾದ ಆಹಾರ ಪದಾರ್ಥವನ್ನು ಹೆಚ್ಚು ಬಯಸುತ್ತದೆ! ಮೆಂತ್ಯಸೊಪ್ಪಿನಲ್ಲಿ ವಿಟಮಿನ್ ಸಿ, ವಿಟಮಿನ್ ಎ, ಮತ್ತು ಬೀಟಾ ಕೆರೋಟಿನ್ ಅತ್ಯಧಿಕವಾಗಿದೆ. ಇವುಗಳ ಸಂಯೋಜನೆ ನಿಮ್ಮ ಶರೀರದಲ್ಲಿ ರೋಗನಿರೋಧಕ ವ್ಯವಸ್ಥೆಯನ್ನು ನಿರ್ಮಿಸುವ ಮೂಲಕ ಸಾಮಾನ್ಯ ಖಾಯಿಲೆಗಳ ವಿರುದ್ಧ ಹೋರಾಡಲು ನೆರವಾಗುತ್ತದೆ. ಜೊತೆಗೆ, ಆಂಟಿಆಕ್ಸಿಡೆಂಟ್ ಗುಣಲಕ್ಷಣಗಳು ನಿಮ್ಮ ಚರ್ಮಕ್ಕೆ ಹೊಳಪು ಮತ್ತು ಯೌವ್ವನ ನೀಡುತ್ತದೆ.

ಈ ಎಲೆಗಳು ಚಯಾಪಚಯ ಕ್ರಿಯೆಗೆ ನೆರವಾಗುತ್ತದೆ. ಉದಾಹರಣೆಗೆ, ಮಧುಮೇಹ. ಒಂದು ಅಧ್ಯಯನದ ಪ್ರಕಾರ, ಟೈಪ್ 1 ಮತ್ತು ಟೈಪ್ 2 ಮಧುಮೇಹದಿಂದ ಬಳಲುವ ವ್ಯಕ್ತಿಗಳು ಮೆಂತ್ಯಸೊಪ್ಪು ಸೇವಿಸುವುದರಿಂದ ಕೊಲೆಸ್ಟ್ರಾಲ್ ಮಟ್ಟ ಕಡಿಮೆಯಾಗುತ್ತದೆ. ಮಧುಮೇಹವಿಲ್ಲದ ವ್ಯಕ್ತಿಗಳೂ ಇದನ್ನು ಸೇವಿಸುವುದರಿಂದ, ಮೆಂತ್ಯಸೊಪ್ಪು ಸೇವಿಸಿದ ನಂತರ ರಕ್ತದಲ್ಲಿ ಸಕ್ಕರೆಯ ಮಟ್ಟ ಕಡಿಮೆಯಾದ ಅನುಭವ ಉಂಟಾಗುತ್ತದೆ. ನಿಮ್ಮ ಶರೀರದ ಕಾರ್ಬೋಹೈಡ್ರೇಟ್ ತಾಳಿಕೆ ಹೆಚ್ಚಿಸುವ ಮತ್ತು ಇನ್ಸುಲಿನ್ ಕಾರ್ಯವಿಧಾನ ಸುಧಾರಿಸುವ ಮೂಲಕ ನಿಮ್ಮ ಶರೀರಕ್ಕೆ ಇದು ನೆರವಾಗುತ್ತದೆ.

ಮುಖದ ಮೇಲೆ ಮೊಡವೆಗಳು ಉಂಟಾದ ನಂತರ ಅದರ ಕಲೆ ಮುಖದ ಮೇಲೆ ಉಳಿದಾಗ ನಿಮಗೆ ಅಸಹನೀಯವೆನಿಸುತ್ತದೆ ಅಲ್ಲವೇ? ಆದರೆ ಈ ಸಮಸ್ಯೆಯಿಂದ ಹೊರಬರಲು ಮೆಂತ್ಯಸೊಪ್ಪು ನೆರವಾಗುತ್ತದೆ. ಮೆಂತ್ಯಸೊಪ್ಪು ಮುಖದ ಮೇಲಿನ ಕಲೆ ಮತ್ತು ಕಠಿಣ ಕಲೆಗಳನ್ನು ಕಡಿಮೆ ಮಾಡುತ್ತದೆ.

# ಇಂಡಿಯಾ ಕಾರ್ಪೊರೇಟ್ T20 ಬ್ಯಾಷ್ ಜರ್ಸಿ ಮತ್ತು ಲೋಗೋ ಬಿಡುಗಡೆ




ಭಾರತ ಕಾರ್ಪೊರೇಟ್ ಟಿ20 ಬ್ಯಾಷ್ , ಉನ್ನತ ಪ್ರದರ್ಶನ ನೀಡುವ ಯುವ ಕಾರ್ಪೊರೇಟ್ ಆಟಗಾರರಿಗಾಗಿ ಮುಂದಿನ ಹಂತದ ವಾಣಿಜ್ಯ ಟಿ20 ವಾರ್ಷಿಕ ಕ್ರಿಕೆಟ್ ಲೀಗ್ ಅನ್ನು ದೆಹಲಿಯಲ್ಲಿ ಅಧಿಕೃತವಾಗಿ ಪ್ರಾರಂಭಿಸಲಾಯಿತು. ದೇಶಾದ್ಯಂತದ ಕಾರ್ಪೊರೇಟ್ ಮತ್ತು ಖಾಸಗಿ ವಲಯದ ಉದ್ಯೋಗಿಗಳನ್ನು ಒಟ್ಟುಗೂಡಿಸಲು ನೌ ಎಮಿನೆನ್ಸ್ ನೇತ್ರಸಪ್ ಇಂಡಿಯಾದಿಂದ ಪರಿಕಲ್ಪನೆಗೊಂಡ ಲೀಗ್ ತನ್ನ ಉದ್ಘಾಟನಾ ಋತುವಿಗೆ ಸಜ್ಜಾಗುತ್ತಿರುವಾಗ ಅದರ ಜರ್ಸಿ ಮತ್ತು ಲೋಗೋವನ್ನು ಅನಾವರಣಗೊಳಿಸಿತು., ICBT20 Bash ವೃತ್ತಿಪರ ಕ್ರೀಡಾ ವೇದಿಕೆಯನ್ನು ನೀಡುತ್ತದೆ. ಅದು ಕೆಲಸ-ಜೀವನದ ಸಮತೋಲನ, ಆರೋಗ್ಯ ಮತ್ತು ಫಿಟ್ನೆಸ್ನ ಪ್ರಾಮುಖ್ಯತೆಯನ್ನು ಒತ್ತಿಹೇಳುತ್ತದೆ. ICBT20ಬ್ರ್ಯಾಂಡ್ ಅಂಬಾಸಿಡರ್ ಹರ್ಷಲ್ ಗಿಬ್ಸ್, ದಕ್ಷಿಣ ಆಫ್ರಿಕಾದ ಮಾಜಿ ಕ್ರಿಕೆಟಿಗ, ನಟ ಸೋನು ಸೂದ್ ಮತ್ತು ಒಲಿಂಪಿಕ್ ಕೌನ್ಸಿಲ್ ಆಫ್ ಏಷ್ಯಾ ಅಧ್ಯಕ್ಷ, ಇಂಟರ್ನ್ಯಾಷನಲ್ ಕಬಡ್ಡಿ ಫೆಡರೇಶನ್ ಅಧ್ಯಕ್ಷ ಇ-ಸ್ಪೋರ್ಟ್ಸ್, ಭಾರತದ ನಿರ್ದೇಶಕ ಜನರಲ್ ವಿನೋದ್ ಕುಮಾರ್ ತಿವಾರಿ ಅವರ ಉಪಸ್ಥಿತಿಯಲ್ಲಿ ಅನಾವರಣವು ನಡೆಯಿತು.

ಕಾರ್ಯಕ್ರಮದಲ್ಲಿ ಶ್ರೀಲಂಕಾದ ಮಾಜಿ ಕ್ರಿಕೆಟಿಗ ತಿಲಕರತ್ನೆ ದಿಲ್ಶಾನ್, ಮಾಜಿ ನ್ಯೂಜಿಲೆಂಡ್ ಕ್ರಿಕೆಟಿಗ, ಜೆಸ್ಸಿ ರೈಡರ್, ದಕ್ಷಿಣ ಆಫ್ರಿಕಾದ ಮಾಜಿ ಕ್ರಿಕೆಟಿಗ, ಧಮ್ಮಿಕಾ ಪ್ರಸಾದ್, ಶ್ರೀಲಂಕಾದ ಮಾಜಿ ಕ್ರಿಕೆಟಿಗ, ಧಮ್ಮಿಕಾ ಪ್ರಸಾದ್, ಶ್ರೀಲಂಕಾದ ಮಾಜಿ ಕ್ರಿಕೆಟಿಗ, ಜೆರೋಮ್ ಜಿನಿಯಾ ಸೇರಿದಂತೆ ಐಸಿಬಿಟಿ 20 ಬ್ಯಾಷ್ ಲೀಗ್ನ ಪ್ರಮುಖ ಮಾರ್ಗದರ್ಶಕರು ಸೇರಿದಂತೆ ಇತರ ಪ್ರಮುಖ ವ್ಯಕ್ತಿಗಳು ಉಪಸ್ಥಿತರಿದ್ದರು. ಕ್ರಿಕೆಟಿಗ ಮತ್ತು ಕೋಚ್, ಸುಖ್ವಿಂದರ್ ಸಿಂಗ್, ಮಾಜಿ ಭಾರತ ಎ ಮತ್ತು ರಣಜಿ ಟ್ರೋಫಿ ಆಟಗಾರ, ನೀಲೇಶ್ ಮಿತ್ತಲ್, ಮಾಜಿ ರಣಜಿ ಟ್ರೋಫಿ ಆಟಗಾರ ಮತ್ತು ಕ್ರೀಡಾ ವ್ಯಾಪಾರ ಉದ್ಯಮಿ ಮತ್ತು ರಾಜೀವ್ ಕುಮಾರ್, ನಿರ್ದೇಶಕ ಮತ್ತು ಸಿಇಒ, ಎಮಿನೆನ್ಸ್ ನೇತ್ರಸಪ್ ಇಂಡಿಯಾ ಒಳಗೊಂಡಂತೆ ICBT20 ಬ್ಯಾಷ್ನ ಅನುಭವಿ ಮಾರ್ಗದರ್ಶಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಈ ಲೀಗ್ ಆರು ಪ್ರಬಲ ತಂಡಗಳನ್ನು ಒಳಗೊಂಡಿರುತ್ತದೆ: ಕ್ರಿಕೆಟ್ ಪ್ರಪಂಚದ ಉನ್ನತ ಮಾರ್ಗದರ್ಶಕರನ್ನು ಹೊಂದಿರುವ ಬೆಂಗಳೂರು ಅವೆಂಜರ್ಸ್, ಡೆಲ್ಲಿ ಕಿಂಗ್ಸ್, ಗುರುಗ್ರಾಮ್ ಸ್ಪಾರ್ಟನ್ಸ್, ಗುಜರಾತ್ ಡೈಮಂಡ್ಸ್, ಹೈದರಾಬಾದ್ ರಾಯಲ್ಸ್ ಮತ್ತು ಮುಂಬೈ ಚಾಂಪಿಯನ್ಸ್,

ಉದ್ಘಾಟನಾ ಋತುವಿನಲ್ಲಿ 6 ಫ್ರಾಂಚೈಸಿ ತಂಡಗಳನ್ನು ಒಳಗೊಂಡಿದ್ದು, ದೆಹಲಿಯ ಯಮುನಾ ಸ್ಪೋರ್ಟ್ಸ್ ಕಾಂಪ್ಲೆಕ್ಸ್‌ನಲ್ಲಿ 8 ದಿನಗಳ ಕಾಲ 18 ರೋಚಕ ಪಂದ್ಯಗಳು ನಡೆಯಲಿವೆ. ಪಂದ್ಯಾವಳಿಯ ವಿಜೇತರು ಗಮನಾರ್ಹ ಆರ್ಥಿಕ ಬಹುಮಾನಗಳನ್ನು ಪಡೆಯುತ್ತಾರೆ, ಚಾಂಪಿಯನ್ನಗಳು INR 25 ಲಕ್ಷಗಳನ್ನು ಗಳಿಸುತ್ತಾರೆ, ರನ್ನರ್-ಅಪ್ಗಳು INR15 ಲಕ್ಷಗಳನ್ನು ಪಡೆಯುತ್ತಾರೆ, ಪ್ರತಿ 'ಮ್ಯಾನ್ ಆಫ್ ದಿ ಮ್ಯಾಚ್' INR 25,000, 'ಮ್ಯಾನ್ ಆಫ್ ದಿ ಸೀರೀಸ್' INR 2 ಲಕ್ಷಗಳನ್ನು ಸ್ವೀಕರಿಸುತ್ತಾರೆ ಮತ್ತು ಪ್ರತಿ ವಿಭಾಗದಲ್ಲಿ 1 ಲಕ್ಷ ರೂ. ಲೀಗ್ನಲ್ಲಿ ಭಾರತದಾದ್ಯಂತ ಉನ್ನತ ಮಟ್ಟದ ಕಾರ್ಪೊರೇಟ್ ಆಟಗಾರರು ಸ್ಪರ್ಧಿಸುತ್ತಾರೆ. ಹೊಸ ICBT20 ಬ್ಯಾಷ್ ಲೋಗೋ ಲೀಗ್ನ ಕ್ರಿಯಾತ್ಮಕ ಶಕ್ತಿ ಮತ್ತು ವೃತ್ತಿಪರ ಮನೋಭಾವವನ್ನು ಸೆರೆಹಿಡಿಯುತ್ತದೆ, ಇದು ಕ್ರಿಕೆಟ್ ಮತ್ತು ಕಾರ್ಪೊರೇಟ್ ಸಂಸ್ಕೃತಿಯ ಏಕೀಕರಣವನ್ನು ಸಂಕೇತಿಸುತ್ತದೆ. ರೋಮಾಂಚಕ ವಿನ್ಯಾಸವು ಟಿ20 ಕ್ರಿಕೆಟ್ನ ವೇಗದ-ಗತಿಯ, ಹೆಚ್ಚಿನ ಶಕ್ತಿಯ ಸ್ವರೂಪವನ್ನು ಪ್ರತಿನಿಧಿಸುತ್ತದೆ, ಹಾಗೆಯೇ ಬಲವಾದ ಕಾರ್ಪೊರೇಟ್ ಕ್ರೀಡಾ ಸಮುದಾಯವನ್ನು ಬೆಳೆಸುವ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಎಲ್ಲಾ ಲೀಗ್ ಈವೆಂಟ್ಗಳು, ಮಾಧ್ಯಮ ಪ್ರಚಾರಗಳು ಮತ್ತು ಸರಕುಗಳಾದ್ಯಂತ ಲೋಗೋವನ್ನು ಪ್ರಮುಖವಾಗಿ ಪ್ರದರ್ಶಿಸಲಾಗುತ್ತದೆ. ಲಾಂಛನದೊಂದಿಗೆ, ಅಧಿಕೃತ ಜರ್ಸಿಯು ಕ್ರೀಡೆ ಮತ್ತು ವ್ಯಾಪಾರದ ಛೇದಕವನ್ನು ಕ್ರಾಂತಿಗೊಳಿಸಲು ICBT20 ಬ್ಯಾಷ್ನ ದಿಟ್ಟ ಮಹತ್ವಾಕಾಂಕ್ಷೆಯನ್ನು ಪ್ರತಿಬಿಂಬಿಸುತ್ತದೆ. ಜೆರ್ಸಿ ವಿನ್ಯಾಸವು ಆಧುನಿಕ, ನಯವಾದ ಅಂಶಗಳನ್ನು ರೋಮಾಂಚಕ ವರ್ಣಗಳೊಂದಿಗೆ ಸಂಯೋಜಿಸುತ್ತದೆ. ಈವೆಂಟ್ನಲ್ಲಿ ಮಾತನಾಡಿದ ಐಸಿಬಿಟಿ 20 ಬ್ಯಾಷ್, ಬ್ರ್ಯಾಂಡ್ ಅಂಬಾಸಿಡರ್, ಹರ್ಷಲ್ ಗಿಬ್ಸ್, ''ಕಾರ್ಪೊರೇಟ್ ವೃತ್ತಿಪರರಿಗೆ ಅವರು ಇಷ್ಟಪಡುವ ಕ್ರೀಡೆಯನ್ನು ಆಡಲು ವೇದಿಕೆಯನ್ನು ಒದಗಿಸುವುದಲ್ಲದೆ ಆರೋಗ್ಯಕರ ಜೀವನಶೈಲಿಯನ್ನು ಕಾಪಾಡಿಕೊಳ್ಳಲು ಪ್ರೇರೇಪಿಸುವ ಈ ಹೊಸ ಉಪಕ್ರಮದ ಭಾಗವಾಗಲು ನಾನು ಉತ್ಸುಕನಾಗಿದ್ದೇನೆ. ಲೋಗೋ ಮತ್ತು ಜರ್ಸಿಯ ಬಿಡುಗಡೆಯು ಏನಾಗಲಿದೆ ಎಂಬುದಕ್ಕೆ ಟೋನ್ ಅನ್ನು ಹೊಂದಿಸುತ್ತದೆ ಮತ್ತು ಇದು ಭಾರತೀಯ ವಾಣಿಜ್ಯ ಕಾರ್ಪೊರೇಟ್ ಕ್ರಿಕೆಟ್ಗೆ ಆಟದ ಬದಲಾವಣೆಯಾಗಲಿದೆ ಎಂದು ನಾನು ನಂಬುತ್ತೇನೆ

ಸಮಾರಂಭದಲ್ಲಿ ಮಾತನಾಡಿದ ಎಮಿನೆನ್ಸ್ ನೇತ್ರಸಪ್ ಇಂಡಿಯಾದ ನಿರ್ದೇಶಕ ಮತ್ತು ಸಿಇಒ ಶ್ರೀ ರಾಜೀವ್ ಕುಮಾರ್, ''ICBT20 ಬ್ಯಾಷ್ ದೈಹಿಕ ಯೋಗಕ್ಷೇಮವನ್ನು ಮಾತ್ರವಲ್ಲದೆ ಮಾನಸಿಕ ಸ್ಥಿತಿಸ್ಥಾಪಕತ್ವ ಮತ್ತು ಕಾರ್ಪೊರೇಟ್ ಕ್ರಿಕೆಟ್ ಆಟಗಾರರ ವೃತ್ತಿಪರ ಬೆಳವಣಿಗೆಯನ್ನು ಉತ್ತೇಜಿಸಲು ಕ್ರೀಡೆಗಳ ಪರಿವರ್ತಕ ಶಕ್ತಿಯನ್ನು ಅನಾವರಣಗೊಳಿಸುವ ಏಕೈಕ ಉದ್ದೇಶದಿಂದ ಪರಿಕಲ್ಪನೆಯಾಗಿದೆ. ICBT 20 ಅವರಿಗೆ ತಮ್ಮ ಭಾವೋದ್ರಿಕ್ತ ಕ್ರೀಡೆಗಳನ್ನು ಆಡಲು ಮುಂದಿನ ಹಂತದ ಜಾಗತಿಕ ವೇದಿಕೆಗಳನ್ನು ನೀಡುತ್ತದೆ ಮತ್ತು ಕ್ರೀಡಾ ಪ್ರೋತ್ಸಾಹಕವಾಗಿ ಲಾಭದಾಯಕ ಪ್ರಯೋಜನಗಳನ್ನು ಸಹ ಆನಂದಿಸುತ್ತದೆ. ತಮ್ಮ ಉದ್ಯೋಗಿಗಳನ್ನು ಲೀಗ್ಗೆ ಸೇರಲು ಮತ್ತು ಈ ವಿಶಿಷ್ಟ ಉಪಕ್ರಮದ ಭಾಗವಾಗಲು ಪ್ರೇರೇಪಿಸುವಲ್ಲಿ ಹೆಚ್ಚಿನ ಕಾರ್ಪೊರೇಟ್ಗಳನ್ನು ನಾವು ಪ್ರೋತ್ಸಾಹಿಸುತ್ತೇವೆ.

## ಆಕರ್ಷಕ ಕಣ್ಣಿನ ರೆಪ್ಪೆ ಪಡೆಯಲು ನೈಸರ್ಗಿಕ ವಿಧಾನ

### ಬ್ಯೂಟಿ ಟಿಪ್ಸ್



ಕಣ್ಣಿಗೆ ಉದ್ದದ ರೆಪ್ಪೆಗಳಿದ್ದರೆ ಕಣ್ಣಿನ ಅಂದ ಹೆಚ್ಚುವುದು. ಕಣ್ಣು ರೆಪ್ಪೆ ತುಂಬಾ ಕಡಿಮೆ ಇದ್ದು ತ್ವಚೆ ಎಷ್ಟೇ ಸುಂದರವಾಗಿ ಇದ್ದರೂ ಆಕರ್ಷಕವಾಗಿ ಕಾಣುವುದಿಲ್ಲ. ಕೃತಕ ಕಣ್ಣು ರೆಪ್ಪೆಗಳು ದೊರೆಯುವುದಾದರೂ ಅವುಗಳು ನೈಸರ್ಗಿಕ ಚೆಲುವನ್ನು ನೀಡುವುದು ಕಡಿಮೆ. ಸ್ವಲ್ಪ ತಾಳ್ಮೆಯಿದ್ದರೆ ಈ ಕೆಳಗಿನ ವಿಧಾನದಿಂದ ನಿಮ್ಮ ಕಣ್ಣುಗಳ ರೆಪ್ಪೆಗಳು ಸುಂದರವಾಗಿ ಬೆಳೆಯುವಂತೆ ಮಾಡಬಹುದಾಗಿದೆ.

**ಹರಳೆಣ್ಣೆ:** ದಿನಾ ರಾತ್ರಿ ಮಲುಗುವ ಮುನ್ನ ಕಣ್ಣಿನ ರೆಪ್ಪೆಗಳಿಗೆ ಹರಳೆಣ್ಣೆ ಹಚ್ಚಿದರೆ ಕಣ್ಣು ರೆಪ್ಪೆಗಳು ಸುಂದರವಾಗಿ ಬೆಳೆಯುತ್ತದೆ. ಹರಳೆಣ್ಣೆಯನ್ನು ಸ್ವಲ್ಪ ಬಿಸಿ ಮಾಡಿ ಬೇಕಾದರೂ ಹಚ್ಚಬಹುದು. ಈ ರೀತಿ ಕೆಲವು ತಿಂಗಳಿನವರೆಗೆ ಹಚ್ಚಿದರೆ ಆಕರ್ಷಕವಾದ ಕಣ್ಣಿನ ರೆಪ್ಪೆ ಪಡೆಯಬಹುದು.

**ವಿಟಮಿನ್ ಇ ಎಣ್ಣೆ:** ವಿಟಮಿನ್ ಇ ಎಣ್ಣೆ ಬಳಸುವುದರಿಂದ ಕಣ್ಣಿನ ಕೂದಲು ಆರೋಗ್ಯಕರವಾಗಿ ಬೆಳೆಯುತ್ತದೆ. ಅಲ್ಲದೆ ಇದನ್ನು ಕೂದಲಿಗೆ ಹಚ್ಚಿದರೂ ಕೂಡ ಕೂದಲು ಆರೋಗ್ಯಕರವಾಗಿ ಬೆಳೆಯುವುದು. ಇಲ್ಲದಿದ್ದರೆ ವಿಟಮಿನ್ ಇ ಮಾತ್ರೆಯನ್ನು ತೆಗೆದುಕೊಂಡು ಪುಡಿ ಮಾಡಿ ಅದನ್ನು ಎಣ್ಣೆ ಜೊತೆ ಮಿಶ್ರ ಮಾಡಿ ಆ ಎಣ್ಣೆಯನ್ನು ಕೂಡ ಬಳಸಬಹುದು. ವಿಟಮಿನ್ ಇ ಎಣ್ಣೆ ಕಣ್ಣಿಗೆ ತಂಪನ್ನು ನೀಡುತ್ತದೆ. ಅಲ್ಲದೆ ಕಣ್ಣಿನಲ್ಲಿ ತುರಿಕೆ, ಅಲರ್ಜಿ ತೊಂದರೆಗಳಿದ್ದರೆ ಅದು ಕೂಡ ನಿವಾರಣೆಯಾಗುತ್ತದೆ. ವಿಟಮಿನ್ ಇ ಮಾತ್ರೆಗಳು ಔಷಧಿ ಅಂಗಡಿಗಳಲ್ಲಿ ದೊರೆಯುತ್ತದೆ.

**ಬ್ರೆಷ್:** ತಲೆಬಾಚಿ ಕೂದಲಿನ ಆರೈಕೆ ಮಾಡುವ ರೀತಿ ಕಣ್ಣಿನ ರೆಪ್ಪೆಯನ್ನು ಕುಡ ಮೃದುವಾದ ಬ್ರೆಷ್ ನಿಂದ ಬಾಚಬೇಕು. ಈ ರೀತಿ ಮಾಡಲು ಮಸ್ಕರಾ ಬ್ರೆಷ್ ಬಳಸಬಹುದು. ನೈಸರ್ಗಿಕ ಎಣ್ಣೆಗಳನ್ನು ಕಣ್ಣು ರೆಪ್ಪೆಗಳಿಗೆ ಹಚ್ಚುವಾಗ ಈ ತರಹದ ಬ್ರೆಷ್ ಬಳಸಿ ಹಚ್ಚಿದರೆ ಉತ್ತಮವಾದ ಪ್ರಯೋಜನವನ್ನು ಕಾಣಬಹುದು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಮಿತ್ರರೊಡನೆ ವಿವಾದ, ಪರರ ಮಾತಿಗೆ ಕಿವಿ ಕೊಡಬೇಡಿ, ಅಧಿಕ ತಿರುಗಾಟ, ಬುದ್ಧಿಶಕ್ತಿ.

**ವೃಷಭ:** ಸ್ವಲ್ಪ ಪ್ರಯತ್ನ ಪಟ್ಟರೆ ಉತ್ತಮ ಫಲ, ಕುಟುಂಬ ಸೌಖ್ಯ, ಮನಶಾಂತಿ, ಸುಖ ಭೋಜನ, ವಿವಾಹ ಯೋಗ.

**ಮಿಥುನ:** ಪರಸ್ತ್ರೀಯಿಂದ ತೊಂದರೆ, ಅಧಿಕ ಕೆಲಸದಿಂದ ವಿಶ್ರಾಂತಿ, ಚೋರ ಭಯ, ಅಧಿಕ ನಷ್ಟ, ದೃಷ್ಟಿ ದೋಷ.

**ಕಟಕ:** ಕೆಲಸಕಾರ್ಯಗಳಲ್ಲಿ ಪ್ರಗತಿ, ಕೊಟ್ಟ ಹಣ ಬರದೆ ಹೋಗುವ ಸಾಧ್ಯತೆ, ಪ್ರಭಾವಿ ವ್ಯಕ್ತಿಗಳ ಭೇಟಿ.

**ಸಿಂಹ:** ಅನಾವಶ್ಯಕ ಖರ್ಚಿನಿಂದ ದೂರವಿರಿ, ಮಾತಾಪಿತರಲ್ಲಿ ಪ್ರೀತಿ ವಿಶ್ವಾಸ, ವೈರಿಗಳಿಂದ ದೂರವಿರಿ.

**ಕನ್ಯಾ:** ಉದ್ಯಮಿಗಳಿಗೆ ಯಶಸ್ಸು, ವ್ಯಾಪಾರಿಗಳಿಗೆ ಧನ ಲಾಭ, ವಿದೇಶ ಪ್ರಯಾಣ, ಯತ್ನ ಕಾರ್ಯಾನುಕೂಲ, ದಾಂಪತ್ಯದಲ್ಲಿ ಪ್ರೀತಿ.

**ತುಲಾ:** ಮಾತಿನಲ್ಲಿ ಹಿಡಿತವಿರಲಿ, ಅನಿರೀಕ್ಷಿತ ಖರ್ಚು, ಚಂಚಲ ಮನಸ್ಸು, ನೆಮ್ಮದಿ ಇಲ್ಲದ ಜೀವನ, ಅಧಿಕ ತಿರುಗಾಟ.

**ವೃಶ್ಚಿಕ:** ವೈವಾಹಿಕ ಜೀವನದಲ್ಲಿ ತೊಂದರೆ, ಗುಪ್ತಾಂಗ ರೋಗಗಳು, ಅಕಾಲ ಭೋಜನ, ಮನಸ್ಸು ಪಾಪದ ಕೆಲಸಗಳಿಗೆ ಪ್ರಚೋದಿಸುವುದು.

**ಧನಸ್ಸು:** ವ್ಯಾಪಾರ ವಹಿವಾಟು ಉತ್ತಮ, ಕಾರ್ಯಕ್ಷೇತ್ರದಲ್ಲಿ ಒತ್ತಡ, ಶತ್ರುಭಾದೆ, ಪರಸ್ಥಳವಾಸ, ತೀರ್ಥಯಾತ್ರ ದರ್ಶನ, ಮನಶಾಂತಿ.

**ಮಕರ:** ಅಧಿಕ ಕೋಪ, ಶರೀರದಲ್ಲಿ ತಳಮಳ, ಅವಾಚ್ಯ ಶಬ್ದಗಳಿಂದ ನಿಂದನೆ, ಕುಟುಂಬದಲ್ಲಿ ಅನರ್ಥ, ಮನಸ್ಸಿಗೆ ಚಿಂತೆ.

**ಕುಂಭ:** ಹಣದ ತೊಂದರೆ, ಅತಿಯಾದ ಭಯ, ಮಾತಿನಲ್ಲಿ ಹಿಡಿತವಿರಲಿ, ಕೃಷಿಕರಿಗೆ ಅಲ್ಪ ಲಾಭ, ಆರೋಗ್ಯದಲ್ಲಿ ಏರುಪೇರು.

**ಮೀನ:** ರಾಜ ಭಯ, ಮೂಗಿನ ಮೇಲೆ ಕೋಪ, ವಾಹನದಿಂದ ಕಂಟಕ, ಸ್ನೇಹಿತರಿಂದ ನೆರವು, ದಾಂಪತ್ಯದಲ್ಲಿ ಪ್ರೀತಿ.

## ರಾಷ್ಟ್ರೀಯ ಸುರಕ್ಷತಾ ದಿನ




ರಾಷ್ಟ್ರೀಯ ಸುರಕ್ಷತಾ ದಿನವು ಮಾರ್ಚ್ 4 ರಂದು ಆಚರಿಸಲಾಗುವ ಒಂದು ಮಹತ್ವದ ಘಟನೆಯಾಗಿದೆ. ಈ ದಿನವು ವ್ಯಕ್ತಿಗಳ ಯೋಗಕ್ಷೇಮ ಮತ್ತು ಅಪಘಾತಗಳ ತಡೆಗಟ್ಟುವಿಕೆಯನ್ನು ಖಚಿತಪಡಿಸುವ ಕ್ರಮಗಳನ್ನು ಆದ್ಯತೆ ನೀಡಲು ಮತ್ತು ಅಳವಡಿಸಿಕೊಳ್ಳಲು ಜ್ಞಾಪನೆಯಾಗಿ ಕಾರ್ಯನಿರ್ವಹಿಸುತ್ತದೆ. ಸಮಾಜದ ಎಲ್ಲಾ ಕ್ಷೇತ್ರಗಳಲ್ಲಿ ಸುರಕ್ಷತೆಯ ಸಂಸ್ಕೃತಿಯನ್ನು ಉತ್ತೇಜಿಸಲು ಕ್ರಮಕ್ಕೆ ಕರೆಯನ್ನು ಇದು ಒತ್ತಿಹೇಳುತ್ತದೆ.

ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯವು ಮಾರ್ಚ್ 4, 1996 ರಂದು ರಾಷ್ಟ್ರೀಯ ಸುರಕ್ಷತಾ ಮಂಡಳಿಯನ್ನು ಸ್ಥಾಪಿಸಿತು. ಇದು ಸ್ವಯಂ-ಬೆಂಬಲಿತ, ಆಡಳಿತೇತರ ಸಂಸ್ಥೆಯಾಗಿದೆ. 2000 ರಲ್ಲಿ, 1950 ರ ಬಾಂಬೆ ಪಬ್ಲಿಕ್ ಟ್ರಸ್ಟ್ ಕಾಯ್ದೆಯನ್ನು ಬಳಸಿಕೊಂಡು ರಾಷ್ಟ್ರೀಯ ಸುರಕ್ಷತಾ ಮಂಡಳಿಯನ್ನು ಸಾರ್ವಜನಿಕ ಟ್ರಸ್ಟ್ ಆಗಿ ರಚಿಸಲಾಯಿತು.

1972 ರಲ್ಲಿ, ರಾಷ್ಟ್ರೀಯ ಸುರಕ್ಷತಾ ದಿನದ ಸ್ಥಾಪನೆಯನ್ನು ಆಚರಿಸಲು ರಾಷ್ಟ್ರೀಯ ಸುರಕ್ಷತಾ ದಿನವನ್ನು ಘೋಷಿಸಲಾಯಿತು. ಸ್ಥಾಪನೆಯಾದಾಗಿನಿಂದ, ರಾಷ್ಟ್ರೀಯ ಸುರಕ್ಷತಾ ಮಂಡಳಿಯು ಮಾರ್ಚ್ 4 ರಂದು ರಾಷ್ಟ್ರೀಯ ಸುರಕ್ಷತಾ ದಿನ/ ಸುರಕ್ಷತಾ ವಾರ ಅಭಿಯಾನವನ್ನು ಮುನ್ನಡೆಸಿದೆ, ಇದು ಸಮಾಜದ ಎಲ್ಲಾ ಕ್ಷೇತ್ರಗಳಲ್ಲಿ ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಹೆಚ್ಚಿನ ಸಹಾಯ ಮಾಡಿದೆ. ಅಭಿಯಾನವು ವಿಶಾಲ, ಎಲ್ಲವನ್ನೂ ಒಳಗೊಂಡ ಮತ್ತು ಹೊಂದಿಕೊಳ್ಳುವಂತಹದ್ದಾಗಿದ್ದು, ಭಾಗವಹಿಸುವ ಸಂಸ್ಥೆಗಳು ತಮ್ಮ ಸುರಕ್ಷತಾ ಅಗತ್ಯಗಳನ್ನು ಪೂರೈಸುವ ಕಸ್ಟಮೈಸ್ ಮಾಡಿದ ಚಟುವಟಿಕೆಗಳನ್ನು ರಚಿಸಲು ಪ್ರೋತ್ಸಾಹಿಸುತ್ತದೆ.

ಮತ್ತೊಂದು ರಾಷ್ಟ್ರೀಯ ಸುರಕ್ಷತಾ ದಿನವನ್ನು ಆಚರಿಸುತ್ತಿರುವ ಈ ಸಂದರ್ಭದಲ್ಲಿ, ನಮಗಾಗಿ ಮತ್ತು ನಮ್ಮ ಸುತ್ತಮುತ್ತಲಿನವರಿಗೆ ಸುರಕ್ಷಿತ ಮತ್ತು ಆರೋಗ್ಯಕರ ವಾತಾವರಣವನ್ನು ಸೃಷ್ಟಿಸುವ ನಮ್ಮ ಬದ್ಧತೆಯನ್ನು ಪುನರುಚ್ಚರಿಸೋಣ. ಸುರಕ್ಷತೆಯು ಕೇವಲ ನಿಯಮಗಳು ಮತ್ತು ನಿಬಂಧನೆಗಳ ಗುಂಪಲ್ಲ; ಇದು ನಮ್ಮ ನಿರಂತರ ಜಾಗರೂಕತೆ ಮತ್ತು ಪೂರ್ವಭಾವಿ ಪ್ರಯತ್ನಗಳನ್ನು ಬೇಡುವ ಸಾಮೂಹಿಕ ಜವಾಬ್ದಾರಿಯಾಗಿದೆ.

# ಭಾರತದ ಮೊದಲ ಹಸಿರು ಹೈಡ್ರೋಜನ್ ಟ್ರಕ್ ಪ್ರಾಯೋಗಿಕ ಸಂಚಾರಕ್ಕೆ ಜೋಶಿ, ಗಡ್ಕರಿ ಚಾಲನೆ



**ನವದೆಹಲಿ:** ಭಾರತ 2070ರ ವೇಳೆಗೆ ನಿವ್ವಳ-ಶೂನ್ಯ ಇಂಗಾಲ ಹೊರಸೂಸುವಿಕೆ ಗುರಿಯತ್ತ ಹೆಜ್ಜೆ ಹಾಕಿದ್ದು, ದೇಶದ ಮೊದಲ ಹೈಡ್ರೋಜನ್ ಚಾಲಿತ ವಾಹನದ ಪ್ರಾಯೋಗಿಕ ಸಂಚಾರಕ್ಕೆ ಚಾಲನೆ ಸಿಕ್ಕಿದೆ. ಟಾಟಾ ಮೋಟಾರ್ಸ್ ಬಿಡುಗಡೆ ಮಾಡಿದ ಹೈಡ್ರೋಜನ್ ಚಾಲಿತ ಹೆವಿ-ಡ್ಯೂಟಿ ಟ್ರಕ್ಗಳ ಮೊದಲ ಪ್ರಾಯೋಗಿಕ ಸಂಚಾರಕ್ಕೆ ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಮತ್ತು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ನವದೆಹಲಿಯಲ್ಲಿ ಇಂದು ಹಸಿರು ನಿಶಾನೆ ತೋರಿದರು.

ಈ ವೇಳೆ ಸಚಿವ ಪ್ರಲ್ಹಾದ್ ಜೋಶಿ ಮಾತನಾಡಿ, ಎರಡು ವರ್ಷಗಳ ಕಾಲ 16 ಸುಧಾರಿತ ಹೈಡ್ರೋಜನ್ ವಾಹನಗಳ ಪ್ರಾಯೋಗಿಕ ಸಂಚಾರ ನಡೆಸಲಾಗುವುದು. H2 -ICE ಮತ್ತು ಇಂಧನ ಕೋಶ H 2 -FCEVತಂತ್ರಜ್ಞಾನ ಹೊಂದಿರುವ ಈ ಟ್ರಕ್ಗಳು ಮುಂಬೈ, ಪುಣೆ, ದೆಹಲಿ-NCR, ಸೂರತ್, ವಡೋದರಾ, ಜಮ್ಶೆಡ್ಪುರ ಮತ್ತು ಕಳಿಂಗನಗರ ಸುತ್ತಮುತ್ತಲಿನ ಪ್ರದೇಶಗಳು ಸೇರಿದಂತೆ ಭಾರತದ ಪ್ರಮುಖ ಸರಕು ಸಾಗಣೆ ಮಾರ್ಗಗಳಲ್ಲಿ ಪರೀಕ್ಷಾರ್ಥ ಸಂಚಾರ ನಡೆಸಲಿವೆ ಎಂದು ಹೇಳಿದರು.

3 ಹೈಡ್ರೋಜನ್ ಚಾಲಿತ ಹೆವಿ-ಡ್ಯೂಟಿ ಟ್ರಕ್ಗಳ ಮೊದಲ ಬ್ಯಾಚ್ ಫರಿದಾಬಾದ್-ದೆಹಲಿ NCR ಮತ್ತು ಅಹಮದಾಬಾದ್-ಸೂರತ್ -ವಡೋದರಾ ಮಾರ್ಗಗಳಲ್ಲಿ ಕಾರ್ಯನಿರ್ವಹಿಸುತ್ತದೆ. ಇದಕ್ಕಾಗಿ ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್ ಫರಿದಾಬಾದ್, ವಡೋದರಾ, ಪುಣೆ ಮತ್ತು ಬಾಲಸೋರ್ನಲ್ಲಿ ಹೈಡ್ರೋಜನ್ ಮರುಪೂರಣ ಕೇಂದ್ರಗಳನ್ನು ಸ್ಥಾಪಿಸುತ್ತಿದೆ ಎಂದು ತಿಳಿಸಿದರು.

# ಉಕ್ರೇನ್‌ಗೆ ಅಮೆರಿಕದ ಮಿಲಿಟರಿ ನೆರವು ತಾತ್ಕಾಲಿಕ ಸ್ಥಗಿತ

**ವಾಷಿಂಗ್ಟನ್:** ಉಕ್ರೇನ್ಗೆ ಅಮೆರಿಕದಿಂದ ನೀಡಲಾಗುತ್ತಿದ್ದ ಮಿಲಿಟರಿ ನೆರವನ್ನು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸ್ಥಗಿತಗೊಳಿಸಿದ್ದಾರೆ ಎಂದು ಫಾಕ್ಸ್ ನ್ಯೂಸ್ ವರದಿ ಮಾಡಿದೆ. ಕಳೆದ ವಾರ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಜೆಲೆನ್ ಸ್ಕಿ ಅವರೊಂದಿಗೆ ಓವಲ್ ಕಚೇರಿಯಲ್ಲಿ ನಡೆದ ವಾಗ್ವಾದದ ನಂತರ ಟ್ರಂಪ್ ಈ ನಿರ್ಧಾರ ಕೈಗೊಂಡಿದ್ದಾರೆ ಎಂದು ವರದಿ ಹೇಳಿದೆ.

ಉಕ್ರೇನ್ ನಾಯಕರು ಅಮೆರಿಕದ ಬೆಂಬಲ ಮತ್ತು ಶಾಂತಿ ಸ್ಥಾಪನೆಗೆ ಹೆಚ್ಚಿನ ಬದ್ಧತೆ ತೋರಿಸುವವರೆಗೆ ಸದ್ಯ ಸಾಗಣೆಯಲ್ಲಿರುವ ಅಥವಾ ಪೋಲೆಂಡ್ನಲ್ಲಿರುವ ಶಸ್ತ್ರಾಸ್ತ್ರಗಳು ಸೇರಿದಂತೆ ಎಲ್ಲಾ ರೀತಿಯ ಸಹಾಯವನ್ನು ಟ್ರಂಪ್ ಆಡಳಿತವು ಸ್ಥಗಿತಗೊಳಿಸಿದೆ ಎಂದು ಫಾಕ್ಸ್ ನ್ಯೂಸ್ ಹೇಳಿದೆ. ಶಾಂತಿ ಮಾತುಕತೆಗಳಿಗಾಗಿ ವಿಶ್ವಾಸಾರ್ಹ ಬದ್ಧತೆಯನ್ನು ತೋರುವವರೆಗೂ ಉಕ್ರೇನ್ಗೆ ನೀಡಲಾಗುತ್ತಿರುವ ಎಲ್ಲಾ ರೀತಿಯ ನೆರವನ್ನು ತಡೆಹಿಡಿಯಲಾಗುವುದು ಎಂದು ಟ್ರಂಪ್ ಆಡಳಿತದ ಹಿರಿಯ ಅಧಿಕಾರಿಯೊಬ್ಬರು ಫಾಕ್ಸ್ ನ್ಯೂಸ್ಗೆ ತಿಳಿಸಿದ್ದಾರೆ.

ಇದು ನೆರವಿನ ಶಾಶ್ವತ ಅಂತ್ಯವಲ್ಲ, ಇದೊಂದು ವಿರಾಮವಷ್ಟೇ. ಈ ಕುರಿತಾದ ಆದೇಶಗಳು ಈಗಷ್ಟೇ ಹೊರಬೀಳುತ್ತಿವೆ ಎಂದು ಟ್ರಂಪ್ ಆಡಳಿತದ ಹಿರಿಯ ಅಧಿಕಾರಿಯೊಬ್ಬರು ಹೇಳಿದರು.

ಕಳೆದ ವಾರ, ಓವಲ್ ಕಚೇರಿಯಲ್ಲಿ ಉಕ್ರೇನ್ ಅಧ್ಯಕ್ಷರೊಂದಿಗಿನ ಮಾಧ್ಯಮ ಸಂವಾದದ ಸಮಯದಲ್ಲಿ ಟ್ರಂಪ್ ಜೆಲೆನ್ಸ್ಕಿ ವಿರುದ್ಧ ಕೆಲ ಕಠಿಣ ಪದಗಳನ್ನು ಬಳಸಿದ್ದರು. ಯುದ್ಧ ಮುಂದುವರಿಸಲು ಅಗತ್ಯವಾದ ಸಾಮರ್ಥ್ಯ ನಿಮ್ಮ ಬಳಿಯಿಲ್ಲ ಹಾಗೂ ರಷ್ಯಾ ವಿರುದ್ಧದ ನಿಮ್ಮ ಯುದ್ಧದಲ್ಲಿ ನಾವು ನಿಮಗೆ ನೀಡಿದ ಸಹಾಯಕ್ಕೆ ನೀವು ಕೃತಜ್ಞತೆಯಿಂದ ವರ್ತಿಸುತ್ತಿಲ್ಲ ಎಂದು ಟ್ರಂಪ್ ಜೆಲೆನ್ಸ್ಕಿಗೆ ನೇರವಾಗಿಯೇ ಹೇಳಿದ್ದರು.

# ಪಶ್ಚಿಮ ಬಂಗಾಳದಲ್ಲಿ ಚುನಾವಣಾ ಆಯೋಗದಿಂದ ಮತದಾನ ವಂಚನೆ: ಟಿಎಮ್‌ಸಿ ಆರೋಪ

**ಹೊಸದಿಲ್ಲಿ:** ಮುಂದಿನ ವರ್ಷ ವಿಧಾನಸಭಾ ಚುನಾವಣೆ ನಡೆಯಲಿರುವ ಪಶ್ಚಿಮ ಬಂಗಾಳದಲ್ಲಿ ಅಕ್ರಮ ಮತದಾನಕ್ಕೆ ಭಾರತೀಯ ಚುನಾವಣಾ ಆಯೋಗವು ಅವಕಾಶ ನೀಡುತ್ತಿದೆ



ಎಂದು ತೃಣಮೂಲ ಕಾಂಗ್ರೆಸ್ (ಟಿಎಮ್‌ಸಿ) ಸೋಮವಾರ ಆರೋಪಿಸಿದೆ. ಈಗಾಗಲೇ ಅಸ್ತಿತ್ವದಲ್ಲಿರುವ ಮತದಾರರ ಫೋಟೋ ಗುರುತು ಚೀಟಿ (ಎಪಿಕ್) ಸಂಖ್ಯೆಗಳನ್ನೇ ಬಳಸಿಕೊಂಡು ಮತ ಚಲಾಯಿಸಲು ಹೊರ ರಾಜ್ಯಗಳಿಂದ ಜನರನ್ನು ಕರೆತರಲಾಗುತ್ತಿದೆ ಎಂದು ಅದು ಹೇಳಿದೆ. ಹೊಸದಿಲ್ಲಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಟಿಎಮ್‌ಸಿ ರಾಜ್ಯಸಭಾ ನಾಯಕ ಡೆರೆಕ್ ಒ'ಬ್ರಿಯನ್, ಇದೊಂದು ''ಮಹಾ (ಎಪಿಕ್) ಹಗರಣ'' ಎಂಬುದಾಗಿ ಬಣ್ಣಿಸಿದರು. ಈ ಹಗರಣವನ್ನು ಪಕ್ಷದ ಅಧ್ಯಕ್ಷೆ ಹಾಗೂ ರಾಜ್ಯದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಫೆಬ್ರವರಿ 27ರಂದು ಮೊದಲು ಬಯಲಿಗೆಳೆದಿದ್ದಾರೆ ಎಂದು ಅವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಪಕ್ಷದ ರಾಜ್ಯಸಭಾ ಸದಸ್ಯರಾದ ಸಾಗರಿಕಾ ಘೋಷ್ ಮತ್ತು ಕೀರ್ತಿ ಆಝಾದ್ ಉಪಸ್ಥಿತರಿದ್ದರು. ಈ ಹಗರಣಕ್ಕೆ ಪ್ರತಿಕ್ರಿಯಿಸಿರುವ ಚುನಾವಣಾ ಆಯೋಗವು, ತಪ್ಪನ್ನು ''ಒಪ್ಪಿಕೊಂಡಿದೆ''ಯಾದರೂ, ''ಸ್ವೀಕರಿಸಿಲ್ಲ'' ಎಂದು ಒ'ಬ್ರಿಯನ್ ತಿಳಿಸಿದರು.

# ಬಾಂಗ್ಲಾದೇಶದ ಗೃಹ ಸಲಹೆಗಾರರ ರಾಜೀನಾಮೆಗೆ ಆಗ್ರಹ

**ಢಾಕಾ:** ಬಾಂಗ್ಲಾದೇಶದ ಮಧ್ಯಂತರ ಸರ್ಕಾರದಲ್ಲಿ ಗೃಹ ವ್ಯವಹಾರಗಳ ಸಲಹೆಗಾರರಾಗಿರುವ ಜಹಾಂಗೀರ್ ಆಲಂ ಚೌಧರಿ ಅವರು ಮಹಿಳೆಯರ ಬಗ್ಗೆ ಕೀಳಾಗಿ ಮಾತನಾಡಿದ್ದನ್ನು ಖಂಡಿಸಿ ದೇಶಾದ್ಯಂತ ದೊಡ್ಡ ಪ್ರಮಾಣದ ಪ್ರತಿಭಟನೆಗಳು ಭುಗಿಲೆದ್ದಿವೆ. ಢಾಕಾದ ಲಾಲ್ಮಾಟಿಯಾದಲ್ಲಿ ಸಾರ್ವಜನಿಕವಾಗಿ ಧೂಮಪಾನ ಮಾಡಿದ ಇಬ್ಬರು ಯುವತಿಯರಿಗೆ ಕಿರುಕುಳ ನೀಡಿದ ಘಟನೆಯ ಬಗ್ಗೆ ಚೌಧರಿ ಅವರ ಹೇಳಿಕೆಯನ್ನು ಖಂಡಿಸಿ ಪ್ರತಿಭಟನೆಗಳು ನಡೆಯುತ್ತಿವೆ. 'ಅತ್ಯಾಚಾರ ಮತ್ತು ದಬ್ಬಾಳಿಕೆಯ ವಿರುದ್ಧ ಬಾಂಗ್ಲಾದೇಶ' ಬ್ಯಾನರ್ ಅಡಿಯಲ್ಲಿ ಪ್ರತಿಭಟನಾಕಾರರ ಗುಂಪು ಮಂಗಳವಾರ ಚೌಧರಿ ಅವರ ಪ್ರತಿಕೃತಿಯನ್ನು ದಹಿಸಿತು. ಘಟನಾ ಸ್ಥಳದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಸಂಸತ್ತಿನ ಕಟ್ಟಡದ ಕಡೆಗೆ ಜಾಥಾ ನಡೆಸಿ ಯೂನುಸ್ ನೇತೃತ್ವದ ಮಧ್ಯಂತರ ಸರ್ಕಾರದಿಂದ ಚೌಧರಿ ಅವರನ್ನು ತಕ್ಷಣ ವಜಾ ಮಾಡುವಂತೆ ಒತ್ತಾಯಿಸಿದರು ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ನನಗೆ ತಿಳಿದು ಬಂದಿರುವಂತೆ ಇಬ್ಬರು ಯುವತಿಯರು ಧೂಮಪಾನ ಮಾಡುತ್ತಿದ್ದರು. ಪ್ರಾರ್ಥನೆಗೆ ಹೋಗುತ್ತಿದ್ದ ಕೆಲವರು ಇದನ್ನು ಆಕ್ಷೇಪಿಸಿದರು. ಆಗ ಯುವತಿಯರು ಅವರ ಮೇಲೆ ಚಹಾ ಎಸೆದರು ಎಂದು ಆರೋಪಿಸಲಾಗಿದೆ. ಎಂದು ಲೆಫ್ಟಿನೆಂಟ್ ಜನರಲ್ (ನಿವೃತ್ತ) ಜಹಾಂಗೀರ್ ಆಲಂ ಚೌಧರಿ ಹೇಳಿದ್ದರು.



# ಮಹಾರಾಷ್ಟ್ರ ಸಚಿವ ಧನಂಜಯ್ ಮುಂಡೆ ರಾಜೀನಾಮೆ

**ಮುಂಬೈ:** ಡಿಸೆಂಬರ್ ತಿಂಗಳಲ್ಲಿ ಬೀಡ್ ಜಿಲ್ಲೆಯಲ್ಲಿ ನಡೆದಿದ್ದ ಸರಪಂಚನೊಬ್ಬನ ಹತ್ಯೆ ಪ್ರಕರಣದಲ್ಲಿ ತಮ್ಮ ಆಪ್ತ ಹಿಂಬಾಲಕ ವಾಲ್ಮೀಕ್ ಕರಡ್ ಬಂಧನಕ್ಕೊಳಗಾಗಿರುವ ಹಿನ್ನೆಲೆಯಲ್ಲಿ ಮಹಾರಾಷ್ಟ್ರದ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಧನಂಜಯ್ ಮುಂಡೆ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.ಮಸ್ಸಜೋಗ್ ಗ್ರಾಮದ ಸರಪಂಚ ಸಂತೋಷ್ ದೇಶ್ ಮುಖ್ ಹತ್ಯೆ ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ತಮ್ಮ ಆಪ್ತ ಹಿಂಬಾಲಕ ವಾಲ್ಮೀಕ್ ಕರಡ್ ನನ್ನು ಪೊಲೀಸರು ಬಂಧಿಸಿದ ನಂತರ, ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಸೂಚನೆಯ ಮೇರೆಗೆ ಧನಂಜಯ್ ಮುಂಡೆ ರಾಜೀನಾಮೆ ಸಲ್ಲಿಸಿದ್ದಾರೆ. ಧನಂಜಯ್ ಮುಂಡೆಯ ರಾಜೀನಾಮೆಯನ್ನು ಅಂಗೀಕರಿಸಿದ್ದು, ಅದನ್ನು ರಾಜ್ಯಪಾಲ ಸಿ.ಪಿ.ರಾಧಾಕೃಷ್ಣನ್ ಅವರಿಗೆ ರವಾನಿಸಲಾಗಿದೆ ಎಂದು ದೇವೇಂದ್ರ ಫಡ್ನವಿಸ್ ಸುದ್ದಿಗಾರರಿಗೆ ತಿಳಿಸಿದ್ದಾರೆ. ಸರಪಂಚನ ಹತ್ಯೆ ಪ್ರಕರಣದಲ್ಲಿ ಸಲ್ಲಿಕೆಯಾಗಿರುವ ದೋಷಾರೋಪ ಪಟ್ಟಿಯಿಂದ ಉದ್ಭವಿಸಲಿರುವ ರಾಜಕೀಯ ಪರಿಸ್ಥಿತಿ ಹಾಗೂ ಪೊಲೀಸರ ತನಿಖೆಯಲ್ಲಿ ಕರಡ್ ಪಾತ್ರದ ಕುರಿತು ಕಂಡು ಬಂದಿರುವ ಅಂಶಗಳ ಕುರಿತು ಉಪ ಮುಖ್ಯಮಂತ್ರಿ, ಅಜಿತ್ ಪವಾರ್ ಅವರೊಂದಿಗೆ ಚರ್ಚೆ ನಡೆಸಿದ ನಂತರ, ದೇವೇಂದ್ರ ಫಡ್ನವಿಸ್ ಈ ನಿರ್ಧಾರ ಕೈಗೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ.



# ಅಕ್ರಮವಾಗಿ ಇಸ್ರೇಲ್ ಗಡಿ ಪ್ರವೇಶಿಸಲು ಯತ್ನಿಸಿದ ಕೇರಳ ಮೂಲದ ವ್ಯಕ್ತಿಗೆ ಗುಂಡಿಕ್ಕಿ ಹತ್ಯೆ!



**ತಿರುವನಂತಪುರಂ:** ಜೋರ್ಡಾನ್‌ನಲ್ಲಿ ಕೇರಳದ ಥುಂಬಾ ನಿವಾಸಿ ಗೇಬ್ರಿಯಲ್ ಪೆರೇರಾ ಎಂಬ ವ್ಯಕ್ತಿಯನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿದೆ. ಗೇಬ್ರಿಯಲ್ ಪ್ರವಾಸಿ ವೀಸಾದಲ್ಲಿ ಜೋರ್ಡಾನ್‌ಗೆ ಹೋಗಿದ್ದರು. ಅಲ್ಲಿಂದ ಅಕ್ರಮವಾಗಿ ಇಸ್ರೇಲ್‌ಗೆ ಪ್ರವೇಶಿಸಲು ಪ್ರಯತ್ನಿಸುತ್ತಿದ್ದಾಗ ಜೋರ್ಡಾನ್ ಸೇನೆಯೂ ಅವರ ಮೇಲೆ ಗುಂಡು ಹಾರಿಸಿತ್ತು. ಗೇಬ್ರಿಯಲ್ ಸಾವನ್ನು ಭಾರತೀಯ ರಾಯಭಾರ ಕಚೇರಿ ದೃಢಪಡಿಸಿದೆ.

ಮಾಹಿತಿಯ ಪ್ರಕಾರ, ಗುಂಡು ಗೇಬ್ರಿಯಲ್ ತಲೆಗೆ ಬಿದ್ದು ಸಾವನ್ನಪ್ಪಿದ್ದಾನೆ. ಈ ಘಟನೆಯಲ್ಲಿ, ಗೇಬ್ರಿಯಲ್ ಜೊತೆಗೆ ಇಸ್ರೇಲ್ ಪ್ರವೇಶಿಸಲು ಪ್ರಯತ್ನಿಸುತ್ತಿದ್ದ ಮತ್ತೊಬ್ಬ ವ್ಯಕ್ತಿ ಎಡಿಸನ್ ಕೂಡ ಗಾಯವಾಗಿದೆ. ಮೇನಂಕುಲಂ ನಿವಾಸಿ ಎಡಿಸನ್ ಕಾಲಿಗೆ ಗುಂಡು ತಗುಲಿತ್ತು. ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆಯ ನಂತರ ಭಾರತಕ್ಕೆ ಮರಳಿದರು.

ಈ ಗುಂಪಿನಲ್ಲಿ ಒಟ್ಟು ನಾಲ್ವರು ಇದ್ದರು ಎಂದು ವರದಿಗಳು ಬಹಿರಂಗಪಡಿಸಿವೆ. ಗುಂಪಿನ ಭಾಗವಾಗಿದ್ದ ಉಳಿದ ಇಬ್ಬರು ಮಲಯಾಳಿಗಳು ಪ್ರಸ್ತುತ ಇಸ್ರೇಲ್‌ನಲ್ಲಿ ಬಂಧನದಲ್ಲಿದ್ದಾರೆ. ಪ್ರಾಥಮಿಕ ತನಿಖೆಗಳಲ್ಲಿ ಈ ಗುಂಪು ಉದ್ಯೋಗ ಹುಡುಕಿಕೊಂಡು ಇಸ್ರೇಲ್ ಗೆ ಹೋಗಿತ್ತು ಎಂದು ಸೂಚಿಸುತ್ತವೆ. ಈ ಗುಂಪು ಗಡಿ ದಾಟದಂತೆ ತಡೆಯಲು ಜೋರ್ಡಾನ್ ಸೇನೆ ಪ್ರಯತ್ನಿಸಿತ್ತು. ಸೇನೆಯನ್ನು ಕಂಡ ಕ್ಷಣ ಅವರು ಬಂಡೆಗಳ ನಡುವೆ ಅಡಗಿಕೊಳ್ಳಲು ಪ್ರಯತ್ನಿಸಿದಾಗ ಗುಂಡು ಹಾರಿಸಲಾಗಿತ್ತು.

ಗೇಬ್ರಿಯಲ್ ಅವರ ಸಾವಿನ ಬಗ್ಗೆ ಅವರ ಕುಟುಂಬಕ್ಕೆ ರಾಯಭಾರ ಕಚೇರಿಯಿಂದ ಇಮೇಲ್ ಮೂಲಕ ತಿಳಿಸಲಾಯಿತು. ಆದರೆ ಎಡಿಸನ್ ಭಾರತಕ್ಕೆ ಹಿಂದಿರುಗಿದ ನಂತರವೇ ಸುದ್ದಿ ವ್ಯಾಪಕವಾಗಿ ಹರಡಿತು. ನೆರೆಹೊರೆಯವರಾಗಿದ್ದ ಗೇಬ್ರಿಯಲ್ ಮತ್ತು ಅಡಿಸನ್ ಒಟ್ಟಿಗೆ ಜೋರ್ಡಾನ್‌ಗೆ ಹೋಗಿದ್ದರು ಎಂದು ಹೇಳಲಾಗುತ್ತಿದೆ.

ಈ ಘಟನೆಯ ನಂತರ ಸ್ಥಳೀಯ ಸಮುದಾಯದಲ್ಲಿ ಆಕ್ರೋಶ ವ್ಯಕ್ತವಾಗಿದೆ. ಅಕ್ರಮವಾಗಿ ಗುಂಪನ್ನು ಇಸ್ರೇಲ್‌ಗೆ ಕಳುಹಿಸುವ ಪ್ರಯತ್ನದಲ್ಲಿ ಯಾವುದೇ ಏಜೆಂಟ್ ಭಾಗಿಯಾಗಿದ್ದಾರೆಯೇ ಎಂದು ಕಂಡುಹಿಡಿಯಲು ಅಧಿಕಾರಿಗಳು ಈಗ ತನಿಖೆ ನಡೆಸುತ್ತಿದ್ದಾರೆ. ರಾಜ್ಯ ಸರ್ಕಾರವೂ ಈ ವಿಷಯದಲ್ಲಿ ಮಧ್ಯಪ್ರವೇಶಿಸಿ ಘಟನೆಯ ತನಿಖೆ ನಡೆಸುವಂತೆ ವಿದೇಶಾಂಗ ಸಚಿವಾಲಯವನ್ನು ಕೋರಿದೆ.

# ಗುಜರಾತ್ ವಂತಾರದಲ್ಲಿ ವನ್ಯಜೀವಿ ಪುನರ್ವಸತಿ ಸಂರಕ್ಷಣಾ ಕೇಂದ್ರ ಉದ್ಘಾಟಿಸಿದ ಮೋದಿ



**ಜಾಮ್ ನಗರ (ಗುಜರಾತ್):** ಗುಜರಾತ್ನ ಜಾಮ್ ನಗರದಲ್ಲಿರುವ ವಂತಾರ ವನ್ಯಜೀವಿ ರಕ್ಷಣೆ, ಪುನರ್ವಸತಿ ಮತ್ತು ಸಂರಕ್ಷಣಾ ಕೇಂದ್ರವನ್ನು ಪ್ರಧಾನಿ ನರೇಂದ್ರ ಮೋದಿ ಮಂಗಳವಾರದಂದು (ಮಾರ್ಚ್ 4) ಉದ್ಘಾಟಿಸಿದರು. ವಂತಾರದಲ್ಲಿ ಎರಡು ಸಾವಿರಕ್ಕೂ ಹೆಚ್ಚು ಪ್ರಭೇದಗಳಿಗೆ ನೆಲೆ ಒದಗಿಸಲಾಗಿದೆ. ಮತ್ತು ಒಂದೂವರೆ ಲಕ್ಷಕ್ಕೂ ಹೆಚ್ಚು ರಕ್ಷಣೆ ಮಾಡಲಾದ, ಅಳಿವಿನಂಚಿನಲ್ಲಿರುವ ಮತ್ತು ಅಪಾಯದಲ್ಲಿರುವ ಪ್ರಾಣಿಗಳಿಗೆ ನೆಲೆಯಾಗಿದೆ. ವಂತಾರದಲ್ಲಿ ಇರುವಂಥ ವಿವಿಧ ಸೌಲಭ್ಯಗಳ ಬಗ್ಗೆ ಪ್ರಧಾನಿ ಮೋದಿ ಮಾಹಿತಿ ಪಡೆದರು. ಇನ್ನು ಪುನರ್ವಸತಿ ಒದಗಿಸಲಾದ ವಿವಿಧ ಪ್ರಭೇದದ ಪ್ರಾಣಿಗಳೊಂದಿಗೆ ಅವರು ಸಮಯವನ್ನು ಕಳೆದರು.

ವಂತಾರದಲ್ಲಿ ಇರುವ ವನ್ಯಜೀವಿ ಆಸ್ಪತ್ರೆಗೆ ಭೇಟಿ ನೀಡಿದ ಪ್ರಧಾನಿ ಮೋದಿ ಅವರು, ಎಂಆರ್‌ಐ, ಸಿಟಿ ಸ್ಕ್ಯಾನ್ಗಳು, ಐಸಿಯುಗಳು ಸೇರಿದಂತೆ ಪಶುವೈದ್ಯಕೀಯ ಸೌಲಭ್ಯಗಳನ್ನು ವೀಕ್ಷಿಸಿದರು. ವನ್ಯಜೀವಿ ಅರಿವಳಿಕೆ, ಹೃದಯಶಾಸ್ತ್ರ, ಮೂತ್ರಪಿಂಡಶಾಸ್ತ್ರ, ಎಂಡೋಸ್ಕೋಪಿ, ದಂತವೈದ್ಯಶಾಸ್ತ್ರ, ಆಂತರಿಕ ಔಷಧ ಇತ್ಯಾದಿಗಳನ್ನು ಹೊಂದಿರುವ ವಿವಿಧ ವಿಭಾಗಗಳಿಗೆ ಸಹ ಭೇಟಿ ನೀಡಿದರು. ಇಲ್ಲಿ ಅವರು ಏಷ್ಯಾಟಿಕ್ ಸಿಂಹದ ಮರಿಗಳು, ಬಿಳಿ ಸಿಂಹದ ಮರಿ, ಅಪರೂಪದ ಮತ್ತು ಅಳಿವಿನಂಚಿನಲ್ಲಿರುವ ಪ್ರಭೇದದ ಹಿಮಾಲಯದ ಚಿರತೆ ಮರಿ, ಕ್ಯಾರಕಲ್ಸ್ (ವಿಶಿಷ್ಟ ಬಗೆಯ ಕಾಡು ಬೆಕ್ಕು) ಸೇರಿದಂತೆ ವಿವಿಧ ಪ್ರಭೇದದ ಪ್ರಾಣಿಗಳಿಗೆ ಆಹಾರ ನೀಡಿದರು, ಸಂತಸದ ಕ್ಷಣಗಳನ್ನು ಕಳೆದರು.

ಇನ್ನು ಪ್ರಧಾನಿ ಮೋದಿ ಅವರು ಆಹಾರ ನೀಡಿದಂಥ ಬಿಳಿ ಸಿಂಹದ ಮರಿಯು ವಂತಾರದಲ್ಲಿಯೇ ಜನಿಸಿದಂಥದ್ದು. ಅದರ ತಾಯಿಯನ್ನು ರಕ್ಷಿಸಿ, ಆರೈಕೆಗಾಗಿ ವಂತಾರಕ್ಕೆ ಕರೆತಂದ ನಂತರದಲ್ಲಿ ಬಿಳಿ ಸಿಂಹದ ಮರಿಯು ಜನಿಸಿತು. ಭಾರತದಲ್ಲಿ ಹಿಂದೊಮ್ಮೆ ಹೇರಳವಾಗಿದ್ದ ಕ್ಯಾರಕಲ್ಗಳು ಈಗ ಕಂಡುಬರುವುದು ಅಪರೂಪವಾಗುತ್ತಿವೆ. ವಂತಾರದಲ್ಲಿ ಕ್ಯಾರಕಲ್ಗಳ ಸಂರಕ್ಷಣೆಗಾಗಿ ಸೆರೆಯಲ್ಲಿ ಸಂತಾನೋತ್ಪತ್ತಿ ಕಾರ್ಯಕ್ರಮದಡಿ ಸಾಕಲಾಗುತ್ತದೆ ಮತ್ತು ನಂತರ ಕಾಡಿಗೆ ಬಿಡಲಾಗುತ್ತದೆ.

ನರೇಂದ್ರ ಮೋದಿ ಅವರು ಆಸ್ಪತ್ರೆಯ ಎಂಆರ್‌ಐ ಕೋಣೆಗೆ ಭೇಟಿ ನೀಡಿದರು ಮತ್ತು ಏಷಿಯಾಟಿಕ್ ಸಿಂಹಕ್ಕೆ ಎಂಆರ್‌ಐ ಮಾಡುವುದನ್ನು ವೀಕ್ಷಿಸಿದರು. ಹೆದ್ದಾರಿಯಲ್ಲಿ ಕಾರಿಗೆ ಡಿಕ್ಕಿ ಹೊಡೆದ ನಂತರ, ಅದನ್ನು ರಕ್ಷಣೆ ಮಾಡಿ ಜೀವ ಉಳಿಸುವುದಕ್ಕಾಗಿ ಶಸ್ತ್ರಚಿಕಿತ್ಸೆ ಮಾಡಲಾದ ಚಿರತೆಯ ಆಪರೇಷನ್ ಥಿಯೇಟರ್ಗೆ ಭೇಟಿ ನೀಡಿದರು.

ವಂತಾರದಲ್ಲಿ ರಕ್ಷಿಸಲಾದ ಪ್ರಾಣಿಗಳನ್ನು ಅವುಗಳ ನೈಸರ್ಗಿಕ ಆವಾಸಸ್ಥಾನವನ್ನೇ ಬಹುತೇಕ ಪ್ರತಿಬಿಂಬಿಸುವ ಸ್ಥಳಗಳಲ್ಲಿ ಇರಿಸಲಾಗಿದೆ. ಇಲ್ಲಿ ಕೈಗೊಂಡ ಕೆಲವು ಪ್ರಮುಖ ಸಂರಕ್ಷಣಾ ಉಪಕ್ರಮಗಳಲ್ಲಿ ಏಷಿಯಾಟಿಕ್ ಸಿಂಹ, ಹಿಮ ಚಿರತೆ, ಒಂದು ಕೊಂಬಿನ ಘೇಂಡಾಮೃಗ ಇತರವು ಸೇರಿಕೊಂಡಿವೆ.

ನರೇಂದ್ರ ಮೋದಿ ಅವರು ವಿವಿಧ ಉಗ್ರ ಸ್ವರೂಪದ- ಸ್ವಭಾವದ ಪ್ರಾಣಿಗಳೊಂದಿಗೆ ಸಮಯ ಕಳೆದರು. ಅದರಲ್ಲೂ ಗೋಲ್ಡನ್ ಟೈಗರ್ನೊಂದಿಗೆ ಮುಖಾಮುಖಿಯಾಗಿ ಕುಳಿತರು. ಒಂದೇ ತಾಯಿಯ ಮರಿಗಳಾದ 4 ಹಿಮ ಹುಲಿಗಳು ಇಲ್ಲಿ ಇದ್ದು, ಅವುಗಳನ್ನು ಸರ್ಕಸ್ನಿಂದ ರಕ್ಷಿಸಲಾಗಿದೆ. ಅಲ್ಲಿ ಅವುಗಳು ವಿವಿದ ಪ್ರದರ್ಶನಗಳನ್ನು ನೀಡುತ್ತಿದ್ದವು, ಜತೆಗೆ ಬಿಳಿ ಸಿಂಹ ಮತ್ತು ಹಿಮ ಚಿರತೆಗಳಿದ್ದವು.

ಅಪರೂಪದ ಒಕಾಪಿಯ ಮೈ ದಡವಿದ ನರೇಂದ್ರ ಮೋದಿ ಅವರು, ಚಿಂಪಾಂಜಿಗಳಿಗೆ ಎದುರಾದರು. ಸಾಕುಪ್ರಾಣಿಗಳಾಗಿ ಇರಿಸಲಾಗಿದ್ದ ಒಂದ ಕಡೆಯಿಂದ ವಂತಾರಕ್ಕೆ ಅವುಗಳನ್ನು ತರಲಾಗಿದೆ. ಇನ್ನು ಒರಾಂಗುಟನ್ಗಳೊಂದಿಗೆ ಅಪ್ಪಿಕೊಂಡರು ಮತ್ತು ಪ್ರೀತಿಯಿಂದ ಆಟವಾಡಿದರು. ನೀರಿನ ಅಡಿಯಲ್ಲಿರುವ ನೀರಾನೆಯನ್ನು, ಮೊಸಳೆಗಳನ್ನು ನೋಡಿದರು. ಜೀಬ್ರಾಗಳ ನಡುವೆ ನಡೆದಾಡಿದರು. ಜಿರಾಫೆ ಮತ್ತು ಘೇಂಡಾಮೃಗದ ಮರಿಗಳಿಗೆ ಆಹಾರ ನೀಡಿದರು. ಇನ್ನು ಒಂದು ಕೊಂಬಿನ ಘೇಂಡಾಮೃಗದ ಮರಿಯೊಂದು ಅನಾಥವಾಗಿದ್ದು, ಅದರ ತಾಯಿಯು ವಂತಾರದಲ್ಲಿಯೇ ಸಾವನ್ನಪ್ಪಿತು.

ದೊಡ್ಡ ಹೆಬ್ಬಾವು, ವಿಶಿಷ್ಟವಾದ ಎರಡು ತಲೆಯ ಹಾವು, ಎರಡು ತಲೆಯ ಆಮೆ, ಟ್ಯಾಪಿರ್ ನೋಡಿದರು. ಇನ್ನು ಚಿರತೆ ಮರಿಗಳನ್ನು ಕೃಷಿ ಜಮೀನಿನಲ್ಲಿ ಬಿಡಲಾಗಿತ್ತು. ಆ ನಂತರ ಗ್ರಾಮಸ್ಥರು ಅವುಗಳನ್ನು ಗುರುತಿಸಿ ರಕ್ಷಿಸಿದರು. ದೈತ್ಯ ನೀರುನಾಯಿ, ಬೊಂಗೊ (ಹುಲ್ಲೆ), ಸೀಲುಗಳು ಸಹ ನೋಡಿದ ನಂತರದಲ್ಲಿ ಸ್ನಾನ ಮಾಡುತ್ತಾ ಆಟವಾಡುತ್ತಿದ್ದ ಆನೆಗಳನ್ನು ಸಹ ನರೇಂದ್ರ ಮೋದಿ ವೀಕ್ಷಿಸಿದರು.

ಅಂದ ಹಾಗೆ ಈ ಹೈಡ್ರೋಥೆರಪಿ ಕೊಳಗಳು ವಿಶಿಷ್ಟವಾದವು. ಇವುಗಳಿಂದ ಸಂಧಿವಾತ ಮತ್ತು ಕಾಲು ಸಮಸ್ಯೆಗಳಿಂದ ಬಳಲುತ್ತಿರುವ ಆನೆಗಳ ಚೇತರಿಕೆಗೆ ಸಹಾಯ ಮಾಡುತ್ತವೆ ಮತ್ತು ಅವುಗಳ ಚಲನಶೀಲತೆಯನ್ನು ಸುಧಾರಿಸುತ್ತವೆ.

ಆನೆ ಆಸ್ಪತ್ರೆಯ ಕಾರ್ಯನಿರ್ವಹಣೆಯನ್ನು ಅವರು ನೋಡಿದರು. ಅಂದ ಹಾಗೆ ಇದು ಇಂಥದ್ದರ ಪೈಕಿ ವಿಶ್ವದ ಅತಿದೊಡ್ಡ ಆಸ್ಪತ್ರೆಯಾಗಿದೆ. ವಂತಾರದಲ್ಲಿ ರಕ್ಷಿಸಲಾದ ಗಿಳಿಗಳನ್ನು ಅವರು ಬಿಡುಗಡೆ ಮಾಡಿದರು. ವಂತಾರದಲ್ಲಿ ವಿವಿಧ ವಿವಿಧ ಕೇಂದ್ರಗಳ-ವಿಭಾಗಗಳನ್ನು ನಿರ್ವಹಿಸುತ್ತಿರುವ ವೈದ್ಯರು, ಸಹಾಯಕ ಸಿಬ್ಬಂದಿ ಮತ್ತು ಕಾರ್ಮಿಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಂವಾದ ನಡೆಸಿದರು.

# ವಿಧಾನಸಭೆ ಕಟ್ಟಡದಲ್ಲಿ ಪಾನ್ ಮಸಾಲ ಉಗಿದ ಶಾಸಕ; ಸ್ಪೀಕರ್ ಗರಂ



**ಲಖನೌ:** ಇಲ್ಲಿನ ಅಸೆಂಬ್ಲಿ ಕಟ್ಟಡದಲ್ಲಿ ಕೆಲವು ಶಾಸಕರು ಪಾನ್ ಮಸಾಲ ತಿಂದು ಉಗಿದಿರುವ ಕೃತ್ಯವನ್ನು ಸ್ಪೀಕರ್ ಸತೀಶ್ ಮಹಾನಾ ಅವರು ಖಂಡಿಸಿದ್ದಾರೆ. ವಿಧಾನಸಭೆಯಲ್ಲಿ ಮಂಗಳವಾರ ಕಲಾಪ ಆರಂಭವಾಗುವ ಮುನ್ನ ಸ್ಪೀಕರ್ ಸತೀಶ್ ಮಹಾನಾ ಅವರು, ಸದನದ ಘನತೆ ಮತ್ತು ಶುಚಿತ್ವವನ್ನು ಕಾಪಾಡುವ ತಮ್ಮ ಸಂಕಲ್ಪವನ್ನು ಪುನರುಚ್ಚರಿಸಿದರು. ಅಲ್ಲದೇ, ಕೂಡಲೇ ಸ್ಥಳದಲ್ಲಿ ಉಗುಳಿದ್ದ ಪಾನ್ ಮಸಾಲವನ್ನ ಸ್ವಚ್ಛಗೊಳಿಸುವಂತೆ ಹೇಳಿ, ಶಾಸಕರ ಅಶಿಸ್ತಿನ ವರ್ತನೆಯನ್ನ ಖಂಡಿಸಿದರು.

ಕೆಲವು ಶಾಸಕರು ಪಾನ್ ಮಸಾಲ ತಿಂದು ವಿಧಾನಸಭೆಗೆ ಬರುತ್ತಾರೆ ಎಂದು ಸಿಸಿಟಿವಿ ದೃಶ್ಯಾವಳಿಗಳನ್ನು ಉಲ್ಲೇಖಿಸಿ ಸ್ಪೀಕರ್ ಸತೀಶ್ ಮಹಾನಾ ಅವರಿಗೆ ವಿಧಾನಸಭೆ ಆಡಳಿತ ತಿಳಿಸಿತ್ತು. ಜೊತೆಗೆ ಸಿಕ್ಕ ಸಿಕ್ಕ ಕಡೆಯಲ್ಲಿ ಪಾನ್ ಮಸಾಲ ಉಗಿಯುತ್ತಾರೆ ಎಂದು ಅವರಿಗೆ ಹೇಳಿದ್ದರು. ಮಾಹಿತಿ ಪಡೆದ ಸ್ಪೀಕರ್ ಸತೀಶ್ ಮಹಾನಾ ಅವರು ಘಟನಾ ಸ್ಥಳಕ್ಕೆ ಖುದ್ದು ಭೇಟಿ ನೀಡಿ, ಪರಿಶೀಲನೆ ನಡೆಸಿ ಶಾಸಕರ ಅಶಿಸ್ತನ್ನು ಟೀಕಿಸಿದರು. ಇದಾದ ಬಳಿಕ ಸದನವನ್ನುದ್ದೇಶಿಸಿ ಮಾತನಾಡಿದ ಸ್ಪೀಕರ್, ಇದು ಕೇವಲ ಒಬ್ಬ ವ್ಯಕ್ತಿಯ ಜವಾಬ್ದಾರಿಯಲ್ಲ, ವಿಧಾನಸಭೆಯಲ್ಲಿ ಉತ್ತಮ ನಡವಳಿಕೆ ನಮ್ಮೆಲ್ಲರ ಸಾಮೂಹಿಕ ಜವಾಬ್ದಾರಿಯಾಗಿದೆ ಎಂದು ಸ್ಪಷ್ಟಪಡಿಸಿದರು. ಈ ಅಶಿಸ್ತಿನ ವಿಡಿಯೋ ಲಭ್ಯವಿದೆ. ಆದರೆ ಯಾವುದೇ ಸದಸ್ಯರನ್ನು ಸಾರ್ವಜನಿಕವಾಗಿ ಅವಮಾನಿಸುವುದು ನನ್ನ ಉದ್ದೇಶವಲ್ಲ. ಮುಂದೆ ಯಾರಾದರೂ ಈ ರೀತಿ ಮಾಡುವುದನ್ನು ಕಂಡರೆ ಅವರನ್ನು ಅಲ್ಲೇ ನಿಲ್ಲಿಸಿ, ಸಭೆಯ ಘನತೆ ಕಾಪಾಡಲು ಸಹಕರಿಸಬೇಕು ಎಂದು ಎಲ್ಲ ಸದಸ್ಯರಲ್ಲಿ ಮನವಿ ಮಾಡಿದರು.

# ಸರ್ಬಿಯಾ ಸಂಸತ್‌ನಲ್ಲಿ ಸದಸ್ಯರ ಘರ್ಷಣೆ; ಹೊಗೆ ಬಾಂಬ್ ಎಸೆತ

**ಬೆಲ್ಗ್ರೇಡ್:** ಸರ್ಬಿಯಾದಲ್ಲಿ ಮಂಗಳವಾರ ಸರಕಾರದ ನೀತಿಯನ್ನು ವಿರೋಧಿಸಿ ಪ್ರತಿಭಟನೆ ನಡೆಸುತ್ತಿರುವ ವಿದ್ಯಾರ್ಥಿಗಳಿಗೆ ಬೆಂಬಲ ಸೂಚಿಸಿದ ವಿರೋಧ ಪಕ್ಷದ ಸಂಸದರು ಸಂಸತ್ ಭವನದ ಒಳಗೆ ಅಶ್ರುವಾಯು ಮತ್ತು ಹೊಗೆ ಬಾಂಬ್ಗಳನ್ನು ಎಸೆದಾಗ ಆತಂಕದ ವಾತಾವರಣ ಸೃಷ್ಟಿಯಾಗಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ.




4 ತಿಂಗಳ ಹಿಂದೆ ಸರ್ಬಿಯಾದಲ್ಲಿ ರೈಲ್ವೇ ನಿಲ್ದಾಣದ ಮೇಲ್ಛಾವಣಿ ಕುಸಿದು 15 ಮಂದಿ ಮೃತಪಟ್ಟಿದ್ದು ಈ ಘಟನೆಯಲ್ಲಿ ಅಧಿಕಾರಿಗಳ ಕರ್ತವ್ಯಲೋಪವನ್ನು ಖಂಡಿಸಿ ದೇಶದಾದ್ಯಂತ ಪ್ರತಿಭಟನೆ ನಡೆಯುತ್ತಿದೆ. ಪ್ರತಿಭಟನಾ ನಿರತ ವಿದ್ಯಾರ್ಥಿಗಳನ್ನು ಸಮಾಧಾನ ಪಡಿಸುವ ಪ್ರಯತ್ನವಾಗಿ ಸರಕಾರ ವಿವಿಗಳಿಗೆ ಅನುದಾನ ಹೆಚ್ಚಿಸುವ ಮಸೂದೆಯನ್ನು ಸಂಸತ್ನಲ್ಲಿ ಮಂಡಿಸಿದ್ದು ಚರ್ಚೆಯ ಸಂದರ್ಭ ಘರ್ಷಣೆ ಭುಗಿಲೆದ್ದಿದೆ. ವಿರೋಧ ಪಕ್ಷದ ಸಂಸದರು ಅಶ್ರುವಾಯು ಮತ್ತು ಹೊಗೆಬಾಂಬ್ ಸಿಡಿಸಿದಾಗ ಇಬ್ಬರು ಸಂಸದರು ಗಾಯಗೊಂಡಿದ್ದಾರೆ ಎಂದು ಸ್ಪೀಕರ್ ಹೇಳಿದ್ದಾರೆ.

# ಓಪನ್ ಟೆಲಿಕಾಂ ಎಐ ಪ್ಲಾಟ್ ಫಾರ್ಮ್‌ಗಾಗಿ ಕೈ ಜೋಡಿಸಿದ ಜಿಯೋ, ಎಎಂಡಿ, ಸಿಸ್ಕೋ ಹಾಗೂ ನೋಕಿಯಾ

**ಬಾರ್ಸಿಲೋನಾ (ಸ್ಪೇನ್):** ಜಗತ್ತಿನ ನಾಲ್ಕು ದೊಡ್ಡ ತಂತ್ರಜ್ಞಾನ ಕಂಪನಿಗಳು ಶೀಘ್ರದಲ್ಲಿಯೇ ಹೊಸದಾದ ಓಪನ್ ಟೆಲಿಕಾಂ ಕೃತಕ ಬುದ್ಧಿಮತ್ತೆ (ಎಐ- ಆರ್ಟಿಫಿಷಿಯಲ್ ಇಂಟೆಲಿಜೆನ್ಸ್) ಪ್ಲಾಟ್ ಫಾರ್ಮ್ ಶುರು ಮಾಡುವುದಕ್ಕೆ ಒಟ್ಟಾಗಿ ಕೆಲಸ ಮಾಡಲಿವೆ. ಸ್ಪೇನ್ ನ ಬಾರ್ಸಿಲೋನಾದಲ್ಲಿ ನಡೆಯುತ್ತಿರುವ ಮೊಬೈಲ್ ವರ್ಲ್ಡ್ ಕಾಂಗ್ರೆಸ್ - 2025ರಲ್ಲಿ ಜಿಯೋ ಪ್ಲಾಟ್ಫಾರ್ಮ್ಸ್ ಲಿಮಿಟೆಡ್ (ಜೆಪಿಎಲ್), ಎಎಮ್ಡಿ, ಸಿಸ್ಕೊ ಮತ್ತು ನೋಕಿಯಾ ಈ ಯೋಜನೆಯನ್ನು ಬಹಿರಂಗಪಡಿಸಿವೆ. ಟೆಲಿಕಾಂ ಆಪರೇಟರ್ಗಳಿಗೆ ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಸಲ್ಯೂಷನ್ಸ್ ಒದಗಿಸಲು ಈ ಹೊಸ ಪ್ಲಾಟ್ ಫಾರ್ಮ್ ವಿನ್ಯಾಸಗೊಳಿಸಲಾಗುವುದು. ಹೊಸ ಟೆಲಿಕಾಂ ಎಐ ಪ್ಲಾಟ್ಫಾರ್ಮ್ ನೆಟ್ವರ್ಕ್ನ ಸುರಕ್ಷತೆ, ದಕ್ಷತೆ ಮತ್ತು ಸಾಮರ್ಥ್ಯವನ್ನು ಹೆಚ್ಚಿಸುವುದಲ್ಲದೆ, ಆದಾಯದ ಹೊಸ ಮಾರ್ಗಗಳನ್ನು ತೆರೆಯುತ್ತದೆ. ಈ ಬಹು-ಡೊಮೇನ್ ಇಂಟೆಲಿಜೆನ್ಸ್ ಚೌಕಟ್ಟು ನೆಟ್ವರ್ಕ್ ಕಾರ್ಯಾಚರಣೆಗಳು ಮತ್ತು ಆಟೋಮೇಷನ್ ಆದದ್ದನ್ನು ಸಂಯೋಜಿಸಿ ಎಂಡ್-ಟು-ಎಂಡ್ ನೆಟ್ವರ್ಕ್ ಬುದ್ಧಿಮತ್ತೆಯನ್ನು ಒದಗಿಸುತ್ತದೆ.



ಎಲ್ಲಾ ಟೆಲ್ಕೊ ಹಂತಗಳಲ್ಲಿ ಏಜೆಂಟಿಕ್ ಎಐ ಬಳಸುವ ಮೂಲಕ ನಾವು ಟೆಲಿಕಾಂ ಉದ್ಯಮದಲ್ಲಿ ದಕ್ಷತೆ, ಬುದ್ಧಿವಂತಿಕೆ ಮತ್ತು ಸುರಕ್ಷತೆಯನ್ನು ಮರು ವ್ಯಾಖ್ಯಾನಿಸುವ ಮಲ್ಟಿಮೋಡಲ್, ಮಲ್ಟಿಡೊಮೈನ್ ಆರ್ಕೆಸ್ಟ್ರೇಟೆಡ್ ಕೆಲಸದ ಹರಿವಿನ ಪ್ಲಾಟ್ಫಾರ್ಮ್ ಅನ್ನು ನಿರ್ಮಿಸುತ್ತಿದ್ದೇವೆ. ಎಎಂಡಿ, ಸಿಸ್ಕೋ ಮತ್ತು ನೋಕಿಯಾ ಸಹಯೋಗದೊಂದಿಗೆ ಜಿಯೋ ಓಪನ್ ಟೆಲಿಕಾಂ ಎಐ ಪ್ಲಾಟ್ಫಾರ್ಮ್ ಅನ್ನು ತರುತ್ತದೆ ಇದು ಕೇವಲ ಆಟೋಮೇಷನ್ ಆದದ್ದಲ್ಲ - ಇದು ಬಳಕೆದಾರರ ಅನುಭವಕ್ಕೆ ಹೊಂದಿಕೊಳ್ಳುವ ಎಐ-ಚಾಲಿತ ಸ್ವಾಯತ್ತ ನೆಟ್ವರ್ಕ್ ಆಗಿರುತ್ತದೆ. ಇದು ಡಿಜಿಟಲ್ ಪರಿಸರ ವ್ಯವಸ್ಥೆಯಲ್ಲಿ ಹೊಸ ಸೇವೆಗಳು ಮತ್ತು ಹೊಸ ಆದಾಯದ ಅವಕಾಶಗಳನ್ನು ಸೃಷ್ಟಿಸುತ್ತದೆ,'' ಎಂದು ರಿಲಯನ್ಸ್ ಜಿಯೋದ ಗ್ರೂಪ್ ಸಿಇಒ ಮ್ಯಾಥ್ಯೂ ಊಮ್ಮೆನ್ ಹೇಳಿದರು.

ಮುಂದಿನ ಪೀಳಿಗೆಯ ಎಐ ಚಾಲಿತ ದೂರಸಂಪರ್ಕ ಮೂಲಸೌಕರ್ಯವನ್ನು ರೂಪಿಸಲು ಜಿಯೋ ಪ್ಲಾಟ್ಫಾರ್ಮ್ಸ್ ಲಿಮಿಟೆಡ್, ಸಿಸ್ಕೊ ಮತ್ತು ನೋಕಿಯಾ ಜೊತೆ ಸಹಯೋಗ ವಹಿಸುವುದಕ್ಕೆ ಎಎಂಡಿ ಹೆಮ್ಮೆಪಡುತ್ತದೆ. ಒಟ್ಟಾಗಿ, ನಾವು ನಿರ್ವಹಣೆ ಮಾಡುವವರು ಮತ್ತು ಬಳಕೆದಾರರಿಗೆ ಎಐ ಪ್ರಯೋಜನಗಳನ್ನು ತರುತ್ತೇವೆ ಹಾಗೂ ಸಂವಹನ ಮತ್ತು ಸಂಪರ್ಕದ ಭವಿಷ್ಯವನ್ನು ರೂಪಿಸುತ್ತೇವೆ,'' ಎಂದು ಎಎಂಡಿ ಸಿಇಒ ಲಿಸಾ ಸು ಹೇಳಿದರು.ಜಿಯೋ ಪ್ಲಾಟ್ಫಾರ್ಮ್ಸ್ ಲಿಮಿಟೆಡ್, ಎಎಮ್ಡಿ ಮತ್ತು ನೋಕಿಯಾ ಜೊತೆಗಿನ ಈ ಪಾಲುದಾರಿಕೆಯು ಉದ್ಯಮದ ಪರಿಣತಿಯನ್ನು ಬಳಸಿಕೊಳ್ಳುತ್ತದೆ. ಟೆಲಿಕಾಂ ಎಐ ಪ್ಲಾಟ್ಫಾರ್ಮ್ ಹೇಗೆ ದಕ್ಷತೆ, ಭದ್ರತೆಯನ್ನು ಹೆಚ್ಚಿಸುತ್ತದೆ ಮತ್ತು ಸೇವಾ ಪೂರೈಕೆದಾರ ಗ್ರಾಹಕರಿಗೆ ಹೊಸ ಆದಾಯದ ಮೂಲಗಳನ್ನು ತೆರೆಯುವಂತೆ ಮಾಡುತ್ತದೆ ಎಂಬುದನ್ನು ಕಾಣಲು ನಾವು ಎದುರು ನೋಡುತ್ತಿದ್ದೇವೆ,'' ಎಂದು ಸಿಸ್ಕೋ ಸಿಇಒ ಚಕ್ ರಾಬಿನ್ಸ್ ಹೇಳಿದರು.

ನೋಕಿಯಾ ಅಧ್ಯಕ್ಷರು ಮತ್ತು ಸಿಇಒ ಪೆಕ್ಕಾ ಲುಂಡ್ಮಾರ್ಕ್ ಮಾತನಾಡಿ, ನೋಕಿಯಾ ಆರ್‌ಎಎನ್, ಕೋರ್, ಸ್ಥಿರ ಬ್ರಾಡ್ಬ್ಯಾಂಡ್, ಐಪಿ ಮತ್ತು ಆಪ್ಟಿಕಲ್ ಸಾರಿಗೆ ಸೇರಿ ಹಲವು ಕ್ಷೇತ್ರಗಳಲ್ಲಿ ತಂತ್ರಜ್ಞಾನದಲ್ಲಿ ಮುಂಚೂಣಿಯಲ್ಲಿದೆ. ಈ ವ್ಯಾಪಕ ಪರಿಣತಿಯನ್ನು ಹಂಚಿಕೊಳ್ಳಲು ನಾವು ಸಂತೋಷಪಡುತ್ತೇವೆ. ಟೆಲಿಕಾಂ ಎಐ ಪ್ಲಾಟ್ಫಾರ್ಮ್ ಕೃತಕ ಬುದ್ಧಿಮತ್ತೆಯ ಅಗಾಧ ಶಕ್ತಿಯ ಮೂಲಕ ಸುಧಾರಿತ ಕಾರ್ಯಕ್ಷಮತೆ, ಭದ್ರತೆ, ಕಾರ್ಯಾಚರಣೆಯ ದಕ್ಷತೆ, ಆಟೋಮೇಷನ್ ಮತ್ತು ಉತ್ತಮ ಗ್ರಾಹಕ ಅನುಭವವನ್ನು ನೀಡುತ್ತದೆ. ನೋಕಿಯಾ ಈ ಕೆಲಸಕ್ಕೆ ಕೊಡುಗೆ ನೀಡುತ್ತಿದೆ ಎಂದು ನನಗೆ ಹೆಮ್ಮೆ ಇದೆ, ಎಂದು ಹೇಳಿದರು.

# ಸಿಎಂ ನಿತೀಶ್ ದಣಿದಿದ್ದಾರೆ: ತೇಜಸ್ವಿ ಯಾದವ್ ವಾಗ್ದಾಳಿ



**ಪಾಟ್ನಾ:** ಬಿಹಾರ ಸಿಎಂ ನಿತೀಶ್ ಕುಮಾರ್ ದಣಿದಿದ್ದಾರೆ ಮತ್ತು ಅವರ ಸರ್ಕಾರ ನಿಷ್ಕ್ರಿಯವಾಗಿದೆ ಎಂದು ವಿರೋಧ ಪಕ್ಷದ ನಾಯಕ ತೇಜಸ್ವಿ ಯಾದವ್ ಇಂದು ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಬಿಹಾರ ವಿಧಾನಸಭೆಯ ಬಜೆಟ್ ಅಧಿವೇಶನದಲ್ಲಿ ಮಾತನಾಡಿದ ಅವರು, ಸರ್ಕಾರ ನಿಷ್ಕ್ರಿಯವಾಗಿದ್ದು, ವ್ಯವಸ್ಥೆ ನಿಷ್ಪ್ರಯೋಜಕವಾಗಿದೆ, ಸಿಎಂ ದಣಿದಿದ್ದಾರೆ ಮತ್ತು ಸಾಮಾನ್ಯ ಜನರು ಅಸಹಾಯಕರಾಗಿದ್ದಾರೆ ಎಂದು ಹೇಳಿದರು.

ಸಿಎಂ ನಿತೀಶ್ ಕುಮಾರ್ ಅವರು ಎರಡು ದಶಕಗಳ ಹಿಂದಿನ ಪರಿಸ್ಥಿತಿಗಳನ್ನು ನೆನಪಿಸಿಕೊಳ್ಳುತ್ತ ಪ್ರಸ್ತುತ ಸಮಸ್ಯೆಗಳ ಬಗ್ಗೆ ನೋಡುತ್ತಿಲ್ಲ. ಆ ಮೂಲಕ ರಾಜ್ಯದ ಪ್ರಸ್ತುತ ಸವಾಲುಗಳಿಗೆ ಉತ್ತರದಾಯಿತ್ವದಿಂದ ತಪ್ಪಿಸಿಕೊಳ್ಳುತ್ತಿದ್ದಾರೆ ಎಂದು ಯಾದವ್ ಆರೋಪಿಸಿದರು. ರಾಜ್ಯಪಾಲರ ಭಾಷಣವನ್ನು ಟೀಕಿಸಿದ ಅವರು, ಇದು ಪುನರಾವರ್ತಿತ ಭಾಷಣವಾಗಿದ್ದು, ಪ್ರಸ್ತುತ ಸರ್ಕಾರದ ಬಗ್ಗೆ ಉತ್ತಮ ಚಿತ್ರಣ ನೀಡಲು ಹಿಂದಿನ ಸರ್ಕಾರದ ಸಾಧನೆಗಳನ್ನು ಇದರಲ್ಲಿ ಸೇರಿಸಲಾಗಿದೆ ಎಂದರು. ಮೂಲಸೌಕರ್ಯ ವೈಫಲ್ಯಗಳನ್ನು ಎತ್ತಿ ತೋರಿಸಿದ ಯಾದವ್, ಬಿಹಾರದಲ್ಲಿ ಆಗಾಗ ಸೇತುವೆಗಳು ಮತ್ತು ಕಲ್ವರ್ಟ್ಗಳು ಕುಸಿಯುತ್ತಿರುವುದನ್ನು ಪ್ರಸ್ತಾಪಿಸಿದ ಅವರು, ಯೋಜನೆಗಳ ಗುಣಮಟ್ಟ ಮತ್ತು ಮೇಲ್ವಿಚಾರಣೆಯ ಬಗ್ಗೆ ಪ್ರಶ್ನೆಗಳನ್ನು ಎತ್ತಿದರು.

9 ಲಕ್ಷ ಲೀಟರ್ ಆಲ್ಕೋಹಾಲ್ ಅನ್ನು ಇಲಿಗಳು ಹಾಳು ಮಾಡಿವೆ ಎಂದು ವ್ಯಂಗ್ಯವಾಗಿ ನುಡಿದ ಅವರು ಸರ್ಕಾರವನ್ನು ಗೇಲಿ ಮಾಡಿದರು. ಕಾವ್ಯಾತ್ಮಕ ವಿಮರ್ಶೆಯ ಮೂಲಕ ಯಾದವ್, ಹಿಂದಿನ ಆಡಳಿತಗಳ ಬಗ್ಗೆ ಸರ್ಕಾರದ ಗೀಳನ್ನು ಟೀಕಿಸಿದರು. ಸರ್ಕಾರವು ಹಳೆಯ ಸಾಧನೆಗಳ ಬಗ್ಗೆಯೇ ಮಾತನಾಡುತ್ತಿದ್ದು, 2005 ರಿಂದ ಯಾವುದೇ ಪ್ರಗತಿ ಸಾಧಿಸಲು ವಿಫಲವಾಗಿದೆ ಎಂದು ಅವರು ಹೇಳಿದರು.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# 'ಪುಷ್ಪ' ಸಿನಿಮಾ ಪಾರ್ಟ್ 10ರವರೆಗೆ ಬರಲಿದ್ಯಾ?

ಸುಳಿವು ಕೊಟ್ಟ ಮ್ಯೂಸಿಕ್ ಡೈರೆಕ್ಟರ್



ಬೆಂಗಳೂರಿನಲ್ಲಿ ನಡೆಯುತ್ತಿರುವ ಫಿಲ್ಮ್ ಫೆಸ್ಟಿವಲ್‌ಗೆ 'ಪುಷ್ಪ' ಡೈರೆಕ್ಟರ್ ದೇವಿಶ್ರೀ ಪ್ರಸಾದ್ ಆಗಮಿಸಿ ಕನ್ನಡ ಚಿತ್ರರಂಗದ ಬಗ್ಗೆ ಕೊಂಡಾಡಿದ್ದಾರೆ. ಈ ವೇಳೆ, 'ಪುಷ್ಪ' ಸಿನಿಮಾ ಪಾರ್ಟ್ 10ರವರೆಗೆ ಬರಬಹುದು ಎಂದು ಸಂಗೀತ ನಿರ್ದೇಶಕ ಸಿನಿಮಾ ಬಗ್ಗೆ ಸುಳಿವು ನೀಡಿದ್ದಾರೆ.

ಎಲ್ಲಾ ಕನ್ನಡಿಗರಿಗೂ ನಾನು ಥ್ಯಾಂಕ್ಸ್ ಹೇಳ್ತೀನಿ. ಯಾಕಂದ್ರೆ, ತೆಲುಗು ಸಿನಿಮಾಗಳಿಗೆ ಕನ್ನಡದವರು ತುಂಬಾ ಸಪೋರ್ಟ್ ಮಾಡಿದ್ದೀರಾ. ನನ್ನ ಸಿನಿಮಾಗಳ ಹಾಡುಗಳಿಗೆ ನೀವು ತುಂಬಾ ಬೆಂಬಲಿಸಿದ್ರಿ. ಫಿಲ್ಮ್ ಫೆಸ್ಟಿವಲ್‌ಗೆ ಬಂದಿರೋದಕ್ಕೆ ನನಗೆ ತುಂಬಾ ಖುಷಿ ಆಗ್ತಿದೆ. ಕನ್ನಡ ಇಂಡಸ್ಟ್ರೀಯಲ್ಲಿ ಒಂದಷ್ಟು ಟೆಕ್ನಿಷಿಯನ್ಸ್ ನನಗೆ ತುಂಬಾ ಪರಿಚಯವಿದ್ದಾರೆ. ಈಗ ಕನ್ನಡ ಇಂಡಸ್ಟ್ರಿ ಪ್ಯಾನ್ ಇಂಡಿಯಾ ಲೆವೆಲ್‌ಗೆ ಬಂದಿದೆ. ಕಾಂತಾರ, ಕೆಜಿಎಫ್ ಸಿನಿಮಾ ಮೂಲಕ ಹೆಸರು ಮಾಡಿವೆ. ಈಗ ತೆಲುಗು, ಕನ್ನಡ, ಮಲಯಾಳಂ ಅನ್ನೋದೆಲ್ಲ ಇಲ್ಲ. ಭಾರತೀಯ ಸಿನಿಮಾ ಅನ್ನೋ ಥರಾ ಆಗಿದೆ.

ಇನ್ನೂ ಇದೇ ತಿಂಗಳು ಬೆಂಗಳೂರಿನಲ್ಲಿ ನನ್ನ ಲೈವ್ ಕಾನ್ಸರ್ಟ್ ಮಾಡ್ತಿದ್ದೀನಿ. ನಾವು ಬೆಂಗಳೂರಿಗೆ ಬರುತ್ತೇವೆ. ನೀವು ಚೆನ್ನೈ, ಹೈದ್ರಾಬಾದ್‌ಗೆ ಬನ್ನಿ. ನೀವು ಸಿನಿಮಾಗಳನ್ನ ಸೆಲೆಬ್ರೇಟ್ ಮಾಡಿ ನಾವೂ ಸೆಲೆಬ್ರೇಟ್ ಮಾಡ್ತೀವಿ ಎಂದರು.

ಇನ್ನೂ 'ಪುಷ್ಪ' ಸಿನಿಮಾ ಬಾಂಡ್ ಸಿರೀಸ್ ಥರ ಬರುತ್ತಾ? ಎಂದು ಎದುರಾದ ಪ್ರಶ್ನೆ ದೇವಿಶ್ರೀ ಮಾತನಾಡಿ, 'ಪುಷ್ಪ' ಚಿತ್ರ ಬಾಂಡ್ ಸಿರೀಸ್ ಸಿನಿಮಾ ಥರ 'ಪುಷ್ಪ ಪಾರ್ಟ್ 10ರ'ವರೆಗೂ ಬರಬಹುದು. ಸದ್ಯಕ್ಕೆ ಸ್ವಲ್ಪ ರೆಸ್ಟ್‌ನಲ್ಲಿದ್ದೀವಿ. ಡೈರೆಕ್ಟರ್ ಸುಕುಮಾರ್ ಸರ್ ಮತ್ತು ಅಲ್ಲು ಅರ್ಜುನ್ ಸ್ವಲ್ಪ ವಿಶ್ರಾಂತಿ ಪಡೆಯುತ್ತಿದ್ದಾರೆ. ಮುಂದೆ ಕನ್ನಡ ಸಿನಿಮಾಗೂ ಮ್ಯೂಸಿಕ್ ಮಾಡ್ತೀನಿ ಎಂದು ತಮ್ಮ ಅಭಿಲಾಷೆಯನ್ನು ವ್ಯಕ್ತಪಡಿಸಿದರು. ಈ ಹಿಂದೆ ಗಣೇಶ್ ನಟನೆಯ 'ಸಂಗಮ' ಸಿನಿಮಾಗೆ ಮ್ಯೂಸಿಕ್ ಮಾಡಿದ್ದೇ ಎಂದು ಸ್ಮರಿಸಿದರು.

ಗೋಲ್ಡ್ ಸ್ಮಗ್ಲಿಂಗ್ ಕೇಸ್

# ನಟಿ ರನ್ಯಾ ರಾವ್‌ಗೆ 14 ದಿನ ನ್ಯಾಯಾಂಗ ಬಂಧನ

12 ಕೋಟಿ ಮೌಲ್ಯದ 14.8 ಕೆಜಿ ಚಿನ್ನ ಪತ್ತೆ



ಅಕ್ರಮವಾಗಿ ಚಿನ್ನ ಸಾಗಿಸುತ್ತಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ನಟಿ ರನ್ಯಾ ರಾವ್ ಅವರನ್ನು 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ವಿಶೇಷ ಆರ್ಥಿಕ ಅಪರಾಧಗಳ ನ್ಯಾಯಾಧೀಶರು ಆದೇಶ ಹೊರಡಿಸಿದ್ದಾರೆ.

ಗೋಲ್ಡ್ ಸ್ಮಗ್ಲಿಂಗ್ ಆರೋಪದ ಮೇಲೆ ನಟಿ ರನ್ಯಾ ರಾವ್ ಅವರನ್ನು ಬೆಂಗಳೂರು ಏರ್‌ಪೋರ್ಟ್‌ನಲ್ಲಿ ಬಂಧಿಸಲಾಗಿದೆ. ಸೋಮವಾರ ರಾತ್ರಿ ದೆಹಲಿಯಿಂದ ಬಂದಿಳಿದ ನಟಿ ರನ್ಯಾ ರಾವ್ ಬಳಿ 12 ಕೋಟಿ ಮೌಲ್ಯದ 14.8 ಚಿನ್ನ ಪತ್ತೆಯಾಗಿದೆ. ಆಗಾಗ ಬ್ಯುಸಿನೆಸ್ ಟ್ರಿಪ್ ಮೇಲೆ ದುಬೈ ಹೋಗಿ ಬರ್ತಿದ್ದ ನಟಿ ರನ್ಯಾ‌ರಾವ್ ಮೇಲೆ ಡಿಆರ್‌ಐ ಅಧಿಕಾರಿಗಳು ನಿಗಾ ಇಟ್ಟಿದ್ದರು. ವಿದೇಶದಿಂದ ಕಳ್ಳಸಾಗಣೆಯಾದ ಚಿನ್ನವನ್ನು ನಟಿ ರನ್ಯಾ‌ರಾವ್ ದೆಹಲಿಯಿಂದ ಬೆಂಗಳೂರಿಗೆ ತರುತ್ತಿರುವ ಬಗ್ಗೆ ಡಿಆರ್‌ಐ ಅಧಿಕಾರಿಗಳಿಗೆ ಖಚಿತ ಮಾಹಿತಿ ಸಿಕ್ಕಿತ್ತು. ಹೀಗಾಗಿ ಕಾರ್ಯಚರಣೆ ನಡೆಸಿದ ಡಿಆರ್‌ಐ ಅಧಿಕಾರಿಗಳು ನಟಿ ರನ್ಯಾ‌ರಾವ್ ರನ್ನು ರೆಡ್ ಹ್ಯಾಂಡ್ ಆಗಿ ಲಾಕ್ ಮಾಡಿದ್ದರು. ನಟಿ ರನ್ಯಾ‌ರಾವ್ ಹಿರಿಯ ಐಪಿಎಸ್ ಅಧಿಕಾರಿಯೊಬ್ಬರ ಮಲಮಗಳು. ಹೀಗಾಗಿ ಆಕೆಗೆ ಎಸ್ಕಾರ್ಟ್ ಕೊಡಲು ಬಂದಿದ್ದ ಪೊಲೀಸರನ್ನು ಮತ್ತು ರನ್ಯಾ‌ರಾವ್ ಪತಿಯನ್ನು ಸ್ಮಗ್ಲಿಂಗ್‌ಗೆ ನೆರವು ನೀಡುತ್ತಿದ್ದ ಆರೋಪದ ಮೇರೆಗೆ ಡಿಆರ್‌ಐ ಅಧಿಕಾರಿಗಳು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದ್ದಾರೆ. ಮಾಹಿತಿ ಪ್ರಕಾರ ರನ್ಯಾ‌ರಾವ್ ಮಲತಂದೆಯನ್ನು ಡಿಆರ್‌ಐ ಅಧಿಕಾರಿಗಳು ವಿಚಾರಣೆಗೆ ಒಳಪಡಿಸುವ ಸಾಧ್ಯತೆ ಇದೆ. ಮನಿ ಲಾಂಡ್ರಿಂಗ್ ಆಯಾಮದಲ್ಲಿಯೂ ನಟಿ ರನ್ಯಾ‌ರಾವ್ ರನ್ನು ಪ್ರಶ್ನಿಸುವ ಸಂಭವ ಇದೆ. ಇನ್ನು ಲ್ಯಾವೆಲ್ಲಿ ರಸ್ತೆಯಲ್ಲಿರುವ ರನ್ಯಾ ರಾವ್ ಅಪಾರ್ಟ್ಮೆಂಟ್ ಮೇಲೆ ಡಿಆರ್‌ಐ ಅಧಿಕಾರಿಗಳು ದಾಳಿ ನಡೆಸಿದ್ದು, 2.5 ಕೋಟಿ ನಗದು ಹಣವನ್ನು ವಶಕ್ಕೆ ಪಡೆದಿದ್ದಾರೆ.



# ಕಾಮಾಕ್ಯ ದೇವಸ್ಥಾನಕ್ಕೆ ದರ್ಶನ್ ಪತ್ನಿ ವಿಜಯಲಕ್ಷ್ಮೀ ಭೇಟಿ

**ನಟ ದರ್ಶನ್ ಪತ್ನಿ ವಿಜಯಲಕ್ಷ್ಮಿ ಅಸ್ಸಾಂನ ಗುವಾಹಟಿಯ ಕಾಮಾಕ್ಯ ದೇವಸ್ಥಾನಕ್ಕೆ ಭೇಟಿ ನೀಡಿದ್ದಾರೆ. ದೇವಸ್ಥಾನದಲ್ಲಿರುವ ಫೋಟೋವನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ವಿಜಯಲಕ್ಷ್ಮಿ ಅವರು ದೇವಿಯ ಆರಾಧಕಿ. ಆಗಾಗ ಶಕ್ತಿ ದೇವತೆಯ ಮೊರೆ ಹೋಗುತ್ತಾರೆ. ಇದೀಗ ಅಸ್ಸಾಂನ ಗುವಾಹಟಿಯ ಕಾಮಾಕ್ಯ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ದೇವಸ್ಥಾನದಲ್ಲಿ ಕೆಲ ಕಾಲ ಸಮಯ ಕಳೆದಿದ್ದಾರೆ. ಇನ್ನೂ ಈ ಹಿಂದೆ ದರ್ಶನ್ ಅವರು ರೇಣುಕಾಸ್ವಾಮಿ ಪ್ರಕರಣದಲ್ಲಿ ಅರೆಸ್ಟ್ ಆದ ಸಂದರ್ಭದಲ್ಲಿ ಕಾಮಾಕ್ಯ ದೇವಾಲಯಕ್ಕೆ ಭೇಟಿ ನೀಡಿದ್ದರು.**






# ಬಲಿಷ್ಠ ಆಸ್ಟ್ರೇಲಿಯಾ ಬಗ್ಗು ಬಡಿದು ಫೈನಲ್ ಪ್ರವೇಶಿಸಿದ ಭಾರತ

ಬಲಿಷ್ಠ ಆಸ್ಟ್ರೇಲಿಯಾವನ್ನು 4 ವಿಕೆಟ್‌ಗಳಿಂದ ಸೋಲಿಸಿದ ಭಾರತ ಚಾಂಪಿಯನ್ಸ್ ಟ್ರೋಫಿ ಫೈನಲ್ ಪ್ರವೇಶಿಸಿದೆ. ಈ ಮೂಲಕ 2023ರ ಏಕದಿನ ವಿಶ್ವಕಪ್ ಕ್ರಿಕೆಟ್ ಫೈನಲ್ ಸೋಲಿಗೆ ಸೇಡು ತೀರಿಸಿತು.

ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ 264 ರನ್‌ಗಳಿಗೆ ಆಲೌಟ್ ಆಗಿತ್ತು. ಈ ಮೊತ್ತವನ್ನು ಬೆನ್ನಟ್ಟಿದ ಭಾರತ 48.1 ಓವರ್‌ಗಳಲ್ಲಿ 267 ರನ್ ಹೊಡೆಯುವ ಮೂಲಕ ಫೈನಲ್ ಪ್ರವೇಶಿಸಿತು. ತಾಳ್ಮೆಯ ಆಟವಾಡಿ ಭಾರತ ಫೈನಲ್ ಪ್ರವೇಶಿಸುವಲ್ಲಿ ಪ್ರಧಾನ ಪಾತ್ರ ವಹಿಸಿದ್ದ ವಿರಾಟ್ ಕೊಹ್ಲಿಗೆ ಅರ್ಹವಾಗಿಯೆ ಪಂದ್ಯಶ್ರೇಷ್ಠ ಪ್ರಶಸ್ತಿ ಲಭಿಸಿತು.

ವಿರಾಟ್ ಕೊಹ್ಲಿ 84 ರನ್ (98 ಎಸೆತ, 5 ಬೌಂಡರಿ), ಶ್ರೇಯಸ್ ಅಯ್ಯರ್ 45 ರನ್(62 ಎಸೆತ, 3 ಬೌಂಡರಿ), ಕೆಎಲ್ ರಾಹುಲ್ ಔಟಾಗದೇ 42 ರನ್ (34 ಎಸೆತ, 2 ಬೌಂಡರಿ, 2 ಸಿಕ್ಸ್), ಹಾರ್ದಿಕ್ ಪಾಂಡ್ಯ 28 ರನ್ (24 ಎಸೆತ, 1 ಬೌಂಡರಿ, 3 ಸಿಕ್ಸ್) ಹೊಡೆಯುವ ಮೂಲಕ ಭಾರತದ ಗೆಲುವಿನಲ್ಲಿ ಪ್ರಧಾನ ಪಾತ್ರ ವಹಿಸಿದರು.

ಎರಡನೇ ಸೆಮಿಫೈನಲ್ ಪಂದ್ಯ ಮಂಗಳವಾರ ನ್ಯೂಜಿಲೆಂಡ್ ಮತ್ತು ದಕ್ಷಿಣ ಆಫ್ರಿಕಾ ಮಧ್ಯೆ ನಡೆಯಲಿದೆ. ಈ ಪಂದ್ಯದಲ್ಲಿ ವಿಜೇತರಾದವರು ಭಾನುವಾರ ದುಬೈ ಮೈದಾನದಲ್ಲಿ ಭಾರತವನ್ನು ಎದುರಿಸಲಿದ್ದಾರೆ.

ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ಪರವಾಗಿ ನಾಯಕ ಸ್ಟೀವ್ ಸ್ಮಿತ್ 73 ರನ್ ( 4 ಬೌಂಡರಿ, 1 ಸಿಕ್ಸ್), ಅಲೆಕ್ಸ್ ಕ್ಯಾರಿ 61 ರನ್( 57ಎಸೆತ, 8 ಬೌಂಡರಿ, 1 ಸಿಕ್ಸ್) ಹೊಡೆದರು.

ಮೊಹಮ್ಮದ್ ಶಮಿ 3 ವಿಕೆಟ್, ವರುಣ್ ಚಕ್ರವರ್ತಿ ಮತ್ತು ಜಡೇಜಾ ತಲಾ 2 ವಿಕೆಟ್, ಹಾರ್ದಿಕ್ ಪಾಂಡ್ಯ, ಅಕ್ಷರ್ ಪಟೇಲ್ ತಲಾ ಒಂದೊಂದು ವಿಕೆಟ್ ಪಡೆದರು.

## ದಾಖಲೆ ಬರೆದ ರೋಹಿತ್ ಶರ್ಮಾ




**ದುಬೈ:** ಚಾಂಪಿಯನ್ಸ್ ಫೈನಲ್‌ಗೆ ಟೀಂ ಇಂಡಿಯಾ ಪ್ರವೇಶಿಸಿದ್ದು ಭಾರತದ ಪರ ರೋಹಿತ್ ಶರ್ಮಾ ದಾಖಲೆ ಬರೆದಿದ್ದಾರೆ.

ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್, ವಿಶ್ವಕಪ್, ಟಿ20, ಚಾಂಪಿಯನ್ಸ್ ಟ್ರೋಫಿ ಫೈನಲ್‌ವರೆಗೆ ಟೀಂ ಇಂಡಿಯಾವನ್ನು ಮುನ್ನಡೆಸಿದ ಏಕೈಕ ನಾಯಕ ಎಂಬ ಹೆಗ್ಗಳಿಕೆಗೆ ರೋಹಿತ್ ಶರ್ಮಾ ಪಾತ್ರವಾಗಿದ್ದಾರೆ. ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ 264 ರನ್‌ಗಳಿಗೆ ಆಲೌಟ್ ಆಗಿತ್ತು. ಈ ಮೊತ್ತವನ್ನು ಬೆನ್ನಟ್ಟಿದ ಭಾರತ 48.1 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 267 ರನ್ ಹೊಡೆಯುವ ಮೂಲಕ ಫೈನಲ್ ಪ್ರವೇಶಿಸಿತು. ಲಾಹೋರ್‌ನಲ್ಲಿ ಬುಧವಾರ ದಕ್ಷಿಣ ಆಫ್ರಿಕಾ ಮತ್ತು ನ್ಯೂಜಿಲೆಂಡ್ ಮಧ್ಯೆ ಎರಡನೇ ಸೆಮಿಫೈನಲ್ ಪಂದ್ಯ ನಡೆಯಲಿದೆ. ಈ ಪಂದ್ಯದಲ್ಲಿ ವಿಜೇತರಾದವರು ಭಾನುವಾರ ದುಬೈ ಮೈದಾನದಲ್ಲೇ ಭಾರತವನ್ನು ಎದುರಿಸಲಿದೆ.

**4 ಫೈನಲ್ ಪಂದ್ಯಗಳು:** 2023 – ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್‌ನಲ್ಲಿ ಭಾರತವನ್ನು ಆಸ್ಟ್ರೇಲಿಯಾ 209 ರನ್‌ಗಳಿಂದ ಮಣಿಸಿತ್ತು.

2023 – ಏಕದಿನ ವಿಶ್ವಕಪ್‌ನಲ್ಲಿ ಆಸ್ಟ್ರೇಲಿಯಾ ಭಾರತವನ್ನು 6 ವಿಕೆಟ್‌ಗಳಿಂದ ಸೋಲಿಸಿ ಟ್ರೋಫಿಯನ್ನು ಗೆದ್ದುಕೊಂಡಿತ್ತು. ಅಹಮದಾಬಾದ್‌ನಲ್ಲಿ ನಡೆದ ಪಂದ್ಯದಲ್ಲಿ ಭಾರತ ಸೋತಿತ್ತು.

2024 – ವೆಸ್ಟ್ ಇಂಡಿಸ್‌ನಲ್ಲಿ ನಡೆದ ಟಿ20 ಫೈನಲ್‌ನಲ್ಲಿ ಭಾರತ ದಕ್ಷಿಣ ಆಫ್ರಿಕಾದ ವಿರುದ್ಧ 7 ರನ್‌ಗಳ ರೋಚಕ ಜಯ ಸಾಧಿಸಿತ್ತು. ಈ ಮೂಲಕ ಎರಡನೇ ಬಾರಿ ಟಿ20 ಚಾಂಪಿಯನ್ ಪಟ್ಟವನ್ನು ಅಲಂಕರಿಸಿತ್ತು. 2025 – ದುಬೈನಲ್ಲಿ ನಡೆದ ಸೆಮಿಫೈನಲ್‌ನಲ್ಲಿ ಆಸ್ಟ್ರೇಲಿಯಾದ ವಿರುದ್ಧ 4 ವಿಕೆಟ್‌ಗಳ ಜಯ ಸಾಧಿಸಿ ಫೈನಲ್ ಪ್ರವೇಶಿಸಿದೆ.

# ಕೆಪಿಎಸ್‌ಸಿ ಹಗರಣ: ಪೂರ್ವಭಾವಿ ಪರೀಕ್ಷೆಗೆ 60 ಲಕ್ಷ, ಮುಖ್ಯ ಪರೀಕ್ಷೆಗೆ 1 ಕೋಟಿ



**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಪ್ರತಿಯೊಂದಕ್ಕೂ ರೇಟ್ ಫಿಕ್ಸ್ ಆಗಿದೆ. ಪೂರ್ವಭಾವಿ ಪರೀಕ್ಷೆಗೆ 60 ಲಕ್ಷ ರೂ., ಮುಖ್ಯ ಪರೀಕ್ಷೆಗೆ 1 ಕೋಟಿ ರೂ. ನಿಗದಿ ಮಾಡಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.

ವಿಧಾನಸಭೆಯಲ್ಲಿ ಕೆಪಿಎಸ್‌ಸಿ ಹಗರಣದ ಕುರಿತು ಮಾತನಾಡಿದ ಅವರು, ಕೆಪಿಎಸ್‌ಸಿಯಲ್ಲಿ 14 ಸದಸ್ಯರಿದ್ದು, ಒಬ್ಬರಿಗೆ ಎರಡೂವರೆ ಲಕ್ಷ ರೂ. ವೇತನವಿದೆ. ಉಳಿದ ಸೌಲಭ್ಯಗಳು ಸೇರಿ 4 ಲಕ್ಷ ರೂ. ಆಗುತ್ತದೆ. ಕರ್ನಾಟಕದಲ್ಲಿ ಆರೂವರೆ ಕೋಟಿ ಜನರಿದ್ದಾರೆ. 20 ಕೋಟಿ ಜನರಿರುವ ಉತ್ತರ ಪ್ರದೇಶದ ಆಯೋಗದಲ್ಲಿ 8 ಸದಸ್ಯರಿದ್ದಾರೆ. ಇದರಲ್ಲೂ ರಾಜ್ಯದಲ್ಲಿ ಹಗಲು ದರೋಡೆ ನಡೆಯುತ್ತಿದೆ. ಪೂರ್ವಭಾವಿ ಪರೀಕ್ಷೆಗೆ 60 ಲಕ್ಷ ರೂ. ಮುಖ್ಯ ಪರೀಕ್ಷೆಗೆ 1 ಕೋಟಿ ರೂ. ಹಾಗೂ ಸಂದರ್ಶನದ ಮೂಲಕ 40 ಲಕ್ಷ ರೂ. ನಿಗದಿ ಮಾಡಲಾಗಿದೆ. ಈ ರೀತಿ ರೇಟ್ ಕಾರ್ಟ್ ಫಿಕ್ಸ್ ಮಾಡಲಾಗಿದೆ. ಎಸಿಗೆ 2 ಕೋಟಿ ರೂ., ಡಿವೈಎಸ್‌ಪಿಗೆ 2 ಕೋಟಿ ರೂ., ವಾಣಿಜ್ಯ ತೆರಿಗೆ 1.50 ಕೋಟಿ ರೂ., ಪಂಚಾಯತ್ ಅಧಿಕಾರಿಗೆ ಒಂದೂವರೆ ಕೋಟಿ ರೂ. ನಿಗದಿ ಮಾಡಲಾಗಿದೆ ಆರೋಪಿಸಿದರು.

ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ಜ.2ರಂದೇ ಪೊಲೀಸರೇ ದೂರು ದಾಖಲಿಸಿದ್ದಾರೆ. ಗಾಂಧಿನಗರದ ಸಜ್ಜನ್ ಲಾಡ್ಜ್‌ನಲ್ಲಿ ಒಬ್ಬ ವ್ಯಕ್ತಿ ಕೊಠಡಿ ಮಾಡಿಕೊಂಡು, ಸ್ಪರ್ಧಾತ್ಮಕ ಪರೀಕ್ಷೆ ಪಾಸು ಮಾಡಲು ಪಿತೂರಿ ಮಾಡಿ ಹಣ ಸಂಪಾದಿಸುತ್ತಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಇದೇ ರೀತಿ ವಿಜಯನಗರ ಪೊಲೀಸ್ ಠಾಣೆಯಲ್ಲಿ ಮತ್ತೊಂದು ದೂರು ದಾಖಲಾಗಿದೆ. ಇಲ್ಲಿ ಕೂಡ ಮಧ್ಯವರ್ತಿ ಮೂಲಕ ಪರೀಕ್ಷೆಯಲ್ಲಿ ಪಾಸು ಮಾಡಿಸಲು ಹಣ ಸಂಪಾದಿಸುತ್ತಿದ್ದಾನೆ ಎಂದು ಉಲ್ಲೇಖಿಸಲಾಗಿದೆ. ಆ ವ್ಯಕ್ತಿಗೆ ಅಧಿಕಾರಿಗಳ ಪರಿಚಯವಿದ್ದು, ಹುದ್ದೆ ಕೊಡಿಸುವುದಾಗಿ ಹೇಳಿ ನಂಬಿಸುತ್ತಿದ್ದ ಎಂದು ದೂರಿನಲ್ಲಿ ಬರೆಯಲಾಗಿದೆ ಎಂದರು.

ಓಎಂಆರ್ ಶೀಟ್‌ನಲ್ಲಿ 16 ಅಥವಾ 10 ಪ್ರಶ್ನೆಗಳಿಗೆ ಮಾತ್ರ ಟಿಕ್ ಮಾಡು ಎಂದು ಮಧ್ಯವರ್ತಿ ಹೇಳುತ್ತಾನೆ. ಅದರಂತೆಯೇ ಅಭ್ಯರ್ಥಿ ಮಾಡುತ್ತಾನೆ. ಓಎಂಆರ್ ಶೀಟ್ ಹೋಗುವ ಎರಡು ಕೊಠಡಿಗಳಲ್ಲಿ ಸಿಸಿಟಿವಿ ಇರುವುದಿಲ್ಲ. ಅಲ್ಲಿಯೇ ಉಳಿದ ಪ್ರಶ್ನೆಗಳಿಗೆ ಉತ್ತರವನ್ನು ಟಿಕ್ ಮಾಡಲಾಗುತ್ತದೆ. ಇದರಲ್ಲಿ ಲೋಕಸೇವಾ ಆಯೋಗದ ಅಧಿಕಾರಿಗಳು ಕೂಡ ಶಾಮೀಲಾಗಿರುತ್ತಾರೆ ಎಂದು ದೂರಿದರು.

ವಿಧಿ ವಿಜ್ಞಾನ ಪ್ರಯೋಗಾಲಯದಲ್ಲಿ ಈ ಕುರಿತು ಪರೀಕ್ಷೆ ನಡೆಸಲಾಗಿದೆ. ಅಭ್ಯರ್ಥಿ ಮತ್ತು ಮಧ್ಯವರ್ತಿ ಬಳಸಿರುವ ಪೆನ್‌ಗಳಲ್ಲಿ ವ್ಯತ್ಯಾಸ ಇರುವುದರ ಬಗ್ಗೆ ಪತ್ತೆ ಮಾಡಲಾಗಿದೆ. ಲೋಕಸೇವಾ ಆಯೋಗದ ಅಧಿಕಾರಿ–ನೌಕರರ ಸಹಾಯವಿಲ್ಲದೆ ಇದನ್ನು ಮಾಡಲು ಸಾಧ್ಯವಿಲ್ಲ ಎಂದು ವಿಧಿ ವಿಜ್ಞಾನ ವರದಿಯಲ್ಲಿ ತಿಳಿಸಲಾಗಿದೆ. ಇದನ್ನು ಸರ್ಕಾರವೇ ಒಪ್ಪಿಕೊಂಡಿದೆ ಎಂದರು.

384 ಗ್ರೂಪ್ ಎ ಮತ್ತು ಬಿ ಹುದ್ದೆಗಳಿಗೆ ನಡೆದ ಪೂರ್ವಭಾವಿ ಪರೀಕ್ಷೆಯಲ್ಲಿ ಇಂಗ್ಲಿಷ್–ಕನ್ನಡ ಭಾಷಾಂತರದಲ್ಲಿ 59 ಪ್ರಶ್ನೆಗಳಲ್ಲಿ ತಪ್ಪುಗಳಾಗಿವೆ. ಲೋಕಸೇವಾ ಆಯೋಗದ ಕಳ್ಳರು ಮೊದಲಿಗೆ ಇಂಗ್ಲಿಷ್‌ನಲ್ಲಿ ಬರೆದು, ನಂತರ ಕನ್ನಡಕ್ಕೆ ಭಾಷಾಂತರ ಮಾಡಿದ್ದಾರೆ. ಮೊದಲು ಕನ್ನಡದಲ್ಲೇ ಪ್ರಶ್ನೆ ತಯಾರಿಸಬೇಕೆಂಬ ನಿಯಮವೇ ಇದೆ. ಇದಾದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಟ್ವೀಟ್‌ನಲ್ಲಿ ಪ್ರತಿಕ್ರಿಯೆ ನೀಡಿದ್ದರು. ಬಳಿಕ ಐಎಎಸ್ ಗಂಗಾಧರ್ ಈ ಕುರಿತು ಟ್ವೀಟ್ ಮಾಡಿದ್ದು, ಇದನ್ನು ಎಂಜಾಯ್ ಮಾಡಿದ್ದೇನೆ ಎಂದು ಹೇಳಿದ್ದಾರೆ. ಇದು ಕನ್ನಡಿಗರಿಗೆ ಮಾಡಿದ ಅಪಮಾನ. ಕನ್ನಡಕ್ಕೆ ದ್ರೋಹ ಮಾಡಿದ ಈ ಅಧಿಕಾರಿಯ ನಾಲಿಗೆ ಸೀಳಿ ಹಾಕಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಪರೀಕ್ಷೆ ನಡೆಸಲು 15 ಕೋಟಿ ರೂ. ನೀಡಲಾಗಿದೆ. ಮರು ಪರೀಕ್ಷೆಗೆ ಮತ್ತೆ ಅಷ್ಟೇ ಹಣ ನೀಡಲಾಗಿದೆ. ಮರು ಪರೀಕ್ಷೆಯಲ್ಲಿ ಮತ್ತೆ 79 ತಪ್ಪುಗಳಾಗಿವೆ. ಈ ಪ್ರಶ್ನೆಪತ್ರಿಕೆಗಳಲ್ಲಿ ಕನ್ನಡವನ್ನು ಎರಡನೇ ದರ್ಜೆಯಾಗಿ ನೋಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕನ್ನಡ ಕಾವಲು ಸಮಿತಿಯ ಅಧ್ಯಕ್ಷರಾಗಿದ್ದರು. ಅವರು ವ್ಯಾಕರಣದ ಬಗ್ಗೆ ಮಾತನಾಡುತ್ತಾರೆ. ಸುಮಾರು 2 ಲಕ್ಷ ಯುವಜನರು ನಿರುದ್ಯೋಗಿಗಳಾಗಿದ್ದು, ಪರೀಕ್ಷೆಗಾಗಿ ಓದುತ್ತಿದ್ದಾರೆ. ಅವರ ಭಾವನೆಗಳನ್ನು ಸರ್ಕಾರ ಅರ್ಥ ಮಾಡಿಕೊಳ್ಳಬೇಕು ಎಂದರು.

ಪರೀಕ್ಷೆಯಲ್ಲಿ 30 ಕೋಟಿ ರೂ. ಹಣ ಹಾಳು ಮಾಡಿದ ಅಧಿಕಾರಿಯನ್ನು ಅಮಾನತು ಮಾಡಬೇಕು. ಮರು ಪರೀಕ್ಷೆ ನಡೆಸಬೇಕು. ಅಭ್ಯರ್ಥಿಗಳ ವಯೋಮಿತಿಗೆ ವಿನಾಯಿತಿ ನೀಡಬೇಕು. ಅಕ್ರಮದ ವಿರುದ್ಧ ತನಿಖೆ ಮಾಡಬೇಕು. ಕನ್ನಡ ಅಪಮಾನ ಮಾಡಿದ ಅಧಿಕಾರಿಯ ವಿರುದ್ಧ ಕ್ರಮ ವಹಿಸಬೇಕು ಎಂದು ಆರ್.ಅಶೋಕ್ ಆಗ್ರಹಿಸಿದರು.

**ಭಾರತ ಸರ್ಕಾರದ ವಿಕಸಿತ್ ಭಾರತದ ದೃಷ್ಟಿಕೋನಕ್ಕೆ ಅನುಗುಣವಾಗಿ, ಯೂನಿಯನ್ ಬ್ಯಾಂಕ್ ಅಫ್ ಇಂಡಿಯಾ ದೇಶಾದ್ಯಂತ ಒಂದು ವಾರದ ಅವಧಿಯ ಮೆಗಾ ಎಮ್ ಎಸ್ ಎಮ್ ಇ ಔಟ್ರೀಚ್ ಶಿಬಿರವನ್ನು ಆರಂಭಿಸಿತು. ಬೆಂಗಳೂರಿನ ಈ ಔಟ್ರೀಚ್ ಕಾರ್ಯಕ್ರಮವನ್ನು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕಿ ಮತ್ತು ಸಿ ಇ ಒ ಮಣಿಮೇಖಲೈ ಎ ರವರು ಎಮ್ ಎಸ್ ಎಮ್ ಇ ಸಚಿವಾಲಯದ ಹಿರಿಯ ಅಧಿಕಾರಿಗಳು ಮತ್ತು ಮತ್ತು ಬ್ಯಾಂಕಿನ ಬೆಂಗಳೂರಿನ ವಲಯ ಮುಖ್ಯಸ್ಥರ ಸಮ್ಮುಖದಲ್ಲಿ ಉದ್ಘಾಟಿಸಿದರು. ಈ ಔಟ್ರೀಚ್ ಶಿಬಿರದಲ್ಲಿ ಬ್ಯಾಂಕುಗಳ ಗ್ರಾಹಕ ಸ್ನೇಹಿ ಎಂ ಎಸ್ ಎಮ್ ಇ ಉತ್ಪನ್ನಗಳು, ಸರ್ಕಾರಿ ಯೋಜನೆಗಳು ಮತ್ತು ಹಣಕಾಸು ಸೇರ್ಪಡೆಯನ್ನು ಪ್ರದರ್ಶಿಸಲಾಯಿತು**




Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com